ಸಂಪುಟ: 22, ಸಂಚಿಕೆ: 1, ಪುಟಗಳು: 8, ಬುಧವಾರ, 9 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ನಮ್ಮೆಲ್ಲ ಸಮಸ್ಯೆಗಳು ಪರಿಹಾರಗೊಳ್ಳುವ ತನಕ ಚಳವಳಿಗಳನ್ನು ಜೀವಂತವಾಗಿಟ್ಟಿರುವುದು ಅತ್ಯಗತ್ಯ.

। ಕುವೆಂಪು

### ಪಂಚಾಂಗ

(ಬುಧವಾರ 9, ಅಕ್ಟೋಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಆಶ್ವಯುಜ ಮಾಸ, ಶುಕ್ಲ ಪಕ್ಷ
- ವಾರ: ಬುಧವಾರ, ತಿಥಿ: ಷಷ್ಠಿ
- ನಕ್ಷತ್ರ: ಮೂಲ
- ರಾಹುಕಾಲ: 12.10 ರಿಂದ 1.39
- ಗುಳಿಕಕಾಲ: 10.40 ರಿಂದ 12.10
- ಯಮಗಂಡಕಾಲ: 7.41 ರಿಂದ 9.11





ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

## ಬೆಂ ವಿಮಾನ ನಿಲ್ದಾಣದಲ್ಲಿ ದಸರಾ ವೈಭವ







**ಬೆಂಗಳೂರು:** ನಾಡಿನ ಎಲ್ಲಡೆ ನವರಾತ್ರಿ ಹಬ್ಬದ ಸಡಗರ ಮನೆ ಮಾಡಿದೆ. ನಾಡಹಬ್ಬ ದಸರಾ ಅನ್ನು ಮೈಸೂರಿನಲ್ಲಿ ಬಹಳ ವಿಜೃಂಭಣೆಯಿಂದ ಆಚರಿಸುತ್ತಾರೆ. ಇತ್ತ ಬೆಂಗಳೂರಿನ ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ದಸರಾ ವೈಭವ ಕಳೆಕಟ್ಟಿದೆ.

ಸಾವಿರಾರು ಜನ ಪ್ರಯಾಣಿಸುವ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕನ್ನಡ ನಾಡಿನ ಸಾಂಸ್ಕೃತಿಕ ವೈಭವ ಅನಾವರಣವಾಗಿದೆ. ವಿಮಾನ ನಿಲ್ದಾಣದ ಟರ್ಮಿನಲ್ 1 ಹಾಗೂ ಟರ್ಮಿನಲ್ 2 ನಲ್ಲಿ ದಸರಾ ಹಬ್ಬದ ನಿಮಿತ್ತ ನಾಲ್ಕು ದಿನ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತಿವೆ.

ಡೊಳ್ಳು ಕುಣಿತ, ಗಾರುಡಿ ಕುಣಿತ, ಯಕ್ಷಗಾನ, ತಮಟೆ ವಾದ್ಯ, ದೇಶ-ವಿದೇಶಿ ಪ್ರಯಾಣಿಕರ ಕಣ್ಮನ ಸೆಳೆಯುತ್ತಿವೆ. ತಮಟೆ ವಾದ್ಯಕ್ಕೆ ಪ್ರಯಾಣಿಕರು ಹಾಗೂ ವಿಮಾನ ನಿಲ್ದಾಣದ ಸಿಬ್ಬಂದಿ ಕುಣಿದು ಕುಪ್ಪಳಿಸಿದರು.

ಪುಟ 2

## 'ಅಹಿಂದ' ನಾಯಕರ ಡಿನ್ನರ್ ಮೀಟಿಂಗ್ ರಾಜ್ಯ ರಾಜಕೀಯದಲ್ಲಿ ಸಂಚಲನ



**ಮೈಸೂರು:** ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆ ನಡೆಯುತ್ತಿರುವ ಹೊತ್ತಿನಲ್ಲೇ ಸಚಿವ ಸತೀಶ್ ಜಾರಕಿಹೊಳಿ ಸಿಎಂ ತವರು ಜಿಲ್ಲೆಗೆ ಭೇಟಿ ನೀಡಿ, ಸ್ಥಳೀಯ ಶಾಸಕರು ಹಾಗೂ ಸಚಿವರೊಂದಿಗೆ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಮಂಗಳವಾರ ಮೈಸೂರಿಗೆ ಭೇಟಿ ನೀಡಿದ್ದ ಸತೀಶ್ ಜಾರಕಿಹೊಳಿ ಸ್ಥಳೀಯ ಶಾಸಕರೊಂದಿಗೆ ಚರ್ಚೆ ನಡೆಸಿದ್ದಾರೆ. ಅಲ್ಲದೇ ಚಾಮರಾಜನಗರ ಸಂಸದ ಸುನೀಲ್ ಬೋಸ್ ಮನೆಯಲ್ಲಿ ಅಹಿಂದ ನಾಯಕರ ಡಿನ್ನರ್ ಮೀಟಿಂಗ್‌ನಲ್ಲೂ ಭಾಗಿಯಾಗಿದ್ದಾರೆ. ಡಿನ್ನರ್ ಸಭೆಯಲ್ಲಿ ಸಚಿವತ್ರಯರಾದ ಡಾ.ಹೆಚ್.ಸಿ ಮಹದೇವಪ್ಪ, ಗೃಹ ಸಚಿವ ಡಾ.ಜಿ ಪರಮೇಶ್ವರ್, ಸಚಿವ ಸತೀಶ್ ಜಾರಕಿಹೊಳಿ ಭಾಗಿಯಾಗಿದ್ದಾರೆ. ಮೂವರು ಹಿರಿಯ ಸಚಿವರು ಡಿನ್ನರ್ ನೆಪದಲ್ಲಿ ಮಹತ್ವದ ಸಭೆ ನಡೆಸಿದ್ದಾರೆ ಎನ್ನಲಾಗಿದೆ.

ಈ ಸಭೆಗಾಗಿಯೆ ಇಡೀ ದಿನ ಮೈಸೂರಿನಲ್ಲಿ ಸಚಿವ ಸತೀಶ್ ಜಾರಕಿಹೊಳಿ ಉಳಿದಿದ್ದರು. ಯಾವುದೇ ಅಧಿಕೃತ ಕಾರ್ಯಕ್ರಮ ಇರದಿದ್ದರೂ ಇಡೀ ದಿನ ಮೈಸೂರಿನಲ್ಲಿ ಇದ್ದು ರಾತ್ರಿ ಸಭೆಯಲ್ಲಿ ಪಾಲ್ಗೊಂಡಿದ್ದರು ಎಂದು ಆಪ್ತ ಮೂಲಗಳು ತಿಳಿಸಿವೆ. ಈ ಹಿನ್ನೆಲೆಯಲ್ಲಿ ಸಿಎಂ ಬದಲಾವಣೆ ಚರ್ಚೆ ವಿಚಾರದಲ್ಲಿ ಇದೀಗ ಡಿನ್ನರ್ ಮೀಟಿಂಗ್ ಸಹ ಮಹತ್ವ ಪಡೆದುಕೊಂಡಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿ ನಿವಾಸಿಗಳಿಗೆ ಗುಡ್‌ನ್ಯೂಸ್



**ಬೆಂಗಳೂರು:** ಹತ್ತಾರು ವರ್ಷಗಳಿಂದ ಕಾವೇರಿ ನೀರಿಗಾಗಿ ಕಾದು ಕುಳಿತಿದ್ದ ಬೆಂಗಳೂರು ಹೊರವಲಯದ ಜನಕ್ಕೆ ಕೊನೆಗೂ ಗುಡ್ ನ್ಯೂಸ್ ಸಿಕ್ಕಿದೆ. ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ಕಾವೇರಿ ಹರಿಯಲು ಮೂಹೂರ್ತ ಫಿಕ್ಸ್ ಆಗಿದೆ. ಹೌದು. ಇದೇ ಅಕ್ಟೋಬರ್ 16ರಂದು ಕಾವೇರಿ 5ನೇ ಹಂತದ ಯೋಜನೆಗೆ ಚಾಲನೆ ಸಿಗಲಿದ್ದು, ಬೆಂಗಳೂರು ಹೊರವಲಯದ ಹಳ್ಳಿ ನಿವಾಸಿಗಳ ಬಹುದಿನಗಳ ಕನಸು ನನಸಾಗಲಿದೆ. ಎಲ್ಲವೂ ಅಂದುಕೊಂಡಂತೆ ನಡೆದರೆ, ದಸರಾ ಉತ್ಸವ ಮುಗಿದ ಬಳಿಕ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳಿಗೆ ಕಾವೇರಿ ನೀರು ಹರಿಯಲಿದೆ.

» **ದಸರಾ ಮುಗಿದ ಬೆನ್ನಲ್ಲೇ ಹರಿಯಲಿದೆ ಕಾವೇರಿ**

2019 ರಲ್ಲಿ ಕಾವೇರಿ 5ನೇ ಹಂತ ಯೋಜನೆ ಕಾಮಗಾರಿ ಆರಂಭ ಮಾಡಿದ್ದ ಜಲಮಂಡಳಿ, ಇದೀಗ ಸುಮಾರು 5,500 ಕೋಟಿ ರೂ. ವೆಚ್ಚದಲ್ಲಿ ಯೋಜನೆ ಕಾಮಗಾರಿ ಮುಗಿಸಿದೆ.

ಪುಟ 2

### ನಿಗೂಢವಾಗಿ ನೆಲೆಸಿದ್ದ ಪಾಕ್ ದಂಪತಿ



**ಬೆಂಗಳೂರು:** ಕಳೆದ ಮೂರು ವರ್ಷಗಳಿಂದಲೂ ಬೆಂಗಳೂರಿನ ಪೀಣ್ಯದಲ್ಲಿ ನಿಗೂಢವಾಗಿ ನೆಲೆಸಿದ್ದ ಪಾಕ್ ದಂಪತಿಯನ್ನು ಬಂಧಿಸಿರುವ ಬೆಂಗಳೂರು ಪೊಲೀಸರು ತನಿಖೆಯಲ್ಲಿ ಹಲವು ಸ್ಫೋಟಕ ಮಾಹಿತಿಗಳನ್ನು ಬಯಲಿಗೆಳೆದಿದ್ದಾರೆ.

ಇದೇ ಅಕ್ಟೋಬರ್ 3ರಂದು ಜಿಗಣಿ ಪೊಲೀಸರ ಬಲೆಗೆ ಬಿದ್ದಿದ್ದ ಪಾಕ್ ದಂಪತಿಯ ಬಗ್ಗೆ ಇದೀಗ ಬೆಂಗಳೂರು ನಗರ ಪೊಲೀಸರು ತೀವ್ರ ತನಿಖೆ ನಡೆಸುತ್ತಿದ್ದಾರೆ. ದಂಪತಿಯ ಪೂರ್ವಪರ ಮಾಹಿತಿ ಕಲೆ ಹಾಕುತ್ತಿದ್ದಾರೆ. ಪೊಲೀಸರ ತನಿಖೆ ವೇಳೆ ಕೆಲವು ರೋಚಕ ವಿಚಾರಗಳು ಬೆಳಕಿಗೆ ಬಂದಿವೆ.

ಕಳೆದ 3 ವರ್ಷಗಳಿಂದ ಪೀಣ್ಯದ ಆಂದ್ರಹಳ್ಳಿ ಮುಖ್ಯರಸ್ತೆ ಮನೆಯಲ್ಲಿ ವಾಸವಾಗಿದ್ದ ದಂಪತಿ ನಿಗೂಢವಾಗಿ ನೆಲೆಸಿದ್ದರು.

ಪುಟ 2

# ನಾಯಬ್ ಸಿಂಗ್ ಸೈನಿ ಸಿಎಂ

## ಅ.12ರಂದು ಪ್ರಮಾಣವಚನ ಸಾಧ್ಯತೆ | ಬಿಜೆಪಿಯಲ್ಲಿ ಸಂಭ್ರಮ, ಸಡಗರ



**ಹರ್ಯಾಣ:** ಹರ್ಯಾಣ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ಬಿಜೆಪಿ ಭರ್ಜರಿ ಗೆಲುವು ದಾಖಲಿಸಿದೆ. ಬಿಜೆಪಿ ಗೆಲುವಿನ ನಂತರವೇ ಸಿಎಂ ಯಾರಾಗುತ್ತಾರೆ ಎಂಬುದು ಬಹುತೇಕ ನಿರ್ಧಾರವಾಗಿದೆ. ನಾಯಬ್ ಸಿಂಗ್ ಹರ್ಯಾಣದ ಮುಂದಿನ ಮುಖ್ಯಮಂತ್ರಿಯಾಗಲಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಮೋಹನ್? ಲಾಲ್ ಬಧೋಲಿ ಮತ್ತು ನಾಯಬ್ ಸೈನಿ ಇಂದು ದೆಹಲಿಗೆ ತೆರಳುತ್ತಿದ್ದು, ಮೂಲಗಳಿಂದ ಬಂದಿರುವ ಮಾಹಿತಿ ಪ್ರಕಾರ, ಅಕ್ಟೋಬರ್ 12 ವಿಜಯದಶಮಿಯಂದು ನಾಯಬ್ ಸೈನಿ ಹರ್ಯಾಣದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಹರ್ಯಾಣ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿದ್ದು, ಇದೀಗ ಎಲ್ಲರ ಕಣ್ಣು ಮುಂದಿನ ಸರ್ಕಾರ ರಚನೆಯತ್ತ ನೆಟ್ಟಿದೆ. ಮುಖ್ಯಮಂತ್ರಿ ನೈಬ್ ಸೈನಿ ಜೊತೆಗೆ ಒಬ್ಬ ಅಥವಾ ಇಬ್ಬರು ಉಪಮುಖ್ಯಮಂತ್ರಿಗಳೂ ಇರಬಹುದು ಎಂದು ಹೇಳಲಾಗುತ್ತಿದೆ. ಇನ್ನೇನು ಕೆಲವೇ ದಿನಗಳಲ್ಲಿ ಸರ್ಕಾರ ರಚನೆಯಾಗಲಿದೆ ಎಂದು ಮೂಲಗಳು ತಿಳಿಸಿವೆ.

ಇದಕ್ಕೂ ಮೊದಲು, ಬಿಜೆಪಿಯ ಕೇಂದ್ರ ನಾಯಕತ್ವವು ಶಾಸಕರೊಂದಿಗೆ ಸಭೆ ನಡೆಸಲು ಹರ್ಯಾಣಕ್ಕೆ ವೀಕ್ಷಕರನ್ನು ಕಳುಹಿಸುತ್ತದೆ, ಇದರಿಂದಾಗಿ ಪಕ್ಷವು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಹುದ್ದೆಗೆ ಸರಿಯಾದ ಅಭ್ಯರ್ಥಿಯನ್ನು ಅಧಿಕೃತವಾಗಿ ಆಯ್ಕೆ ಮಾಡುತ್ತದೆ. ಅದರೊಂದಿಗೆ ಸಂಪುಟ ಸಚಿವರ ಪಟ್ಟಿಯನ್ನು ತಯಾರಿಸಲಾಗುವುದು.

ಹರ್ಯಾಣದಲ್ಲಿ ಗೆಲುವಿನ ನಂತರ ಪಕ್ಷದ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸಿದ ಪ್ರಧಾನಿ ನರೇಂದ್ರ ಮೋದಿ, ಹರ್ಯಾಣದಲ್ಲಿ ಸತತ ಮೂರನೇ ಬಾರಿಗೆ ಬಿಜೆಪಿಗೆ ಅಧಿಕಾರ ನೀಡುವ ಮೂಲಕ ಇತಿಹಾಸ ಸೃಷ್ಟಿಸಿದೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್ 18, 25 ಮತ್ತು ಅಕ್ಟೋಬರ್ 1 ರಂದು ಮೂರು ಹಂತಗಳಲ್ಲಿ ಮತದಾನ ನಡೆದರೆ, ಹರಿಯಾಣದಲ್ಲಿ ಅಕ್ಟೋಬರ್ 5 ರಂದು ಒಂದೇ ಹಂತದಲ್ಲಿ ಜನರು ಮತ ಚಲಾಯಿಸಿದ್ದರು. ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್ 18 ರಂದು ಮೊದಲ ಹಂತದಲ್ಲಿ 61.38 ಶೇಕಡಾ ಮತದಾನವಾಗಿದೆ,

ಪುಟ 2

## ಮುಡಾ ಸಂಕಷ್ಟದ ಬೆನ್ನಲ್ಲೇ ಸಿಎಂ ಬೆನ್ನಿಗೆ ನಿಂತ ಡಿಕೆ ಸಹೋದರರು! ಧಿಢೀರ್ ವರಸೆ ಬದಲಿಸಲು ಇದೆ ಬಲವಾದ ಕಾರಣ







**ಬೆಂಗಳೂರು:** ಮುಂದಿನ ಐದು ವರ್ಷಗಳ ಕಾಲ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಎಂಬ ಹೇಳಿಕೆಗಳು ಕೇಳಿ ಬಂದರೆ ಹಿಂದೆಲ್ಲ ಅದಕ್ಕೆ ತಿರುಗೇಟು ನೀಡುತ್ತಿದ್ದ ಕಾಂಗ್ರೆಸ್ ಮಾಜಿ ಸಂಸದ ಡಿಕೆ ಸುರೇಶ್ ಈಗ ವರಸೆ ಬದಲಿಸಿರುವುದು ಅಚ್ಚರಿಗೆ ಕಾರಣವಾಗಿದೆ. ಡಿಕೆ ಸುರೇಶ್ ಮಾತ್ರವಲ್ಲದೆ ಡಿಕೆ ಶಿವಕುಮಾರ್ ಸಹ ಸಿದ್ದರಾಮಯ್ಯ ಪರ ಬ್ಯಾಟಿಂಗ್ ಆರಂಭಿಸಿದ್ದಾರೆ. ಮುಡಾ ಹಗರಣ ಕರ್ನಾಟಕ ರಾಜಕೀಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿದ ಬೆನ್ನಲ್ಲೇ ಡಿಕೆ ಸಹೋದರ ಸಿದ್ದರಾಮಯ್ಯ ಪರ ಗಟ್ಟಿಯಾಗಿ ನಿಲ್ಲಲು ಮುಂದಾಗಿರುವುದು ಅಚ್ಚರಿಗೆ ಕಾರಣವಾಗಿದೆ.

ಪುಟ 2

## ಪಿಡಿಓ ವಿರುದ್ಧ ಪೊಲೀಸ್ ಠಾಣೆಗೆ ಮೇಲಾಧಿಕಾರಿಯಿಂದ ದೂರು ದಾವಣಗೆರೆಯಲ್ಲಿ ಲಕ್ಷ ಲಕ್ಷ ಗೋಲ್ ಮಾಲ್



**ದಾವಣಗೆರೆ:** ಆತ ಮಹಾ ಪ್ರಚಂಡ ಅಧಿಕಾರಿ. ಯಾವುದೇ ಗ್ರಾ.ಪಂನಲ್ಲಿ ಅಧಿಕಾರ ನಡೆಸಲಿ. ಅಲ್ಲೊಂದು ಯಡವಟ್ಟು ಮಾಡಿಯೇ ಹೋಗುವುದು ಸಂಪ್ರದಾಯ ಆಗಿದೆ. ಈತನ ಕಾಟಕ್ಕೆ ಬೇಸತ್ತು ಆ ಪಂಚಾಯತ್ ನಿಂದ ಈ ಪಂಚಾಯತ್. ಈ ಪಂಚಾಯತ್ ನಿಂದ ಆ ಪಂಚಾಯತ್ ಗೆ ವರ್ಗಾವಣೆ ಮಾಡುತ್ತಲೇ ಇದ್ದಾರೆ. ಆದರೆ ಆತ ತನ್ನ ಚಾಳಿ ಮಾತ್ರ ಬದಲಾಯಿಸುತ್ತಿಲ್ಲ. ಇದೀಗ ಈತನ ವಿರುದ್ಧ ಲಕ್ಷ ಲಕ್ಷ ಗೋಲ್ ಮಾಲ್ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ಪುಟ 2

## ಜಾತಿಗಣತಿ ಅನುಷ್ಠಾನಕ್ಕೆ ಶ್ರೀನಿವಾಸ್ ವಿರೋಧ



**ತುಮಕೂರು:** ಜಾತಿಗಣತಿ ವರದಿ ಅನುಷ್ಠಾನಕ್ಕೆ ತರುವ ವಿಚಾರದ ಕುರಿತು ಕಾಂಗ್ರೆಸ್ ಶಾಸಕ, ಮಾಜಿ ಸಚಿವ ಎಸ್‌ಆರ್ ಶ್ರೀನಿವಾಸ್ ವಿರೋಧ ವ್ಯಕ್ತಪಡಿಸಿದ್ದಾರೆ.

ಗುಬ್ಬಿ ಶಾಸಕ ಎಸ್‌ಆರ್ ಶ್ರೀನಿವಾಸ್ ಜಾತಿಗಣತಿ ಅನುಷ್ಠಾನ ವಿರೋಧಿಸಿದ್ದು, ವರದಿಯ ಬಗ್ಗೆ ಎಲ್ಲರೊಂದಿಗೆ ಚರ್ಚಿಸಿ ನಂತರ ಕ್ಯಾಬಿನೆಟ್‌ಗೆ ತರಲಿ ಎಂದು ಹೇಳಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೇಲ್ನೋಟಕ್ಕೆ ಇದು ಅವೈಜ್ಞಾನಿಕ ಜಾತಿಗಣತಿ. ಎಲ್ಲಾ ಸಮುದಾಯಕ್ಕೂ ಸಾಮಾಜಿಕ, ಶೈಕ್ಷಣಿಕ ನ್ಯಾಯ ಸಿಗಬೇಕು. ಆ ರೀತಿಯಲ್ಲಿ ವರದಿಯನ್ನು ಮತ್ತೊಮ್ಮೆ ತಯಾರಿಸಿ ಬಿಡುಗಡೆ ಮಾಡಲಿ ಎಂದರು.

ನಾನು ಹಿಂದೆ ಇದರ ಬಗ್ಗೆ ಒಂದು ಸಾರಿ ಪ್ರಸ್ತಾಪ ಮಾಡಿದ್ದೆ. ನಮ್ಮ ಒಕ್ಕಲಿಗರಲ್ಲಿ ಒಳಪಂಗಡಗಳು ಇವೆ. ಲಿಂಗಾಯತರಲ್ಲೂ ಒಳಪಂಗಡಗಳು ಇವೆ. ಕುಂಚಿಟಿಗರು ಕೇವಲ ಕುಂಚಿಟಿಗ ಅಂತ ಬರೆದಿರುತ್ತಾರೆ. ನಮ್ಮಲ್ಲಿ ಕುಂಚಿಟಿಗ ಒಕ್ಕಲಿಗ ಅಂತ ಬರೆದಿರಲ್ಲ. ಸರ್ಪ ಒಕ್ಕಲಿಗರು ಇದ್ದಾಗ ಕೇವಲ ಸರ್ಪರು ಅಂತ ಬರೆಯುತ್ತಾರೆ.

ಪುಟ 2

## ಡಿನ್ನರ್ ಮೀಟಿಂಗ್‌ನಲ್ಲಿ ಸಿಎಂ ಬದಲಾವಣೆ ವಿಚಾರ ಚರ್ಚೆ ನಡೆದಿಲ್ಲ



**ಮೈಸೂರು:** ಮಹದೇವಪ್ಪ ಮನೆಯಲ್ಲಿ ಡಿನ್ನರ್ ಮೀಟಿಂಗ್ ವೇಳೆ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಹದೇವಪ್ಪ ಮನೆಯಲ್ಲಿ ಡಿನ್ನರ್ ಏರ್ಪಾಡು ಮಾಡಲಾಗಿತ್ತು. ಊಟಕ್ಕೆ ಹೋಗಿದ್ದೆವು. ಯಾವ ಮೀಟಿಂಗ್ ಇಲ್ಲ, ಡಿನ್ನರ್ ಅಷ್ಟೇ. ಮೈಸೂರಿನ ಆತಿಥ್ಯ ಬಿಡುವುದಕ್ಕೆ ಆಗುತ್ತಾ? ಅದಕ್ಕೆ ಯಾವುದೇ ಅರ್ಥ ಕಲ್ಪಿಸುವ ಅಗತ್ಯ ಇಲ್ಲ. ಯಾವುದೇ ರಾಜಕೀಯ ಚರ್ಚೆ ಆಗಿಲ್ಲ. ಸಹಜವಾಗಿ ಊಟಕ್ಕೆ ಸೇರಿದ್ದೆವು ಎಂದು ತಿಳಿಸಿದರು. ಡಿನ್ನರ್‌ನಲ್ಲಿ ನಾನು, ಸತೀಶ್ ಜಾರಕಿಹೊಳಿ, ಮಹದೇವಪ್ಪ, ಶಾಸಕ ಎ.ಆರ್ ಕೃಷ್ಣಮೂರ್ತಿ ಭಾಗಿಯಾಗಿದ್ದೆವು. ಯಾವುದೇ ರಾಜಕೀಯ ಚರ್ಚೆ ಆಗಿಲ್ಲ.

ಪುಟ 2

## ಜಮ್ಮು-ಕಾಶ್ಮೀರದಲ್ಲಿ ಉಗ್ರರಿಂದ ಯೋಧರ ಅಪಹರಣ



**ಜಮ್ಮು:** ಜಮ್ಮು-ಕಾಶ್ಮೀರದ ಅನಂತನಾಗ್ ಪ್ರದೇಶದಲ್ಲಿ ಉಗ್ರರು ಇಬ್ಬರು ಯೋಧರನ್ನು ಅಪಹರಿಸಿದ್ದಾರೆ. ಓರ್ವ ಯೋಧ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಪೊಲೀಸರ ಜಂಟಿ ತಂಡವು ಪ್ರದೇಶದಲ್ಲಿ ದೊಡ್ಡ ಪ್ರಮಾಣದ ಶೋಧ ಕಾರ್ಯಾಚರಣೆ ನಡೆಸುತ್ತಿದೆ. ಯೋಧನ ಸುಳಿವು ಸಿಗದಂತೆ ಸುತ್ತಮುತ್ತಲ ಪ್ರದೇಶಗಳಲ್ಲಿ ಶೋಧ ನಡೆಸಲಾಗುತ್ತಿದೆ.

2020ರಲ್ಲಿ ಉಗ್ರರು ಇದೇ ರೀತಿಯ ಹೇಡಿತನ ನಡೆಸಿದ್ದರು. ನಂತರ ಕಾಶ್ಮೀರದಲ್ಲಿ ಟೆರಿಟೋರಿಯಲ್ ಆರ್ಮಿ ಯೋಧ ಶಾಕಿರ್ ಮಂಜೂರ್ ವೇಜ್ ಅವರನ್ನು ಅಪಹರಿಸಲಾಗಿತ್ತು. ಈ ಘಟನೆಯ ಐದು ದಿನಗಳ ನಂತರ, ಮನೆಯ ಬಳಿ ಶಾಕಿರ್ ಬಟ್ಟೆಗಳು ಸಿಕ್ಕಿದ್ದವು.

ನಂತರ 24 ವರ್ಷದ ಶಾಕಿರ್ ವೇಜ್ ದಕ್ಷಿಣ ಕಾಶ್ಮೀರದ ಶೋಪಿಯಾನ್‌ನ ಹರ್ಮಾನ್‌ನಲ್ಲಿರುವ ತನ್ನ ಮನೆಯ ಬಳಿ ನಾಪತ್ತೆಯಾಗಿದ್ದರು. ಬಕ್ರೀದ್‌ನಂದು ಶಾಕಿರ್ ತನ್ನ ಮನೆಗೆ ಹೋಗಿದ್ದ. ಅಪಹರಣದ ಜತೆಗೆ ಯೋಧನ ಕಾರನ್ನು ಉಗ್ರರು ಸುಟ್ಟುಹಾಕಿದ್ದಾರೆ. ಶಾಕಿರ್ ದಕ್ಷಿಣ ಕಾಶ್ಮೀರದ ಬಾಲಾಪುರದಲ್ಲಿ 162-ಟಿಎಯಲ್ಲಿ ನಿಯೋಜನೆಗೊಂಡಿದ್ದರು. ಸಾಕಷ್ಟು ಹುಡುಕಾಟ ನಡೆಸಿದರೂ ಅವರ ಗುರುತು ಪತ್ತೆಯಾಗಿರಲಿಲ್ಲ.

ಪುಟ 2

## ಕರ್ನಾಟಕದಲ್ಲಿ ಕೊನೆಗೂ ತಗ್ಗಿತು ಡೆಂಗ್ಯೂ ಅಬ್ಬರ ಆದರೂ ಆತಂಕ ಇದೆ ಎಂದ ಆರೋಗ್ಯ ಇಲಾಖೆ!



**ಬೆಂಗಳೂರು:** ಕರ್ನಾಟಕದಲ್ಲಿ ಜೂನ್‌ನಲ್ಲಿ 406 ರಷ್ಟು ಇದ್ದ ಡೆಂಗ್ಯೂ ಹಾಟ್‌ಸ್ಪಾಟ್‌ಗಳ ಸಂಖ್ಯೆ ಈಗ 12 ಕ್ಕೆ ಇಳಿದಿದೆ. ಆದರೆ, ಇತ್ತೀಚೆಗೆ ಮತ್ತೆ ಮಳೆಯಾಗಿದ್ದರಿಂದ ಸೋಂಕು ಹರಡದಂತೆ ವೈರಸ್ ಅನ್ನು ನಿಯಂತ್ರಣದಲ್ಲಿಡಲು ಕಟ್ಟುನಿಟ್ಟಾದ ಕ್ರಮಗಳನ್ನು ಮುಂದುವರೆಸಲಾಗುತ್ತಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ. ಬೆಂಗಳೂರಿನಲ್ಲಿ ಮಳೆಯ ನಂತರ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆಯ ಬಗ್ಗೆ ಎಚ್ಚರದಿಂದಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಟ್ಟುನಿಟ್ಟಾದ ಕ್ರಮಗಳನ್ನು ಮುಂದುವರಿಸಿದೆ ಎಂದು ಇಲಾಖೆಯ ಆಯುಕ್ತ ಶಿವಕುಮಾರ್ ಕೆಬಿ ತಿಳಿಸಿದ್ದಾರೆ.

ಪ್ರತಿ ತಿಂಗಳ ಮೊದಲ 15 ದಿನಗಳಲ್ಲಿ ಇಲಾಖೆಯ ಸ್ವಯಂಸೇವಕರು 90-95 ಲಕ್ಷ ಕುಟುಂಬಗಳನ್ನು ಒಳಗೊಂಡಂತೆ ಪರಿಶೀಲನೆ ನಡೆಸುತ್ತಾರೆ. ಸೊಳ್ಳೆಗಳ ಸಂತಾನೋತ್ಪತ್ತಿ ಸ್ಥಳಗಳು ಸ್ವಚ್ಛತೆ ಕಾಪಾಡದ ಪ್ರದೇಶಗಳನ್ನು ಗುರುತಿಸಿ ಅಂಥವರ ಮಾಲೀಕರ ವಿರುದ್ಧ ಕ್ರಮವನ್ನೂ ಕೈಗೊಳ್ಳಲಾಗುತ್ತಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ಹೊಂದಿರುವ ಆಸ್ತಿ ಮಾಲೀಕರಿಂದ 6.5 ಲಕ್ಷ ರೂ. ಮತ್ತು ಮಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ 35,000 ರೂ. ದಂಡವನ್ನು ಸಂಗ್ರಹಿಸಿದ್ದೇವೆ ಎಂದು ರಾಷ್ಟ್ರೀಯ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕೇಂದ್ರದ

ಪುಟ 2

## ನಾವು ದಿನನಿತ್ಯ ತಿನ್ನೋ ಅನ್ನ ಎಷ್ಟು ಸೇಫ್? ಕೃಷಿ ವಿವಿಯಿಂದ ಸ್ಫೋಟಕ ಮಾಹಿತಿ ಬಹಿರಂಗ!



**ಕೊಪ್ಪಳ:** ಇಂದು ನಾವು ತಿನ್ನೋ ಆಹಾರ ಎಷ್ಟು ಸುರಕ್ಷಿತವಾಗಿದೆ ಎಂಬುದನ್ನು ಯೋಚಿಸಬೇಕಾದ ಪರಿಸ್ಥಿತಿ ಬಂದೊದಗಿದೆ. ಹೌದು, ಸದ್ಯ ಕೃಷಿ ವಿವಿಯ ಅಧಿಕಾರಿಗಳು ಬಹಿರಂಗ ಪಡಿಸಿರುವ ವರದಿಯ ಪ್ರಕಾರ ನಾವು ತಿನ್ನೋ ಅನ್ನವೂ ವಿಷವಾಗುತ್ತಿದೆಯಾ ಎಂಬ ಭೀತಿ ಶುರುವಾಗಿದೆ.

ಕೊಪ್ಪಳ ಜಿಲ್ಲೆಯ ಗಂಗಾವತಿ ಭತ್ತದ ಖಣಜ ಅಂತಲೇ ಪ್ರಸಿದ್ಧಿ. ಇಲ್ಲಿನ ಅಕ್ಕಿ ದೇಶ-ವಿದೇಶಗಳಲ್ಲಿ ಮಾರಾಟ ಮಾಡಲಾಗುತ್ತದೆ. ಆದರೆ ಕೃಷಿ ವಿವಿಯು ಬಹಿರಂಗ ಪಡಿಸಿರುವ ಮಾಹಿತಿಯೊಂದು ಜನರನ್ನು ಆತಂಕಕ್ಕೀಡು ಮಾಡಿದೆ. ಜೊತೆಗೆ ಅನ್ನದ ರೂಪದಲ್ಲಿ ವಿಷ ನಮ್ಮ ದೇಹ ಸೇರುತ್ತಿದೆಯಾ ಎಂಬ ಭೀತಿ ಶುರುವಾಗಿದೆ. ಇತ್ತೀಚಿನ ದಿನಗಳಲ್ಲಿ ರೈತರು ಹೆಚ್ಚಿನ ಇಳುವರಿಯ ಆಸೆಗಾಗಿ ಹೆಚ್ಚಿನ ಪ್ರಮಾಣದ ರಾಸಾಯನಿಕಗಳ ಬಳಸುತ್ತಿರುವ ಹಿನ್ನೆಲೆ ಅನ್ನವೂ ವಿಷವಾಗಿ ಪರಿಣಮಿಸುತ್ತಿದೆ ಎನ್ನುವಂತಾಗಿದೆ. ಗಂಗಾವತಿ, ಸಿಂಧನೂರು, ಸಿರುಗುಪ್ಪ ಭಾಗದಲ್ಲಿ ರೈತರು ಹೆಚ್ಚಿನ ಪ್ರಮಾಣದ ರಾಸಾಯನಿಕ ಬಳಕೆ ಮಾಡುತ್ತಿರುವುದು ಇಷ್ಟೆಲ್ಲಾ ಅನುಮಾನಕ್ಕೆ ಕಾರಣವಾಗಿದೆ. ರಾಸಾಯನಿಕ ಬಳಕೆಯಿಂದ ಭೂಮಿ ಫಲವತ್ತತೆಯನ್ನೂ ಕಳೆದುಕೊಂಡಿದೆ.

ಪುಟ 2

# ಟಿಕೆಟ್‌ಗಾಗಿ ದೆಹಲಿಯಲ್ಲೇ ಬೀಡುಬಿಟ್ಟ ಸಿಪಿವೈ ಪಕ್ಷೇತರ ಸ್ಪರ್ಧೆಗೆ ಬೆಂಬಲಿಗರ ಒತ್ತಾಯ

**ರಾಮನಗರ:** ಚನ್ನಪಟ್ಟಣ ಉಪಚುನಾವಣೆ ಕಣ ರಂಗೇರಿದ್ದು, ಟಿಕೆಟ್‌ಗಾಗಿ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ದೆಹಲಿಯಲ್ಲೇ ಬೀಡುಬಿಟ್ಟಿದ್ದಾರೆ.ಎರಡನೇ ದಿನವೂ ಹೈಕಮಾಂಡ್ ನಾಯಕರ ಭೇಟಿಯಾಗಿ ಟಿಕೆಟ್ ಗಿಟ್ಟಿಸಲು ಕಸರತ್ತು ನಡೆಸುತ್ತಿರುವ ಸಿ.ಪಿ.ಯೋಗೇಶ್ವರ್, ಟಿಕೆಟ್ ನೀಡಲು ಹೆಚ್ಡಿಕೆ ಹಿಂದೇಟು ಹಾಕುತ್ತಿರುವ ಬಗ್ಗೆಯೂ ಹೈಕಮಾಂಡ್‌ಗೆ ಮನವರಿಕೆ ಮಾಡುತ್ತಿದ್ದಾರೆ. ಈ ಬಾರಿಯ ಸ್ಪರ್ಧೆಯ ಅನಿವಾರ್ಯತೆ ಹಾಗೂ ತಮ್ಮ ಮುಂದಿನ ನಿಲುವುಗಳ ಬಗ್ಗೆ ಹಿರಿಯ ನಾಯಕರಿಗೆ ಸ್ಪಷ್ಟಪಡಿಸಿ ಇಂದು ವಾಪಸ್ಸಾಗುವ ಸಾಧ್ಯತೆ ಇದೆ. ಇತ್ತ ಸಿಪಿವೈ ಪಕ್ಷೇತರರಾಗಿ ಸ್ಪರ್ಧೆ ಮಾಡುವಂತೆ ಬೆಂಬಲಿಗರು ಒತ್ತಾಯ ಮಾಡುತ್ತಿದ್ದಾರೆ.ಬಿಜೆಪಿ ನಾಯಕರನ್ನ ನಂಬಿ ಕೂತರೆ ನಿಮಗೆ ಉಳಿಗಾಲ ಇಲ್ಲ. ಪಕ್ಷೇತರರಾಗಿ ಸ್ಪರ್ಧೆ ಮಾಡಿ ಎಂದು ಅಭಿಯಾನ ನಡೆಸುತ್ತಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅಭಿಯಾನ ಮಾಡಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವಂತೆ ಆಗ್ರಹಿಸಿದ್ದಾರೆ. ಈ ಮೂಲಕ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಗೆ ಸೆಡ್ಡು ಹೊಡೆದು ಸಿಪಿವೈ ಪಕ್ಷೇತರ ಸ್ಪರ್ಧೆ ಮಾಡ್ತಾರಾ ಎಂಬ ಕುತೂಹಲ ಹೆಚ್ಚಾಗಿದ್ದು, ಸಿಪಿವೈ ನಡೆ ನಿಗೂಢವಾಗಿದೆ.



# ದೇಗುಲದ ಭದ್ರತಾ ಸಿಬ್ಬಂದಿಯ ಜಾತಿ ನಿಂದನೆ- ಅರ್ಚಕ ಅರೆಸ್ಟ್

**ತುಮಕೂರು:** ದೇವಸ್ಥಾನದ ಹುಂಡಿ ಮುಟ್ಟಿದ ದೇಗುಲದ ಭದ್ರತಾ ಸಿಬ್ಬಂದಿಯ ಜಾತಿ ನಿಂದನೆ ಮಾಡಿದ ಆರೋಪದ ಮೇರೆಗೆ ದೇವಸ್ಥಾನದ ಅರ್ಚಕನೋರ್ವನ ಬಂಧನವಾಗಿದೆ. ತುಮಕೂರು ಜಿಲ್ಲೆ ಕುಣಿಗಲ್ ಠಾಣಾ ವ್ಯಾಪ್ತಿಯ ಬೆಟ್ಟದ ರಂಗಸ್ವಾಮಿ ದೇವಸ್ಥಾನದಲ್ಲಿ ಈ ಘಟನೆ ನಡೆದಿದೆ. ಅರ್ಚಕ ರಾಕೇಶ್ ವಿರುದ್ಧ ದೇಗುಲದ ಭದ್ರತಾ ಸಿಬ್ಬಂದಿ ಪಾರ್ಥರಾಜು ಎಂಬುವವರು ದೂರು ನೀಡಿದ್ದರು. ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆ ಕಾಯ್ದೆ ಅಡಿ ಕುಣಿಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅದೇ ದಿನ ಮಧ್ಯಾಹ್ನ ಅರ್ಚಕ ರಾಕೇಶ್ ಕೋಲಿನಿಂದ ತನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಭದ್ರತಾ ಸಿಬ್ಬಂದಿ ದೂರಿನಲ್ಲಿ ತಿಳಿಸಿದ್ದಾರೆ. ಅರ್ಚಕ ಕೋಲಿನಿಂದ ಭದ್ರತಾ ಸಿಬ್ಬಂದಿಗೆ ಹೊಡೆಯುತ್ತಿರುವ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಇಲ್ಲಿ ನೀನು ಕುಳಿತುಕೊಳ್ಳುವಂತಿಲ್ಲ. ಇದು ಸರ್ಕಾರದ ದೇವಾಲಯ. ಇಲ್ಲಿಂದ ಹೋಗು ಎಂದು ಅರ್ಚಕ ಹೇಳಿರುವುದು ವೀಡಿಯೋದಲ್ಲಿ ಸೆರೆಯಾಗಿದೆ. ಈ ಆಧಾರದ ಮೇಲೆ ಅರ್ಚಕನನ್ನು ಕುಣಿಗಲ್ ಪೊಲೀಸರು ಬಂಧಿಸಿದ್ದಾರೆ.




# ಮೋದಿ ಹಳ್ಳಿ-ಹಳ್ಳಿಗೆ ಹೋಗಿ ಕರ್ನಾಟಕದ ವಿಚಾರ ಪ್ರಚಾರ ಮಾಡ್ತಾರೆ ಅದ್ಕೆ ಕಾಂಗ್ರೆಸ್‌ಗೆ ಹಿನ್ನಡೆ ಆಗುತ್ತೆ: ಕೋಳಿವಾಡ

**ಬೆಂಗಳೂರು:** ಪ್ರಧಾನಿ ಮೋದಿ ಹಳ್ಳಿ-ಹಳ್ಳಿಗೆ ಹೋಗಿ ಕರ್ನಾಟಕದ ವಿಚಾರ ಪ್ರಚಾರ ಮಾಡ್ತಾರೆ, ಅದಕ್ಕೆ ಕಾಂಗ್ರೆಸ್‌ಗೆ ಹಿನ್ನಡೆ ಆಗುತ್ತದೆ ಎಂದು ಮಾಜಿ ಸ್ಪೀಕರ್ ಕೆ.ಬಿ ಕೋಳಿವಾಡ ಕಿಡಿಕಾರಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಅವರು, ನಾನು ಅವತ್ತೇ ಹೇಳಿದ್ದೆ. ಮೋದಿ ಹರಿಯಾಣದಲ್ಲಿ ಹಳ್ಳಿ ಹಳ್ಳಿಗೆ ಹೋಗಿ ಕರ್ನಾಟಕದ ವಿಚಾರ ಪ್ರಚಾರ ಮಾಡ್ತಾರೆ. ಆದ್ದರಿಂದ ಹಿನ್ನಡೆ ಆಗುತ್ತದೆ ಎಂದು ಹೇಳಿದ್ದೆ, ಈಗ ಅದು ಎಫೆಕ್ಟ್ ಆಗಿದೆ. ಹರಿಯಾಣದಲ್ಲಿ ಹಿನ್ನಡೆ ಆಗುತ್ತಿದೆ. ಪಾರ್ಟಿಗೆ ಮುಜುಗರ ಆಗಿದೆ ಎಂದು ಬೇಸರ ಹೊರಹಾಕಿದರು. ಸಿಎಂ ವಿಚಾರದಲ್ಲಿ ನಾನು ಅಂದು ಹೇಳಿದ ಹೇಳಿಕೆಗೆ ಈಗಲೂ ಬದ್ಧನಾಗಿದ್ದೇನೆ. ಪಕ್ಷಕ್ಕೆ ಧಕ್ಕೆಯಾದರೆ ನೋಟಿಸ್ ಕೊಡುತ್ತಾರೆ. ಪಕ್ಷದ ದೃಷ್ಟಿಯಿಂದ ಹೇಳಿದ್ದೇನೆ. ಇವತ್ತು ಹರಿಯಾಣ ಚುನಾವಣೆಯಲ್ಲಿ ಎಫೆಕ್ಟ್ ಆಗಿದೆ. ಪ್ರಚಾರದಲ್ಲಿ ಮೋದಿ ಕರ್ನಾಟಕದ ಬಗ್ಗೆ ಮಾತನಾಡಿದ್ದರು. ಪದೇ ಪದೇ ಮಾತನಾಡಿರುವುದು ಎಫೆಕ್ಟ್ ಆಗಿದೆ. ಇನ್ನೂ ಪೂರ್ಣ ಪ್ರಮಾಣದ ಫಲಿತಾಂಶ ಬಂದಿಲ್ಲ ಆದರೆ ಎಫೆಕ್ಟ್ ಆಗಿದೆ. ನಾನು ಸಕ್ರಿಯ ರಾಜಕಾರಣದಲ್ಲಿ ಇಲ್ಲ. ಆದರೆ ಪಕ್ಷ ಉಳಿಸಲು ಕೆಲಸ ಮಾಡುತ್ತೇನೆ ಎಂದು ಹೇಳಿದರು.

**ಜಾತಿ ಜನಗಣತಿ ವಿಚಾರ:** ಜಾತಿ ಜನಗಣತಿ ಮಾಡುವಾಗ ನಾನೇ ವೈಯಕ್ತಿಕವಾಗಿ ಹಲವು ಕಡೆ ಹೋಗಿದ್ದೇನೆ. ಪ್ರತಿಯೊಂದು ಮನೆಗೆ ಭೇಟಿ ನೀಡಿದ್ದೇನೆ. ನಾನು ಪ್ರತಿ ಊರು ಪ್ರತಿ ಹಳ್ಳಿ ಅಡ್ಡಾಡಿದ್ದೇನೆ. ಜಾತಿ ಜನಗಣತಿ ಸರಿಯಾಗಿ ಆಗಿದೆ. ಶಾಮನೂರು ಶಿವಶಂಕರಪ್ಪ ಅಡ್ಡಾಡಿದ್ದಾರಾ? ಮನೆಯಲ್ಲಿ ಕುಳಿತು ಮಾತನಾಡಿದ್ರೆ, ಆಗಲ್ಲ. ಆದಷ್ಟು ಬೇಗ ಜಾರಿ ಮಾಡಬೇಕು ಎಂದರು.

ಜಾತಿ ಉಪಜಾತಿಯನ್ನೂ ಕೂಡ ದಾಖಲು ಮಾಡಿಕೊಂಡಿದ್ದಾರೆ. ಬಹಳ ಉತ್ತಮವಾಗಿ ಜನಗಣತಿ ಮಾಡಿದ್ದಾರೆ ಅದನ್ನು ಆದಷ್ಟು ಬೇಗ ಜಾರಿ ಮಾಡಬೇಕು. ಜಾರಿ ಮಾಡುವುದು ಇನ್ನೂ ಮುಂದೂಡುವ ಅವಶ್ಯಕತೆ ಇಲ್ಲ. ಒಂದು ತಿಂಗಳು ಟೈಂ ಕೊಟ್ಟು ಏನಾದರೂ ಬದಲಾವಣೆ ಇದ್ದರೆ ಮಾಡಲಿ. ಸಬ್ ಕಮಿಟಿ ಮಾಡಿ ಇನ್ನೂ ಮುಂದೂಡುವ ಅವಶ್ಯಕತೆ ಇಲ್ಲ. ಕಾಂತರಾಜು ವರದಿ ಕೇವಲ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ, ಜನಗಣತಿ ಮಾತ್ರವಲ್ಲ. ಅದು ಜಾತಿ ಜನಗಣತಿ ಕೂಡ ಹೌದು. ವೈಜ್ಞಾನಿಕ ಅವೈಜ್ಞಾನಿಕ ಎಂದರೆ ಏನೂ ಅಂತ ಅರ್ಥ ಆಗುತ್ತಿಲ್ಲ. ಇದರಿಂದ ಯಾವುದೇ ಸಮುದಾಯಕ್ಕೆ ಅನ್ಯಾಯ ಆಗುತ್ತದೆ ಎಂದು ನನಗೆ ಅನಿಸುವುದಿಲ್ಲ ಎಂದು ತಿಳಿಸಿದರು.

# ಅಪಘಾತದಲ್ಲಿ ಮಹಿಳೆ ಸ್ಥಳದಲ್ಲೇ ಸಾವು



**ಬೆಂಗಳೂರು:** ಬಿಎಂಟಿಸಿ ಬಸ್‌ಗೆ ಬೈಕ್ ಡಿಕ್ಕಿಯಾಗಿ ಮಹಿಳೆ ಸ್ಥಳದಲ್ಲೇ ಸಾವಾಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

25 ವಯಸ್ಸಿನ ಮೋನಿಕಾ ಮೃತ ಮಹಿಳೆ. ಬಿಎಂಟಿಸಿಗೆ ಡಿಕ್ಕಿ ಹೊಡೆದ ರಭಸಕ್ಕೆ ಬೈಕ್ ಜೊತೆಗೆ ಮಹಿಳೆ ಬಸ್‌ನ ಬಲಭಾಗಕ್ಕೆ ಬಿದ್ದಿದ್ದಾರೆ. ಪರಿಣಾಮ ಎದುರುಗಡೆಯಿಂದ ಬರುತ್ತಿದ್ದ ಕಾರು ಬಸ್‌ಗೆ ಗುದ್ದಿ ರಸ್ತೆಯಲ್ಲಿ ಬಿದ್ದ ಮಹಿಳೆಯ ಮೇಲೆ ಹರಿದಿದೆ. ಘಟನೆಯಲ್ಲಿ ಬೈಕ್ ನಜ್ಜುಗುಜ್ಜಾಗಿದ್ದು, ಮಹಿಳೆ ಮೃತಪಟ್ಟಿದ್ದಾರೆ.

ಮೋನಿಕಾ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡಿಕೊಂಡಿದ್ದರು. ಕೆಲಕ್ಕೆ ಹೋಗುವಾಗ ಘಟನೆ ಸಂಭವಿಸಿದೆ. ಬಿಎಂಟಿಸಿ ಬಸ್ ಉಲ್ಲಾಳ ಉಪನಗರ ಬಸ್ ನಿಲ್ದಾಣದಿಂದ ಮೆಜೆಸ್ಟಿಕ್ ಕಡೆ ಹೋಗುವಾಗ ಉಲ್ಲಾಳ ಕೆರೆಯ ಬಳಿ ಅಪಘಾತ ಸಂಭವಿಸಿದೆ. ಸಿಂಗಲ್ ರೋಡ್‌ನಲ್ಲಿ ಆತುರವಾಗಿ ಬಂದ ಮಹಿಳೆ ಎದುರುಗಡೆಯಿಂದ ಬರುತ್ತಿದ್ದ ನಮ್ಮ ಬಸ್ ಮುಂಭಾಗಕ್ಕೆ ಡಿಕ್ಕಿ ಹೊಡೆದಿದ್ದಾರೆ. ರಸ್ತೆ ಮೇಲೆ ಬಿದ್ದಾಗ ಎದುರುಗಡೆ ಬರುತ್ತಿದ್ದ ಕಾರು ಹರಿದು ಮಹಿಳೆ ಮೃತಪಟ್ಟಿದ್ದಾರೆ. ಘಟನೆಯಲ್ಲಿ ನಮ್ಮದೇನು ತಪ್ಪಿಲ್ಲ ಎಂದ ಚಾಲಕ ಸುರೇಶ್ ಹೇಳಿದ್ದಾರೆ. ಘಟನೆ ಸಂಬಂದ ಮೃತ ಮಹಿಳೆ ಮೋನಿಕಾ ಸಂಬಂಧಿಕರು ಕೊಟ್ಟ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ. ಬಿಎಂಟಿಸಿ ಬಸ್ ಹಾಗೂ ಕಾರನ್ನು ವಶಕ್ಕೆ ಪಡೆದು ತನಿಖೆ ನಡೆಸಲಾಗುತ್ತಿದೆ.

# ಪ್ರಧಾನಿ ಮೋದಿ ಭೇಟಿಯಾದ ಸೋಮಣ್ಣ: 30 ನಿಮಿಷಗಳಲ್ಲಿ ಏನೆಲ್ಲಾ ಚರ್ಚೆ?



**ನವದೆಹಲಿ:** ಕೇಂದ್ರ ರೈಲ್ವೆ ಮತ್ತು ಜಲ ಶಕ್ತಿ ರಾಜ್ಯ ಖಾತೆಯ ಸಚಿವ ವಿ.ಸೋಮಣ್ಣ ಅವರು ನವದೆಹಲಿಯಲ್ಲಿ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ ಸುದೀರ್ಘ 30 ನಿಮಿಷಗಳ ಕಾಲ ಚರ್ಚೆ ಮಾಡಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ರಾಜ್ಯದ ಸರ್ವಾಂಗೀಣ ಅಭಿವೃದ್ದಿಯ ಬಗ್ಗೆ ಚರ್ಚಿಸಿದ್ದು, ಕಳೆದ ಮೂರು ತಿಂಗಳಲ್ಲಿ ರಾಜ್ಯದಲ್ಲಿ ರೈಲ್ವೆ ಅಭಿವೃದ್ದಿಯ ಕುರಿತಾಗಿ ತೆಗೆದುಕೊಂಡ ಕ್ರಮಗಳ ಬಗ್ಗೆ ಸೋಮಣ್ಣ ಅವರು ಪ್ರಧಾನಮಂತ್ರಿಗಳಿಗೆ ವಿವರಿಸಿದ್ದಾರೆ.

**30 ನಿಮಿಷಗಳಲ್ಲಿ ಏನೆಲ್ಲಾ ಚರ್ಚೆ?:** ಬೆಂಗಳೂರು ಸಬ್ ಅರ್ಬನ್ ರೇಲ್ವೆ, ವರ್ತುಲ್ ರೇಲ್ವೆ ಇತ್ಯಾದಿಗಳ ಬಗ್ಗೆ 2 ಸುತ್ತಿನ ಸಭೆ ನಡೆಸಿರುವ ಬಗ್ಗೆ ಹಾಗೂ ಕಳೆದ ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದ ತುಮಕೂರು-ರಾಯದುರ್ಗ ರೈಲ್ವೆ ಮಾರ್ಗ ಭೂಸ್ವಾಧಿನ ಪ್ರಕ್ರಿಯೆಯನ್ನು ಕೇವಲ 3 ತಿಂಗಳ ಅವಧಿಯಲ್ಲಿ ರಾಜ್ಯದ ಬಹುತೇಕ ಎಲ್ಲಾ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ, ರೈಲ್ವೆ ಇಲಾಖೆಗೆ ಸಂಬಂಧಪಟ್ಟ ಪ್ರಗತಿ ಪರಿಶೀಲನಾ ಸಭೆ ನಡೆಸಿ ಶೇ.90 ಕ್ಕಿಂತಲೂ ಮಿಗಲಾಗಿ ಮುಗಿಸಿರುವ ಬಗ್ಗೆ ಪ್ರಧಾನ ಮಂತ್ರಿಗಳಿಗೆ ವಿವರಿಸಿದ್ದಾರೆ. ಅಷ್ಟೇ ಅಲ್ಲ, ರೈಲ್ವೆ ಅಧಿಕಾರಿ ಮತ್ತು ಜಿಲ್ಲಾಡಳಿತದ ಉತ್ತಮ ಕಾರ್ಯವೈಖರಿಯ ಬಗ್ಗೆಯೂ ಪ್ರದಾನ ಮಂತ್ರಿಗಳ ಗಮನ ಸೆಳೆದಿದ್ದು, ಈ ಬಗ್ಗೆ ಮೋದಿ ಅವರು ಅತ್ಯಂತ ಹರ್ಷ ವ್ಯಕ್ತಪಡಿಸಿದ ಕುರಿತು ಕೇಂದ್ರ ಸಚಿವ ಸೋಮಣ್ಣ ತಿಳಿಸಿದ್ದಾರೆ.

**ತುಮಕೂರು ರೈಲ್ವೆ ನಿಲ್ದಾಣಕ್ಕೆ ಡಾ. ಶಿವಕುಮಾರ್ ಮಹಾ ಸ್ವಾಮಿಜಿಯವರ ನಾಮಕರಣ ಮಾಡುವಂತೆ ಮನವಿ:** ಇದೇ ವೇಳೆ ತುಮಕೂರು ಜಿಲ್ಲೆಯ ಅಭಿವೃದ್ಧಿಯ ಕುರಿತಾಗಿ ಕೆಲವು ವಿಶೇಷ ಪ್ರಸ್ತಾವನೆಗಳನ್ನು ಪ್ರಧಾನ ಮಂತ್ರಿಗಳಿಗೆ ಮುಂದೆ ಮಂಡಿಸಿ, ತಮ್ಮ ಲೋಕಸಭಾ ಕ್ಷೇತ್ರದ ಸರ್ವೋತೋಮುಖ ಅಭಿವೃದ್ದಿಗೆ ವಿಶೇಷ ಅನುದಾನ ನೀಡುವಂತೆ ಮನವಿ ಮಾಡಿದ್ದಾರೆ. ತುಮಕೂರು ಜಿಲ್ಲೆಯ ರೈಲ್ವೆ ನಿಲ್ದಾಣದ ಅಭಿವೃದ್ದಿಗೆ 87 ಕೋಟಿ ರೂ. ಅನುದಾನ ನೀಡಿದ್ದು, ಈ ರೈಲ್ವೆ ನಿಲ್ದಾಣಕ್ಕೆ ಡಾ. ಶಿವಕುಮಾರ್ ಮಹಾ ಸ್ವಾಮಿಜಿಯವರ ನಾಮಕರಣ ಮಾಡುವಂತೆ ಮನವಿ ಮಾಡಿದ್ದಾರೆ.

ತುಮಕೂರು - ರಾಯದುರ್ಗ ಮತ್ತು ತುಮಕೂರು-ಚಿತ್ರದುರ್ಗ-ದಾವಣಗೆರೆ ರೈಲ್ವೆ ಮಾರ್ಗವನ್ನು ಜೂನ್ 2027ರಲ್ಲಿ ಲೋಕಾರ್ಪಣೆ ಮಾಡಲು ತುಮಕೂರಿಗೆ ಆಗಮಿಸುವಂತೆ ನರೇಂದ್ರ ಮೋದಿ ಅವರಿಗೆ ಆಹ್ವಾನ ನೀಡಿದರು. ಇದರ ಜೊತೆಗೆ ರೈಲ್ವೆ ಇಲಾಖೆಯಲ್ಲಿನ ಎಲ್ಲಾ ಅಭಿವೃದ್ಧಿಕಾರ್ಯಗಳಿಗೆ ಅತ್ಯಂತ ಸಹಕಾರ ನೀಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರ ಸಹಕಾರ ಮನೋಭಾವನೆಯನ್ನು ಕೇಂದ್ರ ಸಚಿವ ಸೋಮಣ್ಣನವರು ಪ್ರಧಾನಮಂತ್ರಿಯವರ ಭೇಟಿಯ ಸಂದರ್ಭದಲ್ಲಿ ವ್ಯಕ್ತಪಡಿಸಿದರು.

## ಜಮ್ಮು-ಕಾಶ್ಮೀರದಲ್ಲಿ ಜನ ನಮ್ಮನ್ನು ಬೆಂಬಲಿಸಿದ್ದಾರೆ

**ಬೆಳಗಾವಿ:** ಜಮ್ಮು-ಕಾಶ್ಮೀರದಲ್ಲಿ ದೊಡ್ಡ ಸಂಖ್ಯೆಯಲ್ಲಿ ಜನ ನಮ್ಮನ್ನು ಬೆಂಬಲಿಸಿದ್ದಾರೆ. ನಮ್ಮ ಅಸ್ತಿತ್ವ ಇಲ್ಲದ ರಾಜ್ಯದಲ್ಲಿ ನಮಗೆ ಈ ಸಲ ಹೆಚ್ಚಿನ ಸ್ಥಾನಗಳು ಬಂದಿವೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಮ್ಮ ಬಗ್ಗೆ ದೊಡ್ಡ ಪ್ರಮಾಣದ ಅಪಪ್ರಚಾರ ಇರುವ ರಾಜ್ಯದಲ್ಲಿ ಇಷ್ಟೊಂದು ದೊಡ್ಡ ಬೆಂಬಲ ಸಿಕ್ಕಿದೆ. ಬರುವ ದಿನಗಳಲ್ಲಿ ಪಕ್ಷವನ್ನು ಜಮ್ಮು-ಕಾಶ್ಮೀರದಲ್ಲಿ ಗಟ್ಟಿ ಮಾಡುತ್ತೇವೆ. ವಿರೋಧ ಪಕ್ಷವಾಗಿ ಆ ರಾಜ್ಯಕ್ಕೆ ಹೇಗೆ ನ್ಯಾಯ ಕೊಡಿಸಬೇಕೋ ಕೊಡಿಸುತ್ತೇವೆ ಎಂದರು. ಎರಡೂ ರಾಜ್ಯಗಳಲ್ಲಿ ಬಿಜೆಪಿಗೆ ಹಿನ್ನಡೆ ಆಗಲಿದೆ ಎಂದು ಸರ್ವೆ ವರದಿಗಳು ಹೇಳಿದ್ದವು. ಎರಡು ಸಲ ಅಧಿಕಾರ ನಡೆಸಿದ ಕಾರಣಕ್ಕೆ ಆಡಳಿತ ವಿರೋಧಿ ಅಲೆ ಇತ್ತು. ಆದರೆ ಹರಿಯಾಣ ಜನ ನಮ್ಮನ್ನು ಒಪ್ಪಿಕೊಂಡು, ಬಹುಮತ ಕೊಟ್ಟಿದ್ದಾರೆ. ಅಲ್ಲಿನ ಜನರಿಗೆ ನಾನು ಅಭಿನಂದಿಸುವೆ ಎಂದು ಹೇಳಿದರು.

# ಮೈಸೂರು ಲೋಕಸಭಾ ಕ್ಷೇತ್ರವನ್ನು ಸೋಲಲು ನಮ್ಮ ಅಭ್ಯರ್ಥಿಯೇ ಕಾರಣ



**ಮೈಸೂರು:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮೈಸೂರು ಜಿಲ್ಲೆ ಪ್ರವಾಸ ಕೈಗೊಂಡಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ, ಶಾಸಕ ಹರೀಶ್ ಗೌಡ ಅವರ ನಿವಾಸಕ್ಕೆ ಭೇಟಿ ನೀಡಿದರು. ಶಾಸಕ ಹರೀಶ್ ಗೌಡ ಜೊತೆ ಮೈಸೂರು ರಾಜಕಾರಣದ ಬಗ್ಗೆ ಚರ್ಚೆ ನಡೆಸಿದರು. ಈ ವೇಳೆ ಸತೀಶ್ ಜಾರಕಿಹೊಳಿ ಲೋಕಸಭೆ ಚುನಾವಣೆಯಲ್ಲಿ ಮೈಸೂರು ಕ್ಷೇತ್ರ ಗೆಲ್ಲಬಹುದಿತ್ತು, ಯಾಕೆ ಸಾಧ್ಯವಾಗಲಿಲ್ಲ ಎಂದು ಹರೀಶ್ ಗೌಡ ಅವರಿಗೆ ಪ್ರಶ್ನಿಸಿದರು.

ಇದಕ್ಕೆ, ಕಾಂಗ್ರೆಸ್ ಶಾಸಕ ಹರೀಶ್ ಗೌಡ ''ನಮ್ಮ ಪಕ್ಷದ ಅಭ್ಯರ್ಥಿ ಸರಿ ಇಲ್ಲದಿದ್ದಕ್ಕೆ ಮೈಸೂರು ಲೋಕಸಭಾ ಕ್ಷೇತ್ರ ಗೆಲ್ಲಲಿಲ್ಲ'' ಎಂದು ಹೇಳಿದ್ದಾರೆ. ಕಳೆದ ಲೋಕಾಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಕೆಪಿಸಿಸಿ ವಕ್ತಾರ ಎಂ.ಲಕ್ಷಣ್ ಸ್ಪರ್ಧೆ ಮಾಡಿದ್ದರು.

ಕಳೆದ ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಪ್ರಮುಖ ಕ್ಷೇತ್ರಗಳಲ್ಲಿ ಮೈಸೂರು ಕೂಡ ಒಂದಾಗಿತ್ತು. ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯಿಂದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಸ್ಪರ್ಧಿಸಿ ಗೆಲವು ಸಾಧಿಸಿದ್ದಾರೆ. ಇವರಿಗೆ ಪ್ರತಿಸ್ಪರ್ಧಿಯಾಗಿ ಕಾಂಗ್ರೆಸ್‌ನಿಂದ ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್ ಸ್ಪರ್ಧೆ ಮಾಡಿದ್ದರು.

ಹಳೇ ಮೈಸೂರು ಭಾಗದಲ್ಲಿ ಒಕ್ಕಲಿಗರ ವೋಟುಗಳು ನಿರ್ಣಾಯಕವಾಗಿವೆ. ಚುನಾವಣೆಯ ಸಂದರ್ಭದಲ್ಲಿ ಎಂ. ಲಕ್ಷ್ಮಣ್ ನಾನೂ ಒಕ್ಕಲಿಗ ಎಂದು ಬಿಂಬಿಸಿಕೊಂಡು ವೋಟು ಗಿಟ್ಟಿಸಿಕೊಳ್ಳುವ ಪ್ರಯತ್ನ ಮಾಡಿದ್ದರೂ ಸಹ ಅದು ಸಾಧ್ಯವಾಗಲಿಲ್ಲ. ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ ಅವರಿಗೆ ಸೋಲಾಯಿತು.

ಮುಖ್ಯಮಂತ್ರಿಗಳ ತವರು ಜಿಲ್ಲೆಯಾದ ಮೈಸೂರೂ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋಲಿಗೆ, ಅಭ್ಯರ್ಥಿ ಎಂ ಲಕ್ಷ್ಮಣ ಕಾರಣ ಎಂಬ ಶಾಸಕ ಹರೀಶ್‌ಗೌಡ ಹೇಳಿಕೆ ಸದ್ಯ ಸಂಚಲನ ಸೃಷ್ಟಿ ಮಾಡಿದೆ.

## ದಸರಾ ವೈಭವ

ಟರ್ಮಿನಲ್ 2ರಲ್ಲಿ ದಸರಾ ಸಂಭ್ರಮ ವೇದಿಕೆಯಲ್ಲಿ ವಿವಿಧ ಸಾಂಸ್ಕೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ದೇಶ ವಿದೇಶದಿಂದ ಬರುತ್ತಿರುವ ಪ್ರಯಾಣಿಕರು ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕಣ್ತುಂಬಿಕೊಂಡು ಮಸ್ತ್ ಎಂಜಾಯ್ ಮಾಡುತ್ತಿದ್ದಾರೆ.

ವಿಮಾನ ನಿಲ್ದಾಣದ ಟರ್ಮಿನಲ್ 1 ಹಾಗೂ ಟರ್ಮಿನಲ್ 2ರಲ್ಲಿ ದಸರಾ ಬೊಂಬೆಗಳನ್ನು ಇರಿಸಲಾಗಿದೆ. ನಮ್ಮ ನಾಡಿನ ಸಂಸ್ಕೃತಿಯನ್ನು ಪರಂಪರೆಗಳ ಬಿಂಬಿಸುವ ಬೊಂಬೆಗಳು ಪ್ರಯಾಣಿಕರನ್ನು ಆಕರ್ಷಿಸುತ್ತಿವೆ.

ಪ್ರಯಾಣಿಕರು ಬೊಂಬೆಗಳ ಬಳಿ ನಿಂತು ಪ್ರಯಾಣಿಕರು ಸೆಲ್ಫಿ ತೆಗೆದುಕೊಂಡು ಖುಷಿಪಟ್ಟರು. ವಿಮಾನ ನಿಲ್ದಾಣಕ್ಕೆ ಬಂದ ಪ್ರಯಾಣಿಕರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕೆಲ ಹೊತ್ತು ಕಂಡು ತಮ್ಮ ಊರುಗಳಿಗೆ ತೆರಳುತ್ತಿದ್ದಾರೆ.

## ರಾಜ್ಯ ರಾಜಕೀಯದಲ್ಲಿ ಸಂಚಲನ

**ಜಾರಕಿಹೊಳಿ ಭೇಟಿಯಾಗಿದ್ದ ವಿಜಯೇಂದ್ರ:** ಸೋಮವಾರವಷ್ಟೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಅವರ ಸರ್ಕಾರಿ ನಿವಾಸದಲ್ಲಿ ಭೇಟಿಯಾಗಿದ್ದರು. ಈ ಸಂದರ್ಭದಲ್ಲಿ ಶಿಕಾರಿಪುರದಲ್ಲಿ ಹೊಸದಾಗಿ ನಿರ್ಮಾಣವಾಗಲಿರುವ ಕುಟ್ರಳ್ಳಿ ಟೋಲ್‌ನಿಂದ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಯ ಬಗ್ಗೆ ಚರ್ಚೆ ನಡೆಸಿದರು.

## ನಾಯಬ್ ಸಿಂಗ್ ಸೈನಿ ಸಿಎಂ

ನಂತರ ಸೆಪ್ಟೆಂಬರ್ 25 ರಂದು ಎರಡನೇ ಹಂತದಲ್ಲಿ 57.31 ಶೇಕಡಾ ಮತ್ತು ಅಕ್ಟೋಬರ್ 1ರಂದು ಅಂತಿಮ ಹಂತದಲ್ಲಿ 65.48ರಷ್ಟು ಮತದಾನವಾಗಿದೆ.

10 ವರ್ಷಗಳ ಬಳಿಕ, 2019ರಲ್ಲಿ 370ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಜಮ್ಮು ಕಾಶ್ಮೀರದಲ್ಲಿ ಇದು ಮೊದಲನೆಯ ಚುನಾವಣೆಯಾಗಿದೆ. ಜಮ್ಮು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸಿದ್ದ ಸಂವಿಧಾನದ 370ನೇ ವಿಧಿಯ ರದ್ದತಿಯ ಬಳಿಕ ರಾಜ್ಯ ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ವಿಭಜನೆಗೊಂಡಿದೆ.

## ಇದೆ ಬಲವಾದ ಕಾರಣ

**ಡಿಕೆ ಸಹೋದರರ ಮಾತಿನ ಧಾಟಿಯೇ ಬದಲು!:** ಸಿದ್ದರಾಮಯ್ಯಗೆ ಮುಡಾ ಹಗರಣದ ಸಂಕಷ್ಟ ಹೆಚ್ಚಾಗಿರುವ ಬೆನ್ನಲ್ಲೇ ಸಾಲು ಸಾಲು ರಹಸ್ಯ ಸಭೆಗಳು ಕಾಂಗ್ರೆಸ್ ಪಕ್ಷದಲ್ಲಿ ನಡೆಯುತ್ತಿವೆ. ಒಂದೆಡೆ ಸಚಿವ ಸತೀಶ್ ಜಾರಕಿಹೊಳಿ ನಿವಾಸ ಎರಡು ದಿನಗಳ ಹಿಂದಷ್ಟೇ ಕೇಂದ್ರಬಿಂದುವಾಗಿ ಗಮನ ಸೆಳೆದಿದ್ದರೆ ಮತ್ತೊಂದೆಡೆ ಮೈಸೂರಿನಲ್ಲಿ ಮಂಗಳವಾರ ರಾತ್ರಿ ಸಚಿವ ಮಹದೇವಪ್ಪ ನಿವಾಸದಲ್ಲಿ ದಲಿತ ನಾಯಕರು ಡಿನ್ನರ್ ಮೀಟಿಂಗ್ ನಡೆಸಿದ್ದಾರೆ. ಈ ಎಲ್ಲ ಬೆಳವಣಿಗೆಗಳ ಮಧ್ಯೆ ಡಿಕೆ ಸಹೋದರರ ಮಾತಿನ ಧಾಟಿಯೇ ಬದಲಾಗಿದೆ. ಹಿಂದೆ, ಸಿದ್ದರಾಮಯ್ಯನವರೇ ಐದು ವರ್ಷ ಮುಖ್ಯಮಂತ್ರಿ ಎಂದರೆ ಉರಿದು ಬೀಳುತ್ತಿದ್ದ ಉಭಯ ನಾಯಕರು ಇದೀಗ, ಸಿದ್ದು ಪರ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಅವರೇ ಮುಂದಿನ ಐದು ವರ್ಷಗಳ ಕಾಲ ಮುಖ್ಯಮಂತ್ರಿ ಆಗಿರಲಿದ್ದಾರೆ ಎಂದೂ ಹೇಳುತ್ತಿದ್ದಾರೆ.

**ರಾಜಕೀಯ ತಂತ್ರಗಾರಿಕೆಯೇ ಕಾರಣ:** ಡಿಕೆ ಸುರೇಶ್ ಹಾಗೂ ಡಿಕೆ ಶಿವಕುಮಾರ್ ಈ ರೀತಿ ಮಾತಿನ ಧಾಟಿಯಲ್ಲಿ ಬದಲಾವಣೆ ಮಾಡಿಕೊಳ್ಳಲು ರಾಜಕೀಯ ತಂತ್ರಗಾರಿಕೆಯೇ ಕಾರಣ ಎಂದು ವಿಶ್ಲೇಷಿಸಲಾಗುತ್ತಿದೆ. ಸಿದ್ದರಾಮಯ್ಯ ಮುಂದಿನ ಡಿಸೆಂಬರ್ ತನಕವೂ ಗಟ್ಟಿಯಾಗಿದ್ದರೆ ಮಾತ್ರ ಡಿಕೆ ಶಿವಕುಮಾರ್‌ಗೆ ಅನುಕೂಲ. ಸಿದ್ದರಾಮಯ್ಯ ಮುಂದುವರಿದರೆ ಮಾತ್ರ ಅಧಿಕಾರ ಹಂಚಿಕೆಯ ಧ್ವನಿ ಎತ್ತಬಹುದು. ಸಿದ್ದರಾಮಯ್ಯ ಅರ್ಧದಲ್ಲೇ ಹಿಂದೆ ಸರಿದರೆ ಸಿಎಂ ಖುರ್ಚಿಗೆ ಬೇರೆಯವರು ಬರಬಹುದು. ಬೇರೆ ಸಮುದಾಯದ ನಾಯಕರು ಖುರ್ಚಿಗೆ ಬಂದರೆ ತಕ್ಷಣಕ್ಕೆ ಇಳಿಸುವುದು ಕಷ್ಟವಾಗಲಿದೆ.

**ಹೊಸ ಸಿಎಂ ಆದರೆ ಅಧಿಕಾರ ಹಂಚಿಕೆ ಕಷ್ಟ:** ಹೊಸ ಸಿಎಂ ಬಂದರೆ ಅಧಿಕಾರ ಹಂಚಿಕೆ ಸೂತ್ರ ಪಾಲನೆ ಮಾಡುವುದು ಕಷ್ಟಸಾಧ್ಯ. ಅದರಲ್ಲೂ ದಲಿತರು ಸಿಎಂ ಆಗಿ ಬಿಟ್ಟರೆ ಒಕ್ಕಲಿಗ ನಾಯಕ ಡಿಕೆ ಶಿವಕುಮಾರ್‌ಗೆ ಸಿಎಂ ಖುರ್ಚಿ ಕನಸಾಗಿಯೇ ಉಳಿಬಹುದು ಎಂಬ ಆತಂಕ ಡಿಕೆ ಸಹೋದರರಲ್ಲಿದೆ. ಇದೇ ಕಾರಣಕ್ಕೆ ಉಭಯ ನಾಯಕರು ತಮ್ಮ ಮಾತಿನ ವರಸೆ ಬದಲಿಸಿದ್ದಾರೆ ಎಂದು ರಾಜಕೀಯ ಪಡಸಾಲೆಯಲ್ಲಿ ವಿಶ್ಲೇಷಿಸಲಾಗುತ್ತಿದೆ.

ಬೇರೊಬ್ಬರು ಮುಖ್ಯಮಂತ್ರಿಯಾಗಿ ಹೊಸ ತಲೆನೋವು ಎದುರಿಸುವುದಕ್ಕಿಂತ ಹಳೆಯ ಅಧಿಕಾರ ಹಂಚಿಕೆ ಸೂತ್ರವೇ ಉತ್ತಮ ಎಂಬ ನಿರ್ಧಾರಕ್ಕೆ ಡಿಕೆ ಸಹೋದರರು ಬಂದಿದ್ದಾರೆ ಎನ್ನಲಾಗಿದೆ. ಹೀಗಾಗಿ ಉಭಯ ನಾಯಕರು ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿ ಮುಂದುವರಿಯಲಿದ್ದಾರೆ ಎಂದು ಮತ್ತೆ ಮತ್ತೆ ಹೇಳುತ್ತಿದ್ದಾರೆ ಎನ್ನಲಾಗಿದೆ.

## ಚರ್ಚೆ ನಡೆದಿಲ್ಲ

ಊಟದ ವೇಳೆ ಸಿಎಂ ಬದಲಾವಣೆ ಅದು ಇದು ಯಾವ ವಿಚಾರವೂ ಚರ್ಚೆ ಮಾಡಿಲ್ಲ. ವಿರೋಧ ಪಕ್ಷಗಳಿಗೆ ಸಿಎಂ ಬದಲಾವಣೆ ಮಾಡಿಸುವುದೇ ಕೆಲಸ. ಕಾಂಗ್ರೆಸ್‌ನಲ್ಲಿ ಯಾವ ಬದಲಾವಣೆ ಬಗ್ಗೆಯೂ ಚರ್ಚೆ ಆಗಿಲ್ಲ ಎಂದರು.

ಸಿಎಂ ಬದಲಾವಣೆ ಇಲ್ಲ, ಸಿದ್ದರಾಮಯ್ಯ ರಾಜೀನಾಮೆ ಕೊಡುವ ಅಗತ್ಯ ಇಲ್ಲ. ನಾವು ಆಗಾಗ ಈ ರೀತಿ ಸೇರುತ್ತಿರುತ್ತೇವೆ. ಅದಕ್ಕೆ ಬೇರೆ ಅರ್ಥ ಕಲ್ಪಿಸುವ ಅಗತ್ಯ ಇಲ್ಲ. 5 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿರುತ್ತಾರೆ ಎಂದು ತಿಳಿಸಿದರು. ದಲಿತ ಸಿಎಂ ಚರ್ಚೆ ವಿಚಾರವಾಗಿ ಪ್ರತಿಕ್ರಿಯಿಸಿ, ಸದ್ಯ ಈ ಬಗ್ಗೆ ಯಾವುದೇ ಚರ್ಚೆ ಇಲ್ಲ ಎಂದು ಹೇಳಿದರು.

## ಶ್ರೀನಿವಾಸ್ ವಿರೋಧ

ಅದ್ಯಾವುದು ಕೂಡ ಆಗ ನಮ್ಮ ಸಮುದಾಯದ ಪಟ್ಟಿಯಲ್ಲಿ ಬರಲ್ಲ. ಇವರು ವರದಿ ತಯಾರು ಮಾಡಿದವರು ಕೂಡಾ ಕುಂಚಿಟಿಗ ಅಂತ ಬರೆದುಕೊಂಡು ಹೋಗಿರುತ್ತಾರೆ. ನಮ್ಮಲ್ಲಿ ವಿರೋಧ ಯಾಕೆ ಅಂದರೆ ಒಟ್ಟಿಗೆ ಒಕ್ಕಲಿಗ ಅಂತ ಮಾಡಲಿ ಅಂತ. ಲಿಂಗಾಯತ ಸಮುದಾಯದಲ್ಲೂ ಸಹ ಅದೇ ರೀತಿ ಆಗಿರಬಹುದು. ಅವರಲ್ಲಿಯೂ ಅನೇಕ ಒಳಪಂಗಡಗಳು ಇವೆ. ಆದ್ದರಿಂದ ಅದನ್ನು ಸರಿಯಾದ ರೀತಿಯಲ್ಲಿ ಮಾಡಿದ್ದಾರಾ ಅನ್ನೋ ಅನುಮಾನ ಇದೆ. ಮಾಡದೇ ಇದ್ದಾಗ ಜನಾಂಗಕ್ಕೆ ಅನ್ಯಾಯ ಆಗುತ್ತೆ ಅನ್ನುವ ಕಳಕಳಿ ಎಲ್ಲರಲ್ಲಿ ಇದೆ. ಆ ದೃಷ್ಟಿ ಇಟ್ಟುಕೊಂಡು ಈ ಸಮುದಾಯಗಳು ವಿರೋಧ ವ್ಯಕ್ತಪಡಿಸ್ತಿದ್ದಾರೆ ಅಂತ ನನಗೆ ಅನಿಸುತ್ತಿದೆ. ವರದಿ ಯಾವ ರೀತಿ ತಯಾರು ಮಾಡಿದ್ದಾರೆ ಅನ್ನೋದು ಯಾರಿಗೂ ಗೊತ್ತಿಲ್ಲ. ಇದುವರೆಗೂ ಯಾರಿಗೂ ಗೊತ್ತಿಲ್ಲ. ಆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ. ಆ ರೀತಿಯಾದರೇ ಅನ್ಯಾಯ ಆಗುತ್ತದೆ ಎಂದರು.

ಸಿಎಲ್‌ಪಿ ಸಭೆಯಲ್ಲಿ ವರದಿ ಬಗ್ಗೆ ಚರ್ಚೆ ಆಗಲಿ ಎಂದು ಶಾಸಕರ ಒತ್ತಾಯ ವಿಚಾರವಾಗಿ ಪ್ರತಿಕ್ರಿಯಿಸಿ, ನಮ್ಮಲ್ಲಿ ಎಲ್ಲರಿಗೂ ಕೂಡ ಅದೊಂದು ದುಗುಡ ಇದೆ. ಯಾವ ರೀತಿಯಾಗಿ ಅವರು ತಯಾರು ಮಾಡಿದ್ದಾರೆ ಅನ್ನೊದು ನಮಗ್ಯಾರಿಗೂ ಸ್ಪಷ್ಟತೆ ಇಲ್ಲ. ಹಾಗಾಗಿ ಅದರ ಬಗ್ಗೆ ಸ್ಪಷ್ಟನೆ ನೀಡಿ, ಅದರ ಸಾಧಕ ಭಾದಕಗಳ ಬಗ್ಗೆ ಚರ್ಚೆ ಮಾಡಿ ಜಾರಿಗೆ ತರಬೇಕಾಗುತ್ತದೆ ಎಂದು ಹೇಳಿದರು.

ಎಲ್ಲೋ ಒಂದು ಕಡೆ ಕುಳಿತು ವರದಿ ತಯಾರಿಸಿದ್ದಾರೆ ಎಂಬ ಆರೋಪದ ಕುರಿತು ಮಾತನಾಡಿದ ಅವರು, ಇರಬಹುದು. ಅದನ್ನೆಲ್ಲಾ ನೋಡಿದಾಗ ಗೊತ್ತಾಗುತ್ತದೆ. ನಮ್ಮ ಊರು, ನಮ್ಮ ತಾಲೂಕು ತೆಗೆದುಕೊಂಡರೆ ನಮಗೆ ಸಂಪೂರ್ಣ ಮಾಹಿತಿ ಇರುತ್ತದೆ. ಅದನ್ನು ನಾವು ನೋಡಿದರೆ ಗೊತ್ತಾಗುತ್ತದೆ. ನಮ್ಮ ಬಳಿ ಎಲ್ಲಾ ಮಾಹಿತಿ ಇರುತ್ತದೆ. ಹೀಗಾಗಿ ಇದು ಸರಿಯೋ, ತಪ್ಪೋ ಅಂತ ವರದಿಯನ್ನು ನೋಡಿದ ತಕ್ಷಣ ಗೊತ್ತಾಗುತ್ತದೆ ಎಂದು ತಿಳಿಸಿದರು.

## ಲಕ್ಷ ಲಕ್ಷ ಗೋಲ್ ಮಾಲ್

ಇವರು ಮಾಡಿದ ಗೋಲ್ ಮಾಲ್ ಬಗ್ಗೆ ಇಲಾಖೆ ತನಿಖೆ ಮಾಡಿ ವರದಿ ಪಡೆದು ಪೊಲೀಸ್ ಠಾಣೆಗೆ ದೂರು ದಾಖಲಿಸಲಾಗಿದೆ.

ಹಾಲಿ ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕಿನ

**ಮೊದಲನೇ ಪುಟದಿಂದ...**

ದೊಣ್ಣೆಹಳ್ಳಿ ಗ್ರಾಪಂ ಪಿಡಿಓ ಟಿ. ಸಿದ್ದಪ್ಪ ಈ ಗೋಲ್ ಮಾಲ್ ನ ರೂವಾರಿ. ಇವರು ಅಧ್ಯಕ್ಷರ ಸಹಿ ತಾನೇ ಮಾಡಿ ತಮಗೆ ಬೇಕಾದ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡಿದ್ದಾರೆ. ಆದರೆ ಈ ಹಣವನ್ನು ಗ್ರಾ.ಪಂ ಪಿಡಿಓ ಸಿದ್ದಪ್ಪ ನುಂಗಿ ಹಾಕಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ದೊಣ್ಣೆಹಳ್ಳಿ ಪಂಚಾಯಿತ್ ಪಿಡಿಓ ಆಗಿರುವ ಟಿ.ಸಿದ್ದಪ್ಪ ಈ ಹಿಂದೆ ಜಗಳೂರು ತಾಲೂಕಿನ ಬಿಳಿಚೋಡು ಹಾಗೂ ಬಸವನಕೋಟೆ ಗ್ರಾ.ಪಂ ಕಾರ್ಯದರ್ಶಿ ಇದ್ದಾಗ 27 ಲಕ್ಷ ರೂಪಾಯಿ ವಂಚಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಈಗಿನ ಬಿಳಿಚೋಡು ಹಾಗೂ ಬಸವನಕೋಟೆ ಪಿಡಿಓಗಳು ವಂಚನೆ ಬಗ್ಗೆ ವರದಿ ನೀಡಿದ್ದಾರೆ. ಪಿಡಿಓ ಟಿ. ಸಿದ್ದಪ್ಪ ವಿರುದ್ಧ ಬಿಳಿಚೋಡು ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ಜಗಳೂರು ತಾಲೂಕು ಪಂಚಾಯಿತ್ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರಿಗೆ ಬಿಳಿಚೋಡು ಗ್ರಾ.ಪಂ ನಲ್ಲಿ ಕೆರೆ ಅಭಿವೃದ್ಧಿಗೆ 2.84 ಲಕ್ಷ ಹಣ ಬಂದಿತ್ತು. ಇದನ್ನ ಬೇರೆ ಕಾಮಗಾರಿ ಹೆಸರಿಗೆ ಹಾಕಿ ಟಿ.ಸಿದ್ದಪ್ಪ ಹಣ ದುರುಪಯೋಗ ಮಾಡಿಕೊಂಡಿದ್ದಾರೆ.

ಬಸವನಕೋಟೆ ಗ್ರಾ.ಪಂನಲ್ಲಿ ಅಧ್ಯಕ್ಷರ ಅಪ್ಪಣೆ ಇಲ್ಲದೇ ಲಕ್ಷಾಂತರ ರೂಪಾಯಿ ಗುತ್ತಿಗೆದಾರರಿಗೆ ಪಾವತಿ ಮಾಡಿದ್ದಾರೆ. ಸದ್ಯ ತನಿಖೆ ಮಾಡಿ ವರದಿ ನೀಡಿದ ಪ್ರಕಾರ ಒಟ್ಟು 27.51 ಲಕ್ಷ ರೂಪಾಯಿ ದುರುಪಯೋಗ ಪಡೆಸಿಕೊಂಡ ಆರೋಪ ಇವರ ಮೇಲಿದೆ. ಈ ಹಿಂದೆ ಕೂಡಾ ಇವರ ಮೇಲೆ ಹತ್ತಾರು ಆರೋಪಗಳು ಕೇಳಿ ಬಂದಿದ್ದವು. ಆದರೆ ಅಧಿಕೃತವಾಗಿ ದೂರು ದಾಖಲಾಗಿರಲಿಲ್ಲ. ಈಗ ಪ್ರತಿ ಗ್ರಾಮ ಪಂಚಾಯತಿ ಲೆಕ್ಕ ಪರಿಶೀಲನೆ ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಇದರಿಂದ ಸಿದ್ದಪ್ಪ ಮಾಡಿದ ಕರ್ಮಕಾಂಡಗಳು ಹೊರ ಬರುತ್ತಿವೆ. ಇತನ ವಿರುದ್ಧ ಇಲಾಖೆ ತನಿಖೆ ಕೂಡಾ ಶುರುವಾಗಿದೆ. ಸದ್ಯ ಪೊಲೀಸ್ ಠಾಣೆಗೆ ದೂರು ಮಾತ್ರ ದಾಖಲಾಗಿದೆ. ಇನ್ನೂ ಎಫ್ ಐಆರ್ ದಾಖಲಾಗಿ ಪೊಲೀಸರು ತನಿಖೆ ಆರಂಭಿಸಿದ್ರೆ ಇನ್ನಷ್ಟು ಪ್ರಕರಣಗಳು ಬೆಳಕಿಗೆ ಬರುವುದು ಖಚಿತ.

## ಮಾಹಿತಿ ಬಹಿರಂಗ!

ಜೊತೆಗೆ ಗ್ರಾಮದ ಜನರ ಆರೋಗ್ಯದ ಮೇಲೂ ಪರಿಣಾಮ ಬೀರುತ್ತಿದೆ. ಹೀಗಾಗಿ ರೈತರು ಅತಿಯಾದ ರಾಸಾಯನಿಕ ಬಳಕೆಯನ್ನು ನಿಲ್ಲಿಸಬೇಕು ಎಂದು ಕೃಷಿ ವಿಸ್ತಣಾಧಿಕಾರಿ ಎಂ.ವಿ ರವಿ ತಿಳಿಸಿದ್ದಾರೆ.

ಹೆಚ್ಚಿನ ರಾಸಾಯನಿಕ ಬಳಕೆಯಿಂದ ಹಲವು ಹಳ್ಳಿಯ ಜನರಲ್ಲಿ ಕ್ಯಾನ್ಸರ್‌ನಂತಹ ರೋಗಗಳು ಕಾಣಿಸಿಕೊಂಡಿವೆ. ಇದರ ಬಗ್ಗೆ ಜಿಲ್ಲಾಡಳಿತ ವರದಿ ತಯಾರಿಸಿದ್ದು, ಜನರಿಗೆ ರಾಸಾಯನಿಕಗಳಿಂದ ಹಾನಿಯಾಗುತ್ತಿರುವುದು ಬೆಳಕಿಗೆ ಬಂದಿದೆ. ಆದರೆ ಜಿಲ್ಲಾಡಳಿತ ಯಾವುದೇ ವರದಿಯನ್ನು ಬಹಿರಂಗಪಡಿಸಿಲ್ಲ, ಆದರೆ ರೈತರು ಯಥಾಸ್ಥಿತಿ ರಾಸಾಯನಿಕಗಳ ಬಳಕೆಯಲ್ಲಿ ನಿರತರಾಗಿರೋದು ಕಂಡು ಬರುತ್ತಿದೆ. ಸದ್ಯ ಈ ರಾಸಾಯನಿಕ ಬಳಕೆಯ ದುಷ್ಪರಿಣಾಮದ ಬಗ್ಗೆ ಸರ್ಕಾರ ಹಾಗೂ ಜಿಲ್ಲಾಡಳಿತ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಕೃಷಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ರೈತರು ಹೆಚ್ಚಿನ ಇಳುವರಿಯ ಉದ್ದೇಶದಿಂದ ರಾಸಾಯನಿಕಗಳ ಮೊರೆ ಹೋಗುತ್ತದ್ದಾರೆ. ಆದರೆ ಜನರಿಗೆ ಹಾನಿ ಉಂಟು ಮಾಡುವ ರಾಸಾಯನಿಕಗಳ ಮಾರಾಟಕ್ಕೆ ಜಿಲ್ಲಾಡಳಿಕ ಬ್ರೇಕ್ ಹಾಕಿ ಮುಂದಾಗುವ ಅನಾಹುತಗಳನ್ನ ತಪ್ಪಿಸಬೇಕಿದೆ.

## ಆರೋಗ್ಯ ಇಲಾಖೆ!

(ಎನ್‌ಸಿವಿಬಿಡಿಸಿ) ಉಪ ನಿರ್ದೇಶಕ ಡಾ.ಶರೀಫ್ ತಿಳಿಸಿರುವುದಾಗಿ 'ಟೈಮ್ಸ್ ಆಫ್ ಇಂಡಿಯಾ' ವರದಿ ಮಾಡಿದೆ. ರಾಜ್ಯದ ಪ್ರಸ್ತುತ 12 ಹಾಟ್‌ಸ್ಪಾಟ್‌ಗಳಲ್ಲಿ ಬಿಬಿಎಂಪಿಯಲ್ಲಿ ಒಂಬತ್ತು, ಕಲಬುರಗಿಯಲ್ಲಿ ಎರಡು ಮತ್ತು ರಾಯಚೂರಿನಲ್ಲಿ ಒಂದು ಹಾಟ್‌ಸ್ಪಾಟ್ ಸೇರಿವೆ ಎಂದು ಅವರು ತಿಳಿಸಿದ್ದಾರೆ.

**ಡೆಂಗ್ಯೂ ಹಾಟ್‌ಸ್ಪಾಟ್‌ಗೆ ಮಾನದಂಡವೇನು?:** 100 ಮೀಟರ್ ವ್ಯಾಪ್ತಿಯೊಳಗೆ ಕನಿಷ್ಠ ಎರಡು ಡೆಂಗ್ಯೂ ಪಾಸಿಟಿವ್ ಪ್ರಕರಣಗಳಿದ್ದಾಗ ಆ ಪ್ರದೇಶವನ್ನು ಹಾಟ್‌ಸ್ಪಾಟ್ ಎಂದು ಗುರುತಿಸಲಾಗುತ್ತದೆ. ಈ ವರ್ಷ ರಾಜ್ಯಾದ್ಯಂತ ಈವರೆಗೆ 66,784 ಸೊಳ್ಳೆ ನಿವಾರಕಗಳನ್ನು ವಿತರಿಸಲಾಗಿದೆ ಎಂದು ಇಲಾಖೆ ಮೂಲಗಳು ತಿಳಿಸಿವೆ.

ಆರೋಗ್ಯ ಇಲಾಖೆಯು ಸೊಳ್ಳೆಗಳ ನಿರ್ಮೂಲನೆಗೆ ಅಸ್ತಿತ್ವದಲ್ಲಿರುವ ಕ್ರೀಮ್‌ಗಳಿಗೆ ಪರ್ಯಾಯವಾಗಿ ಬೇವಿನ ಎಣ್ಣೆಯನ್ನು ಜನಪ್ರಿಯಗೊಳಿಸುತ್ತಿದೆ. ಇದು ಆರ್ಥಿಕವಾಗಿಯೂ ಜನರಿಗೆ ಅನುಕೂಲಕರವಾಗಿದೆ ಎಂದು ಇಲಾಖೆಯ ಮೂಲಗಳು ತಿಳಿಸಿವೆ. ಡೆಂಗ್ಯೂ ಪಾಸಿಟಿವ್ ರೋಗಿಗಳ ತಪಾಸಣೆ ಮತ್ತು ಅವರ ಮೇಲ್ವಿಚಾರಣೆಗಾಗಿ ಆರಂಭಿಸಲಾಗಿರುವ ಸಹಾಯವಾಣಿಗೆ ದಾಖಲೆ ಸಂಖ್ಯೆಯ 86,318 ಕರೆಗಳು ಬಂದಿವೆ ಎಂದು ಇಲಾಖೆ ತಿಳಿಸಿದೆ.

ಪ್ಯಾರೆಸಿಟಮಾಲ್, ಟೆಸ್ಟಿಂಗ್ ಕಿಟ್‌ಗಳು ಮತ್ತು ಇತರ ಔಷಧಿಗಳನ್ನು ಸಾಕಷ್ಟು ದಾಸ್ತಾನು ಇರಿಸಲಾಗಿದೆ. ಮೊದೆಲಲ್ಲ ದಿನಕ್ಕೆ 450 ಡೆಂಗ್ಯೂ ಜ್ವರ ಪ್ರಕರಣಗಳು ವರದಿಯಾಗುತ್ತಿದ್ದರೆ, ಈಗ ದಿನಕ್ಕೆ 90 ಕ್ಕೆ ಇಳಿದಿವೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಆಸ್ಪತ್ರೆಗಳು ಎಬಿಎಆರ್‌ಕೆ ನಿಧಿಯಡಿ ಔಷಧ ಖರೀದಿಸಲು ಅನುವು ಮಾಡಿಕೊಡಲಾಗಿದೆ ಎಂದೂ ಡಾ. ಷರೀಫ್ ಮಾಹಿತಿ ನೀಡಿದ್ದಾರೆ.

## ಯೋಧರ ಅಪಹರಣ

ಒಂದು ವರ್ಷದ ನಂತರ ಸೆಪ್ಟೆಂಬರ್‌ನಲ್ಲಿ ಶಕೀರ್‌ನ ಶವ ಪತ್ತೆಯಾಗಿತ್ತು. ಕಾಶ್ಮೀರದ ಕುಲ್ಗಾಮ್ ಜಿಲ್ಲೆಯಲ್ಲಿ ಶಾಕಿರ್ ವಾಗೆ ಮೃತದೇಹ ಪತ್ತೆಯಾಗಿದೆ. ತನಿಖೆಯ ನಂತರ ಪೊಲೀಸರು ಶಾಕಿರ್ ಕುಟುಂಬವನ್ನು ಸಂಪರ್ಕಿಸಿದರು. ಈ ವೇಳೆ ಮೃತದೇಹವನ್ನು ಗುರುತಿಸಿದಾಗ ಅದು ತನ್ನ ಮಗ ಶಾಕಿರ್ ಎಂದು ಪತ್ತೆಯಾಗಿದೆ ಎಂದು ಆತನ ತಂದೆ ಮಂಜೂರ್ ಅಹ್ಮದ್ ವಾಗೆ ತಿಳಿಸಿದ್ದಾರೆ.

ಇದಕ್ಕೂ ಮುನ್ನ ಆಗಸ್ಟ್ 27 ರಂದು ಅನಂತನಾಗ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಮೂವರು ಭಯೋತ್ಪಾದಕರನ್ನು ಬಂಧಿಸಿದ್ದರು. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್‌ನ ಅರಣ್ಯ ಪ್ರದೇಶದಿಂದ ಟೆರಿಟೋರಿಯಲ್ ಆರ್ಮಿಯ ಇಬ್ಬರು ಸೈನಿಕರನ್ನು ಭಯೋತ್ಪಾದಕರು ಅಪಹರಿಸಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಸುದ್ದಿ ಸಂಸ್ಥೆ ಎಎನ್‌ಐ ವರದಿ ಮಾಡಿತ್ತು.

## ಗುಡ್‌ನ್ಯೂಸ್

ಅ.16ರಂದು ಟಿಕೆ ಹಳ್ಳಿಯ ಜಲಮಂಡಳಿ ಆವರಣದಲ್ಲಿ ಸಿಎಂ, ಡಿಸಿಎಂ ಕಾವೇರಿ 5ನೇ ಹಂತ ಯೋಜನೆಗೆ ಚಾಲನೆ ನೀಡಲಿದ್ದಾರೆ.

ಈಗಾಗಲೇ ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿಗಳ ವ್ಯಾಪ್ತಿಯಲ್ಲಿ ಒಟ್ಟು 5 ಲಕ್ಷ ಸಂಪರ್ಕ ನೀಡಲು ಉದ್ದೇಶಿಸಲಾಗಿದೆ. ಈಗಾಗಲೇ 50 ಸಾವಿರಕ್ಕೂ ಹೆಚ್ಚು ನಿವಾಸಿಗಳು ನೀರಿನ ಸಂಪರ್ಕ ಹೊಂದಿದ್ದಾರೆ. ಮೊದಲ ಹಂತದಲ್ಲಿ 170 ಎಂಎಲ್‌ಡಿ ನೀರು ಪೂರೈಕೆಯಾಗಲಿದ್ದು, ಉಳಿದ ನೀರನ್ನು ಹಂತಹಂತವಾಗಿ ಪೂರೈಸಲು ಜಲ ಮಂಡಳಿ ನಿರ್ಧರಿಸಿದೆ. ಯಶವಂತಪುರ, ದಾಸರಹಳ್ಳಿ, ಬೊಮ್ಮನಹಳ್ಳಿ, ಮಹಾದೇವಪುರ, ಆರ್.ಆರ್ ನಗರ ವಿಧಾನಸಭಾ ಕ್ಷೇತ್ರದ ಹಳ್ಳಿಗಳಿಗೆ ಕಾವೇರಿ ನೀರು ಹರಿಯಲಿದೆ.

## ದಂಪತಿ

ಮನೆಯಿಂದ ಹೊರಗೆ ಬಾರದೇ ಒಳಗಡೆಯೆ ಇರುತ್ತಿದ್ದರು. ಪಾಕಿಸ್ತಾನ ಮೂಲದ ಸೈಯದ್ ತಾರೀಕ್ ತನ್ನ ಪತ್ನಿ ಹಾಗೂ ಮಗಳೊಂದಿಗೆ ಹೆಸರು ಬದಲಿಸಿಕೊಂಡು ಇಲ್ಲಿ ನೆಲೆಸಿದ್ದ. ಪೊಲೀಸರ ತನಿಖೆ ವೇಳೆ ರಹಸ್ಯವಾಗಿ ನೆಲೆಯೂರಿದ್ದು ಬೆಳಕಿಗೆ ಬಂದಿದೆ.

2014ರಲ್ಲಿ ಭಾರತಕ್ಕೆ ಎಂಟ್ರಿಯಾಗಿದ್ದ ಈ ದಂಪತಿ, 2019 ರಲ್ಲಿ ಬೆಂಗಳೂರಿಗೆ ಬಂದಿದ್ದರು. ಹೆಸರು ಬದಲಿಸಿಕೊಂಡು, ನಕಲಿ ಆಧಾರ್ ಕಾರ್ಡ್ ಸಹ ಮಾಡಿಸಿಕೊಂಡಿದ್ದರು. ಅಂದಿನಿಂದ ಮನೆಯಲ್ಲಿ ಧರ್ಮ ಪ್ರಚಾರ ಮತ್ತು ಧಾರ್ಮಿಕ ಪ್ರಚೋದಕರಾಗಿ ಕೆಲಸ ಮಾಡುತ್ತಿದ್ದರು. ಯೂಟ್ಯೂಬ್‌ನಲ್ಲಿ ಪ್ರಚಾರ ಕಾರ್ಯ ನಡೆಸುತ್ತಾ ಇದ್ದರು. ಖರ್ಚು ವೆಚ್ಚಕ್ಕೆ ಸಂಸ್ಥೆಯೊಂದರಿಂದ ಹಣಕಾಸು ನೆರವು ಬರುತ್ತಿತ್ತು ಎಂಬೆಲ್ಲಾ ಮಾಹಿತಿ ಪೊಲೀಸರ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

# ಬೈಕ್‌ಗೆ ಅಪರಿಚಿತ ವಾಹನ ಡಿಕ್ಕಿ ತಾಯಿ, ಮಗ ಸಾವು

**ಕೋಲಾರ:** ಬೈಕ್‌ಗೆ ಅಪರಿಚಿತ ವಾಹನವೊಂದು ಡಿಕ್ಕಿಯಾದ ಪರಿಣಾಮ ತಾಯಿ-ಮಗ ದಾರುಣವಾಗಿ ಸಾವನ್ನಪ್ಪಿದ ಘಟನೆ ಕೋಲಾರ 34 ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಹೊಗಳಕೆರೆ ಕ್ರಾಸ್‌ನಲ್ಲಿ ನಡೆದಿದೆ.



ಕೇತಗಾನಹಳ್ಳಿ ಗ್ರಾಮದ ನಿವಾಸಿಗಳಾದ ಪದ್ಮಮ್ಮ (48), ರಘು (26) ಮೃತ ದುರ್ದೈವಿಗಳು. ಶ್ರೀನಿವಾಸಪುರ ಪಟ್ಟಣದಿಂದ ಸ್ವಗ್ರಾಮ ಕೇತಗಾನಹಳ್ಳಿಗೆ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಅಪರಿಚಿತ ವಾಹನ ಡಿಕ್ಕಿ ಹೊಡೆದು ಘಟನೆ ಸಂಭವಿಸಿದೆ.

ಅಪರಿಚಿತ ವಾಹನ ಪತ್ತೆಗಾಗಿ ಪೊಲೀಸರು ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸುತ್ತಿದ್ದಾರೆ. ಶ್ರೀನಿವಾಸಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಸಿರಿಯಾದ ವಸತಿ ಕಟ್ಟಡದ ಮೇಲೆ ಇಸ್ರೇಲ್ ರಾಕೆಟ್ ದಾಳಿ 7 ಮಂದಿ ಸಾವು



**ಸಿರಿಯಾ:** ಸಿರಿಯಾದ ರಾಜಧಾನಿ ಡಮಾಸ್ಕಸ್ ನಲ್ಲಿರುವ ಕಟ್ಟಡದ ಮೇಲೆ ಇಸ್ರೇಲ್ ರಾಕೆಟ್ ದಾಳಿ ನಡೆಸಿದ್ದು, ಘಟನೆಯಲ್ಲಿ 7 ಮಂದಿ ಸಾವನ್ನಪ್ಪಿದ್ದಾರೆ. ಅಲ್ಲದೇ ಹಲವರು ಗಾಯಗೊಂಡಿದ್ದಾರೆ ಎನ್ನಲಾಗಿದೆ. ಮೃತರಲ್ಲಿ ಮಹಿಳೆಯರು ಮತ್ತು ಮಕ್ಕಳೂ ಸೇರಿದ್ದಾರೆ. ಸಿರಿಯಾದ ಸರ್ಕಾರಿ ಸುದ್ದಿ ಸಂಸ್ಥೆ ಈ ಮಾಹಿತಿಯನ್ನು ನೀಡಿದೆ.

ಈ ಕಟ್ಟಡಕ್ಕೆ ಇರಾನ್ ನ ರೆವಲ್ಯೂಷನರಿ ಗಾರ್ಡ್ ಮತ್ತು ಹಿಜ್ಬುಲ್ಲಾ ನಾಯಕರು ಆಗಾಗ ಭೇಟಿ ನೀಡುತ್ತಿರುತ್ತಿದ್ದರು. ಇಸ್ರೇಲ್ ಡಮಾಸ್ಕಸ್‌ನ ಪಶ್ಚಿಮದಲ್ಲಿರುವ ಮೆಜಾಹ್ ಉಪನಗರದಲ್ಲಿರುವ ವಸತಿ ಕಟ್ಟಡವನ್ನು ಗುರಿಯಾಗಿಸಿಕೊಂಡಿದೆ. ಈ ದಾಳಿಯನ್ನು ಇಸ್ರೇಲ್ ನಡೆಸಿದೆ. ವರದಿಯ ಪ್ರಕಾರ, ಇಸ್ರೇಲ್‌ನಿಂದ ಮೂರು ರಾಕೆಟ್‌ಗಳನ್ನು ಹಾರಿಸಲಾಯಿತು.

ಅನೇಕ ಇಸ್ರೇಲಿ ಕ್ಷಿಪಣಿಗಳನ್ನು ಸಿರಿಯನ್ ರಕ್ಷಣಾ ವ್ಯವಸ್ಥೆಯು ತಡೆದಿದೆ, ಕ್ಟೋಬರ್ 7 ರಂದು ಹಮಾಸ್ ದಾಳಿಯ ನಂತರ, ಇಸ್ರೇಲ್ ಸಿರಿಯಾದಲ್ಲಿ ಇರಾನ್‌ಗೆ ಸಂಬಂಧಿಸಿದ ಗುರಿಗಳ ಮೇಲೆ ನಿರಂತರವಾಗಿ ದಾಳಿ ಮಾಡುತ್ತಿದೆ.

ಇಸ್ರೇಲಿ ರಕ್ಷಣಾ ಪಡೆ ಹಿಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಅವರ ಉತ್ತರಾಧಿಕಾರಿಯನ್ನೂ ಕೊಂದಿದೆ. ಅಕ್ಟೋಬರ್ 3 ರ ರಾತ್ರಿ, ಸಫಿಯೆದ್ದೀನ್ ಲೆಬನಾನ್ ರಾಜಧಾನಿ ಬೈರುತ್‌ನಲ್ಲಿ ಹಿಜ್ಬುಲ್ಲಾ ಅಧಿಕಾರಿಗಳನ್ನು ಭೇಟಿಯಾಗಿದ್ದರು. ಇಸ್ರೇಲಿ ರಕ್ಷಣಾ ಪಡೆಗಳಿಂದ ವೈಮಾನಿಕ ದಾಳಿಗಳು ನಡೆದವು. ಆದರೆ, ಇಸ್ರೇಲ್ ರಕ್ಷಣಾ ಪಡೆ ಅಥವಾ ಹಿಜ್ಬುಲ್ಲಾ ಈ ಬಗ್ಗೆ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ.

ಹಿಜ್ಬುಲ್ಲಾದಿಂದ ಇಸ್ರೇಲ್ ಮೇಲೆ ಮತ್ತೆ ರಾಕೆಟ್ಗಳನ್ನು ಹಾರಿಸಲಾಗಿದೆ, ಹೈಫಾದ ದಕ್ಷಿಣಕ್ಕೆ ಹಿಜ್ಬುಲ್ಲಾ ಸುಮಾರು 180 ರಾಕೆಟ್‌ಗಳನ್ನು ಹಾರಿಸಿತು. ಹೈಫಾ ಬಂದರಿನ ಸಮೀಪವಿರುವ ಪ್ರದೇಶಗಳನ್ನು ಹಿಜ್ಬುಲ್ಲಾ ಗುರಿಯಾಗಿರಿಸಿಕೊಂಡಿದೆ. ಇಸ್ರೇಲ್ ಸರ್ಕಾರವು ಹೆಚ್ಚು ಹೊರಗೆ ಹೋಗದಂತೆ ನಾಗರಿಕರಿಗೆ ಸಲಹೆ ನೀಡಿದೆ. ಅಲ್ಲದೆ ಗಡಿ ಭಾಗದ ಬಹುತೇಕ ಶಾಲೆಗಳನ್ನು ಮುಚ್ಚಲಾಗಿದೆ.

# ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ

**ಮೈಸೂರು:** ಕರ್ನಾಟಕ ಸರ್ಕಾರದ ಎಐಟಿಟಿ, ಎಸ್.ಸಿ.ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಯುವಕ ಯುವತಿಯರಿಂದ ಉದ್ಯೋಗ ಆಧಾರಿತ ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಟೂಲ್ ಡಿಸೈನ್ನಲ್ಲಿ ಪೋಸ್ಟ್ ಡಿಪ್ಲೋಮಾ ತರಬೇತಿಗೆ ಡಿಪ್ಲೋಮಾ/ಬಿಇ (ಮೆಕ್ಯಾನಿಕಲ್ ಸ್ಟ್ರೀಮ್) ವಿದ್ಯಾರ್ಹತೆ, ಟೂಲ್ ರೂಮ್ ಮೆಷಿನಿಸ್ಟ್ ತರಬೇತಿಗೆ ಎಸ್.ಎಸ್.ಎಲ್. ಸಿ, ಟೂಲ್ ಮತ್ತು ಡೈ ಮೇಕರ್ ತರಬೇತಿಗೆ ಎಸ್.ಎಸ್.ಎಲ್.ಸಿ ಮತ್ತು ಐಟಿಐ, ಸಿ.ಎನ್.ಸಿ ಟೆಕ್ನೋಲಜಿ ಮತ್ತು ಸಿ.ಎಂ.ಎಂ ತರಬೇತಿಗೆ ಐಟಿಐ ಅಥವಾ ಡಿಪ್ಲೋಮಾ, ಸಿ.ಎನ್.ಸಿ ಪ್ರೋಗಾಮರ್-ವಿ.ಎಂ.ಸಿ ಮತ್ತು ಟರ್ನಿಂಗ್ ತರಬೇತಿಗೆ ಡಿಪ್ಲೋಮಾ ಅಥವಾ ಬಿ.ಇ, ಡಿಸೈನರ್ ಮೆಕ್ಯಾನಿಕಲ್(ಕ್ಯಾಡ್-ಕ್ಯಾಮ್) ತರಬೇತಿಗೆ ಡಿಪ್ಲೋಮಾ ಅಥವಾ ಬಿಇ, ಎಲೆಕ್ಟ್ರಿಷಿಯನ್ ತರಬೇತಿಗೆ ಎಸ್.ಎಸ್.ಎಲ್.ಸಿ ಅಥವಾ ಐಟಿಐ, ಕನ್ವೆಂಷನಲ್ ಮಷೀನ್ಸ್ ಮತ್ತು ಕ್ವಾಲಿಟಿ ಇನ್ಸ್‌ಪೆಕ್ಟರ್ ತರಬೇತಿಗೆ ಎಸ್.ಎಸ್.ಎಲ್.ಸಿ ಅಥವಾ ಐಟಿಐ, ಸಿ.ಎನ್.ಸಿ ಮೆಷಿನ್ ಆಪರೇಟರ್ (ಟರ್ನಿಂಗ್/ಮಿಲ್ಲಿಂಗ್) ತರಬೇತಿಗೆ ಎಸ್.ಎಸ್.ಎಲ್.ಸಿ ಅಥವಾ ಐಟಿಐ, ಪ್ರೊಡಕ್ಟ್ ಡಿಸೈನ್ ಎಂಜಿನಿಯರ್ (ಕ್ಯಾಡ್-ಕ್ಯಾಮ್) ತರಬೇತಿಗೆ ಡಿಪ್ಲೋಮಾ ಅಥವಾ ಬಿಇ, ಕ್ವಾಲಿಟಿ ಇನ್ಸ್‌ಪೆಕ್ಟರ್ ತರಬೇತಿಗೆ ಐಟಿಐ ಅಥವಾ ಡಿಪ್ಲೋಮಾ ವಿದ್ಯಾರ್ಹತೆಯನ್ನು ಹೊಂದಿರುವ 16 ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9945442654, 9945479700 ಅಥವಾ 9900864686 ನ್ನು ಸಂಪರ್ಕಿಸಬಹುದು ಎಂದು ಜಿ.ಟಿ.ಟಿ.ಸಿ ಕೇಂದ್ರದ ಸಿ.ಒ.ಇ-ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಸ್ತೂರು ಗ್ರಾಪಂ ಅಧ್ಯಕ್ಷೆಯಾಗಿ ದೊಡ್ಡತಾಯಮ್ಮ ಆಯ್ಕೆ




**ಯಳಂದೂರು:** ಕೆಸ್ತೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ದೊಡ್ಡತಾಯಮ್ಮ ಸೋಮವಾರ ಅವಿರೋಧವಾಗಿ ಆಯ್ಕೆಯಾದರು. ಈ ಹಿಂದೆ ಅಧ್ಯಕ್ಷರಾಗಿದ್ದ ಕೋಮಲ ಎಂಬುವವರು ರಾಜೀನಾಮೆ ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನ ತೆರವಾಗಿತ್ತು. ಈ ಸಂಬಂಧ ಪಂಚಾಯಿತಿಯಲ್ಲಿ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಈ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಕಟ್ನವಾಡಿ ಗ್ರಾಮದ ದೊಡ್ಡತಾಯಮ್ಮ ಎಂಬುವವರು ಮಾತ್ರ ನಾಮಪತ್ರ ಸಲ್ಲಿಸಿದ್ದರು. ಹಾಗಾಗಿ ಚುನಾವಣಾಧಿಕಾರಿಯಾಗಿ ಪಶು ಇಲಾಖೆಯ ಡಾ. ಶಿವರಾಜು, 20 ಜನ ಗ್ರಾಮ ಪಂಚಾಯಿತಿ ಚುನಾಯಿತ ಸದಸ್ಯರಿರುವ ಪಂಚಾಯಿತಿಯಲ್ಲಿ ಮಾನಸ ಎಂಬುವವರು ಹೊರತುಪಡಿಸಿ ಇತರೆ 19 ಮಂದಿ ಸದಸ್ಯರೂ ಹಾಜರಿದ್ದಾರೆ ಇವರೆಲ್ಲೂ ದೊಡ್ಡತಾಯಮ್ಮರನ್ನು ಬೆಂಬಲಿಸಿದ್ದು, ಇವರು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಅಧಿಕೃತ ಘೋಷಿಸಿದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷೆ ದೊಡ್ಡತಾಯಮ್ಮ ಮಾತನಾಡಿ, ಕೆಸ್ತೂರು ಗ್ರಾಮ ಪಂಚಾಯಿತಿ ತಾಲೂಕಿನ ದೊಡ್ಡ ಪಂಚಾಯಿತಿಗಳಲ್ಲಿ ಒಂದಾಗಿದೆ, ಕೆಸ್ತೂರು, ಕೆ. ಹೊಸೂರು, ಕಟ್ನವಾಡಿ, ಬಸವಾಪುರ ಗ್ರಾಮಗಳು ಒಳಪಡುತ್ತವೆ. ಈ ಪಂಚಾಯಿತಿ ವ್ಯಾಪ್ತಿಯಲ್ಲಿ ನನ್ನ ಅವಧಿಯಲ್ಲಿ ಸರ್ಕಾರದಿಂಬ ಬರುವ ಅನುದಾನಗಳನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು. ಅಲ್ಲದೆ ನರೇಗಾ ಯೋಜನೆಯಡಿಯಲ್ಲಿ ಪಂಚಾಯಿತಿ ಅಭಿವೃದ್ಧಿಗೆ ಪೂರಕರವಾಗುವ ಹಾಗೂ ಸಾಮಾನ್ಯ ಜರಿಗೆ ಅತೀ ಅವಶ್ಯಕವಾಗಿರುವ ಕಾಮಗಾರಿಗಳನ್ನು ಮಾಡುವ ಮೂಲಕ ಅಭಿವೃದ್ಧಿಗೆ ಶ್ರಮಿಸಲಾಗುವುದು. ಇದರೊಂದಿಗೆ ಮೂಲ ಅವಶ್ಯಕತೆಗಳಾಗ ಕುಡಿಯುವ ನೀರು, ರಸ್ತೆ ಅಭಿವೃದ್ಧಿ, ಚರಂಡಿ ಅಭಿವೃದ್ಧಿ ಸೇರಿದಂತೆ ಇತರೆ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದರು.

ಉಪಾಧ್ಯಕ್ಷೆ ಶೋಭಾ, ಸದಸ್ಯರಾದ ಕೆ.ಎನ್. ಬಾಲುಪ್ರಸಾದ್, ಪಿ. ಮಹದೇವಸ್ವಾಮಿ, ಎನ್. ರೂಪ, ಕೆ.ಎಂ.ರಾಜು, ಎನ್. ಕುಮಾರ್, ಎನ್. ಭಾಗ್ಯ ಆರ್. ಸುನಂದ, ಎಸ್. ಮಹದೇವಸ್ವಾಮಿ, ಗುರುಲಿಂಗಯ್ಯ, ಸಿ. ಸುನೀತಾ, ಎಸ್. ಮಹೇಂದರ್, ಜಿ. ಪ್ರಸಾದ್, ಕೋಮಲ, ಕೆ.ಬಿ. ಮಲ್ಲಣ್ಣ, ಮಮತ, ಎಸ್. ರಾಚಪ್ಪಾಜಿ, ಎಂ.ಎಂ. ಶ್ರುತಿ ಪಿಡಿಒ ಮಹದೇವಸ್ವಾಮಿ ಮುಖಂಡರಾದ ಸಿದ್ದರಾಜು, ಗುರು ಸೇರಿದಂತೆ ಅನೇಕರು ಇದ್ದರು.

# ವಿಕಲಚೇತನರ ಆರೈಕೆಯ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ಚಾಮರಾಜನಗರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಜಿಲ್ಲೆಯ ಸೆರೆಬ್ರಲ್ ಪಾಲ್ಸಿ, ಸ್ನಾಯು ಕ್ಷಯ, ಪಾರ್ಕಿನ್ಸನ್ ಮಲ್ಟಿಪಲ್ ಸ್ಕ್ಲೀರೋಸಿಸ್ ಕಾಯಿಲೆಯಿಂದ ಬಳಲುತ್ತಿರುವ ವಿಕಲಚೇತನ ವ್ಯಕ್ತಿಗಳ ಆರೈಕೆದಾರರಿಗೆ ನೀಡಲಾಗುವ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ತಾಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದು ಅಕ್ಟೋಬರ್ 30 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ (ದೂ.ಸಂ 08226-223688, 224688 ಹಾಗೂ ಚಾಮರಾಜನಗರ ಎಂ.ಆರ್.ಡಬ್ಲ್ಯು ರಾಜೇಶ್ (ಮೊ.ಸಂ 8073716208), ಕೊಳ್ಳೇಗಾಲ ಎಂ.ಆರ್.ಡಬ್ಲ್ಯು ಕವಿರತ್ನ (ಮೊ.ಸಂ 7892715408), ಗುಂಡ್ಲುಪೇಟೆ ಎಂ.ಆರ್.ಡಬ್ಲ್ಯು ಮಂಜುಳ (ಮೊ.ಸಂ 9742423332), ಯಳಂದೂರು ಎಂ.ಆರ್. ಡಬ್ಲ್ಯು ಮಹದೇವಮ್ಮ 9740164149 ಸಂಪರ್ಕಿಸಬಹುದು.

# ವಿವಿಧ ಯೋಜನೆಗಳಿಗೆ ಅರ್ಜಿ

**ಚಾಮರಾಜನಗರ:** ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಪರಿಶಿ?ಟ ಜಾತಿ ಆದಿಕರ್ನಾಟಕ, ಆದಿಮಾದಿಗ, ಚಮ್ಮಾರ, ಡೋರ, ಸಮಗಾರ, ಮೋಚಿ ಜನಾಂಗದವರಿಗೆ 2024-25ನೇ ಸಾಲಿನ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಕೌಶಲ್ಯಾ ಉನ್ನತೀಕರಣ ಯೋಜನೆ, ಸ್ವಾವಲಂಬಿ, ಸಂಚಾರಿ ಮಾರಾಟ ಮಳಿಗೆ, ಮಹಿಳಾ ಕುಶಲಕರ್ಮಿಗಳಿಗೆ ಕಾಯಕ ಸ್ಪೂರ್ತಿ ಯೋಜನೆ, ಚರ್ಮ ಶಿಲ್ಪಿ ಯೋಜನೆ, ಪಾದುಕೆ ಕುಟೀರ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ ಮತ್ತು ವಸತಿ ಯೋಜನೆಗೆ ಅರ್ಹ ಚರ್ಮ ಕುಶಲಕರ್ಮಿಗಳು ಅಕ್ಟೋಬರ್ 30ರೊಳಗೆ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 9741833307 ಸಂಪರ್ಕಿಸುವಂತೆ ನಿಗಮದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಒನ್ ಕೇಂದ್ರ ತೆರೆಯಲು ಅರ್ಜಿ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ 5 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಒನ್ ಕೇಂದ್ರ ತೆರೆಯಲು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 130 ಗ್ರಾಮ ಪಂಚಾಯಿತಿಗಳಿಗೆ 196 ಗ್ರಾಮ ಒನ್ ಕೇಂದ್ರಗಳನ್ನು ತೆರೆಯಬೇಕಾಗಿದ್ದು, ಈ ಪೈಕಿ 176 ಗ್ರಾಮ ಒನ್ ಕೇಂದ್ರಗಳಿಗೆ ಅನುಮೋದನೆಯಾಗಿದೆ. ಚಾಮರಾಜನಗರ ತಾಲೂಕಿನ ಯರಗನಹಳ್ಳಿ ಗ್ರಾಮ ಪಂಚಾಯಿತಿ, ಮಾದಾಪುರ, ಬಿಸಿಲವಾಡಿ, ಗುಂಡ್ಲುಪೇಟೆ ತಾಲೂಕಿನ ನೇನೆಕಟ್ಟೆ ಗ್ರಾಮ ಪಂಚಾಯಿತಿ, ಹನೂರು ತಾಲೂಕಿನ ಬೈಲೂರು ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಒನ್ ಕೇಂದ್ರಗಳನ್ನು ತೆರೆಯಬೇಕಿದೆ. ಅರ್ಜಿಯನ್ನು ವೆಬ್ ಸೈಟ್ https://kal-mys.gramaone.karnataka.gov.in ಮೂಲಕ ಅಕ್ಟೋಬರ್ 15ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 9148712473 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಡಿಬಿಟಿ ಮೂಲಕ ಹಣ ಜಮೆ

**ಚಾಮರಾಜನಗರ:** ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ 5 ಕೆಜಿ ಹೆಚ್ಚುವರಿ ಅಕ್ಕಿ ಬದಲಾಗಿ ಡಿಬಿಟಿ ಮೂಲಕ ನಗದು ಹಣವನ್ನು ಪಾವತಿ ಮಾಡುವ ಸಂಬಂಧ 2024ರ ಜುಲೈ ಮಾಹೆಗೆ ಸಂಬಂಧಿಸಿದಂತೆ 2,20,096 ಪಡಿತರ ಚೀಟಿದಾರರ (6,83,153 ಫಲಾನುಭವಿಗಳಿಗೆ) ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ 11,01,60,340 ರೂ.ಗಳನ್ನು ಡಿಬಿಟಿ ಮೂಲಕ ಜಮೆ ಮಾಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಮಕೂರು ದಸರಾಕ್ಕೆ ಭಾಗವಹಿಸಿ : ತಹಸೀಲ್ದಾರ್ ಪವನ್‌ಕುಮಾರ್

**ತಿಪಟೂರು:** ತುಮಕೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವ ತುಮಕೂರು ದಸರಾ 2024 ಕಾರ್ಯಕ್ರಮಕ್ಕೆ ತಾಲ್ಲೂಕಿನ ಸಾರ್ವಜನಿಕರು ಹಾಗೂ ಸರ್ಕಾರಿ ಅಧಿಕಾರಿಗಳು ಹಾಗೂ ಅವರ ಕುಟುಂಬಸ್ಥರು ಭಾಗಿಯಾಗಬೇಕು ಎಂದು ತಾಲ್ಲೂಕು ತಹಶೀಲ್ದಾರ್ ಪವನ್ ಕುಮಾರ್ ತಮ್ಮ ಕಚೇರಿಯಲ್ಲಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಇಒ ಸುದರ್ಶನ್ ಮಾತನಾಡಿ ತುಮಕೂರು ದಸರಾ ಕಾರ್ಯಕ್ರಮದಲ್ಲಿ ಅಕ್ಟೋಬರ್ 11 ಶುಕ್ರವಾರದಂದು ನಾಡ ಕುಸ್ತಿ, ಆಹಾರ ಮೇಳ, ವಸ್ತು ಪ್ರದರ್ಶನ, ಹೆಚ್‌ಎಎಲ್ ವತಿಯಿಂದ ಹೆಲಿಕಾಪ್ಟರ್, ಇಸ್ರೋ, ವಿಂಟೇಜ್ ಕಾರು ಶೋ, ಗುರುಕಿರಣ್ ಹಾಗೂ ಕಂಬದ ರಂಗಯ್ಯ ತಂಡದಿಂದ ಸಂಗೀತ ರಸ ಸಂಜೆ, ಆಕರ್ಷಕ ಲೇಸರ್ ಶೋ ಕಾರ್ಯಕ್ರಮವಿದ್ದು, ಶನಿವಾರ 12 ರಂದು ವಿಜಯದಶಮಿ ಧಾರ್ಮಿಕ ಪೂಜಾ ಆಚರಣೆಗಳು, ಕವಿಗೋಷ್ಠಿ ಕಾರ್ಯಕ್ರಮ, ನವದುರ್ಗೆಯರ ಇತಿಹಾಸ ಕಾರ್ಯಕ್ರಮ, ವಿಜಯ್ ಪ್ರಕಾಶ್ ತಂಡದವರಿಂದ ಸಂಗೀತ ರಸ ಸಂಜೆ ಕಾರ್ಯಕ್ರಮ ರಾತ್ರಿ 10.15ಕ್ಕೆ ಹಸಿರು ಸಿಡಿ ಮುದ್ದುಗಳಿಂದ ಬಾಣ ಬಿರುಸುಗಳ ಪ್ರದರ್ಶನ ಕಾರ್ಯಕ್ರಮವಿರುತ್ತದೆ.

ಕಾರ್ಯಕ್ರಮದಲ್ಲಿ 1500 ಕಲಾವಿದರು ಭಾಗವಹಿಸಲಿದ್ದು ತಿಪಟೂರು ತಾಲ್ಲೂಕಿನಿಂದ ಯಕ್ಷಗಾನ, ಪೌರಣಿಕ ಕಲಾವಿದರು ಭಾಗವಹಿಸಲಿದ್ದಾರೆ ಕಾರ್ಯಕ್ರಮಕ್ಕೆ ಭಾಗವಹಿಸುವ ಸಾರ್ವಜನಿಕರಿಗೆ ಕೆಎಸ್‌ಆರ್‌ಟಿಸಿ ಇಲಾಖೆಯಿಂದ ಬಸ್ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ತಿಳಿಸಿದರು.



## ಚಾಮರಾಜನಗರ ದಸರಾ ಮಹೋತ್ಸವ

# ಗಮನ ಸೆಳೆದ ದಸರಾ ಮ್ಯಾರಥಾನ್

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ದಸರಾ ಮಹೋತ್ಸವದ ಅಂಗವಾಗಿ ನಗರದಲ್ಲಿಂದು ಆಯೋಜಿಸಲಾಗಿದ್ದ ದಸರಾ ಮ್ಯಾರಥಾನ್ ಓಟ ಸ್ಪರ್ಧೆಯಲ್ಲಿ ವಿವಿಧ ಶಾಲಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗಮನ ಸೆಳೆದರು.

ನಗರದ ಶ್ರೀ ಚಾಮರಾಜೇಶ್ವರ ದೇವಾಲಯದ ಮುಂಭಾಗದಿಂದ ಹಮ್ಮಿಕೊಳ್ಳಲಾಗಿದ್ದ ದಸರಾ ಮ್ಯಾರಥಾನ್ ಓಟಕ್ಕೆ ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್ ಅವರು ಹಸಿರು ನಿಶಾನೆ ತೋರಿ ಶುಭ ಹಾರೈಸಿದರು.

ಮ್ಯಾರಥಾನ್‌ಗೆ ಚಾಲನೆ ನೀಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ಚಾಮರಾಜನಗರ ಜಿಲ್ಲಾ ದಸರಾ ಮಹೋತ್ಸವದ ಅಂಗವಾಗಿ ನಗರದಲ್ಲಿ ಮೂರು ದಿನಗಳ ಕಾಲ ಹಲವು ವಿಶೇಷ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಈ ಪೈಕಿ ದಸರಾ ಮ್ಯಾರಥಾನ್ ಸಹ ಒಂದಾಗಿದೆ. ನಮ್ಮ ಸಂಸ್ಕೃತಿಯನ್ನು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಮುನ್ನಡೆಸುವುದು ದಸರಾ ಮ್ಯಾರಥಾನ್ ಉದ್ದೇಶವಾಗಿದೆ ಎಂದರು. ಮಾನಸಿಕ ದೃಢತೆಯಷ್ಟೆ ದೈಹಿಕ ಸದೃಢತೆ ಮುಖ್ಯವಾಗಿದೆ. ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತಿದೆ. ದೈಹಿಕ ಸಾಮರ್ಥ್ಯ ಬಲಗೊಳ್ಳಲು ಪ್ರತಿಯೊಬ್ಬರೂ ಆಟೋಟಗಳಲ್ಲಿ ಭಾಗವಹಿಸಬೇಕು. ಇದರಿಂದ ದೈಹಿಕ ಹಾಗೂ ಮಾನಸಿಕ ಸುಸ್ಥಿರತೆ ಕಾಪಾಡಿಕೊಳ್ಳಬಹುದಾಗಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು. ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಜಿಲ್ಲಾ ಪರಿಸರ ಅಧಿಕಾರಿ ಉಮಾಶಂಕರ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಶಂಕರ್, ನಗರಸಭೆ ಹಿರಿಯ ಆರೋಗ್ಯ ನಿರೀಕ್ಷರಾದ ಮಂಜುನಾಥ್, ದೈಹಿಕ ಶಿಕ್ಷರಾದ ಚಿಕ್ಕಬಸವಯ್ಯ, ಶಿವಮಲ್ಲು, ಇತರರು ಇದೇ ಸಂದರ್ಭದಲ್ಲಿ ಇದ್ದರು. ಮ್ಯಾರಥಾನ್ ಓಟವು ನಗರದ ಬಿ. ರಾಚಯ್ಯ ಜೋಡಿರಸ್ತೆಯಲ್ಲಿ ಸಾಗಿ ರಾಮಸಮುದ್ರ ತಲುಪಿ ಅಲ್ಲಿಂದ ಮತ್ತೆ ಚಾಮರಾಜೇಶ್ವರ ದೇವಾಲಯದಲ್ಲಿ ಅಂತ್ಯಗೊಂಡಿತು.



## ಎಲ್ಲ ಚಿತ್ರಮಂದಿರಗಳಲ್ಲಿ ಉಚಿತವಾಗಿ ಚಲನಚಿತ್ರ ವೀಕ್ಷಣೆಗೆ ಅವಕಾಶ

**ಚಾಮರಾಜನಗರ ದಸರಾ ಮಹೋತ್ಸವ ಅಂಗವಾಗಿ ಆಯೋಜಿಸಿರುವ ಚಲನ ಚಿತ್ರೋತ್ಸವದಲ್ಲಿ ಅಕ್ಟೋಬರ್ 9ರಂದು ನಗರದ ಐದು ಚಿತ್ರಮಂದಿರಗಳಲ್ಲಿ ಸಾರ್ವಜನಿಕರು ಉಚಿತವಾಗಿ ಚಲನಚಿತ್ರಗಳನ್ನು ವೀಕ್ಷಿಸಬಹುದಾಗಿದೆ. ಅಕ್ಟೋಬರ್ 9ರಂದು ಭ್ರಮರಾಂಭ ಚಿತ್ರಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಯುವರತ್ನ, ಸಂಜೆ 4 ಗಂಟೆಗೆ ಸಹರ, ಸಿಂಹ ಚಿತ್ರಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಅನ್ನ, ಸಂಜೆ 4 ಗಂಟೆಗೆ ಡಾ. ರಾಜ್‌ಕುಮಾರ್ ಅಭಿನಯದ ಗಂಧದಗುಡಿ, ಬಸವೇಶ್ವರ ಚಿತ್ರಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಲಾಫಿಂಗ್ ಬುದ್ಧ, ಸಂಜೆ 4 ಗಂಟೆಗೆ ಕಾಂತಾರ, ಸಿದ್ದಾರ್ಥ ಚಿತ್ರಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಧೂಪದ ಮಕ್ಕಳು, ಸಂಜೆ 4 ಗಂಟೆಗೆ ಭಾರತದ ಪ್ರಜೆಗಳಾದ ನಾವು ಹಾಗೂ ಗುರುರಾಘವೇಂದ್ರ, ಚಿತ್ರಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಒಂದು ಸರಳ ಪ್ರೇಮ ಕಥೆ, ಸಂಜೆ 4 ಗಂಟೆಗೆ ಡಿ.ಎನ್.ಎ ಚಲನಚಿತ್ರ ಪ್ರದರ್ಶನವಾಗಲಿದೆ. ಈ ಎಲ್ಲ ಚಲನಚಿತ್ರಗಳನ್ನು ಉಚಿತವಾಗಿ ವೀಕ್ಷಿಸಲು ಸಾರ್ವಜನಿಕರಿಗೆ ಅವಕಾಶವಿದೆ. ಜಿಲ್ಲೆಯ ಜನತೆ ಚಲನಚಿತ್ರ ವೀಕ್ಷಣೆ ಮಾಡುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.**

## ಚೆಲುವ ಚಾಮರಾಜನಗರ ನಮ್ಮ ಹೆಮ್ಮೆ : ಡಿ.ಡಿ.ಪಿ.ಐ ರಾಮಚಂದ್ರರಾಜೇ ಅರಸ್

**ಚಾಮರಾಜನಗರ, ನಮ್ಮ ಚೆಲುವ ಚಾಮರಾಜನಗರ ನಮ್ಮ ಹೆಮ್ಮೆ. ಈ ದೇಶ, ಈ ನಾಡಿನ ಸಂಸ್ಕೃತಿ, ಪರಂಪರೆಯನ್ನು ಎತ್ತಿ ಹಿಡಿಯುವ ಕಾರ್ಯಕ್ರಮಗಳಿಗೆ ಕಲಾವಿದರು ಹೆಚ್ಚಿನ ಆದ್ಯತೆ ನೀಡುವಂತೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್ ಅವರು ಸಲಹೆ ಮಾಡಿದರು. ಚಾಮರಾಜನಗರ ಜಿಲ್ಲಾ ದಸರಾ ಮಹೋತ್ಸವದ ಅಂಗವಾಗಿ ನಗರದ ಶ್ರೀ ಚಾಮರಾಜೇಶ್ವರ ದೇವಾಲಯದ ಪ್ರಧಾನ ವೇದಿಕೆಯಲ್ಲಿ ಆಯೋಜಿಸಲಾಗಿದ್ದ ಎರಡನೇ ದಿನದ ಮಹಿಳಾ ಸಾಂಸ್ಕೃತಿಕ ದಸರಾ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು. ಚೆಲುವ ಚಾಮರಾಜನಗರ ನಮ್ಮ ಹೆಮ್ಮೆಯಾಗಿದೆ. ದಸರಾ ಆಚರಣೆ ಎಲ್ಲರನ್ನು ಒಂದುಗೂಡಿಸುವ ನಾಡಹಬ್ಬವಾಗಬೇಕು. ಈ ಬಾರಿ ಒಂದಕ್ಕೊಂದು ವಿಭಿನ್ನ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಬೇಕು. ಕಲಾವಿದರನ್ನು ಪ್ರೋತ್ಸಾಹಿಸಬೇಕು. ಕಲಾವಿದರು ಸಹ ಜನರನ್ನು ರಂಜಿಸುವಂತಹ ಉತ್ತಮ ಕಾರ್ಯಕ್ರಮ ನೀಡಬೇಕು ಎಂದು ರಾಮಚಂದ್ರರಾಜೇ ಅರಸ್ ಅವರು ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ, ಹನುಮೇಗೌಡ, ಟಿ.ಆರ್. ಸ್ವಾಮಿ, ಇತರರು ಇದ್ದರು. ಬಳಿಕ ಮಹಿಳಾ ದಸರಾ ಅಂಗವಾಗಿ ಮಹಿಳೆಯರ ವಿವಿಧ ತಂಡಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಿದವು.**

# ಬದುಕಿನ ಉನ್ನತಿಗೆ ಸಂಸ್ಕಾರ ಸಂಸ್ಕೃತಿ ಅಡಿಪಾಯ

**ಮಾನವ ಧರ್ಮ ಮಂಟಪ-ಅಬ್ಬಿಗೇರಿ-**

ಧರ್ಮದ ಚಿಂತನಗಳು ಭಾರತೀಯರ ಬದುಕಿಗೆ ಸಜ್ಜನಿಕೆಯ ಜೀವ ತುಂಬಿವೆ. ಅಸತ್ಯದಿಂದ ಸತ್ಯದೆಡೆಗೆ ಕತ್ತಲೆಯಿಂದ ಬೆಳಕಿನೆಡೆಗೆ ಸಾವಿನಿಂದ ಸಾವಿಲ್ಲದೆಡೆಗೆ ಮುನ್ನಡೆಯುವ ಗುರಿ ನಮ್ಮದಾಗಬೇಕು. ಮನುಷ್ಯ ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ಬಲಿ ಕೊಡಬಾರದು. ಸಂಸ್ಕಾರಯುಕ್ತ ಸಂಸ್ಕೃತಿಯಿಂದ ಬದುಕಿನ ಉನ್ನತಿಯಾಗುವುದರಲ್ಲಿ ಯಾವುದೇ ಸಂದೇಹವಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಆರನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ. ನದಿಯ ನೀರನ್ನು ಎಷ್ಟು ತುಂಬಿದರೂ ಹೇಗೆ ಬಲಿಯಾಗುವುದಿಲ್ಲವೋ ಹಾಗೆಯೇ ಧರ್ಮದ ಅರಿವನ್ನು ಎಷ್ಟು ಅರಿತರೂ ಅದು ಖಾಲಿಯಾಗುವುದಿಲ್ಲ. ಕೆಡಕುಗಳನ್ನು ಮೆಟ್ಟಿ ನಿಂತು ಒಳಿತಿನತ್ತ ಹೆಜ್ಜೆ ಹಾಕುವುದೇ ನಮ್ಮ ಗುರಿಯಾಗಬೇಕು. ಉದಾತ್ತ ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಿಜವಾದ ಧರ್ಮ. ಸುಂದರ ಶುದ್ಧಗೊಳಿಸುವುದೇ ಧರ್ಮದ ಗುರಿಯಾಗಿದೆ. ವೀರಶೈವ ಧರ್ಮ ಸಂವಿಧಾನದಲ್ಲಿ ಪುರುಷರಷ್ಟೇ ಮಹಿಳೆಯರಿಗೆ ಧರ್ಮಾಚರಣೆಯ ಸಮಾನ ಹಕ್ಕನ್ನು ಬಹಳ ಪ್ರಾಚೀನ ಕಾಲದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಸ್ಪಷ್ಟವಾಗಿ ನಿರೂಪಿಸಿದ್ದಾರೆ. ಭಾರತೀಯ ಉತ್ಕೃಷ್ಟ ಸಂಸ್ಕೃತಿಗೆ ಮಹಿಳೆಯರ ಕೊಡುಗೆ ಅಪಾರವಾಗಿದೆ. ವೀರಶೈವ ಧರ್ಮ ಪೀಠಗಳು ಮಹಿಳೆಯರಿಗೆ ಹಸಿರು ಬಳೆ, ಕುಂಕುಮ, ಕರಿಮಣಿ, ಕಾಲುಂಗುರ ಮುತ್ತು ಹಾಗೂ ಕೊರಳಿನಲ್ಲಿ ಮಾಂಗಲ್ಯ ಕೊಟ್ಟು ಕರುಣಿಸಿದ್ದಾರೆ. ಸಮೃದ್ಧಿ ತ್ಯಾಗ ಔದಾರ್ಯ ಸಮಾನತೆ ಮತ್ತು ಪರಿಪಕ್ವತೆ ಉಂಟು ಮಾಡುವ ಶಕ್ತಿ ಇವುಗಳಲ್ಲಿ ಅಡಗಿದೆ ಎಂದರು.

ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ''ಕಾವ್ಯ ಕುಸುಮ'' ಕೃತಿ ಬಿಡುಗಡೆ ಮಾಡಿ ಜೀವನ ಮೌಲ್ಯಗಳು ಅಂತ್ಯಗೊಂಡರೆ ಅದರೊಂದಿಗೆ ಮಾನವೀಯತೆ ಅಂತ್ಯವಾಗುತ್ತದೆ. ನಮ್ಮ ಬದುಕು ಇನ್ನೊಬ್ಬರಿಗೆ ಮಾದರಿಯಾಗಬೇಕಲ್ಲದೇ ಮಾರಕವಾಗಬಾರದು. ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳನ್ನು ಕುರಿತು ಬರೆದ ಕಾವ್ಯ ಕುಸುಮ ಕೃತಿಯಲ್ಲಿ ಭಕ್ತ ಸಮುದಾಯದ ಶ್ರೇಯಸ್ಸಿಗೆ ಅವರು ನೀಡಿದ ಜೀವನಾದರ್ಶಗಳನ್ನು




ಕಾಣಬಹುದು. ಶ್ರೀ ರಂಭಾಪುರಿ ಪೀಠದ ಈ ದಸರಾ ಮಹೋತ್ಸವ ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಸ್ಫೂರ್ತಿಯನ್ನು ಉಂಟು ಮಾಡುತ್ತದೆ. ಶ್ರೀ ರಂಭಾಪುರಿ ಜಗದ್ಗುರುಗಳವರ ವಿಚಾರ ಧಾರೆಗಳು ಸಕಲ ಭಕ್ತರಿಗೆ ಆಶಾಕಿರಣವಾಗಿವೆ. ಸಮಾಜವನ್ನು ಸರ್ವ ಜನಾಂಗದ ಶಾಂತಿಯ ತೋಟ ಮಾಡುವ ದಿಶೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಶ್ರಮಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯ ಎಂದರು.

ಹುಬ್ಬಳ್ಳಿಯ ಮದ್ವೀರಶೈವ ಸ.ಸಂ. ಹುಬ್ಬಳ್ಳಿ ತಾಲೂಕ ಘಟಕದ ಅಧ್ಯಕ್ಷ ಪ್ರಕಾಶ ಬೆಂಡಿಗೇರಿ ಸರ್ವರನ್ನು ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ವೀರೇಶ ಕಿತ್ತೂರ ಮತ್ತು ರಾಜಗುರು ಡಾ. ಗುರುಸ್ವಾಮಿ ಕಲಿಕೇರಿ ಗದಗ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ಹಾಗೂ ಗದಗಿನ ಶಾರದಾ ಶಿವಾನಂದಯ್ಯ ಹಿರೇಮಠ ಇವರಿಂದ ನಿರೂಪಣೆ ನಡೆಯಿತು.

ನಜರ್ ಸಮರ್ಪಣೆ: ಸಮಾರಂಭದ ನಂತರ ಶ್ರೀ ಪೀಠದ ಸಿಬ್ಬಂದಿ ಹಾಗೂ ಪೀಠಾಭಿಮಾನಿಗಳು, ಆನೆ ಗಜಲಕ್ಷ್ಮಿ ಹಾಗೂ ಹಗಲು ದೀವಟಿಗೆಯ ಮೇಘರಾಜ ಚಕ್ರಸಾಲಿ ಸಲ್ಲಿಸಿದ ನಜರ್ ಸಮರ್ಪಣೆ ಆಕರ್ಷಕವಾಗಿತ್ತು.

ಅನ್ನ ದಾಸೋಹ: ಅಬ್ಬಿಗೇರಿ ಗ್ರಾಮ ಪಂಚಾಯತ ಸದಸ್ಯ ಸುರೇಶ ಸಂಗಪ್ಪ ನಾಯ್ಕರ ಮತ್ತು ಸಹೋದರರಿಂದ ಅನ್ನ ದಾಸೋಹದ ಸೇವೆ ಜರುಗಿತು.

# ಸಂಜೀವಿನಿ ಕ್ಲಿನಿಕ್‌ಗೆ ಚಾಲನೆ

**ಮಾಲೂರು:** ಪಟ್ಟಣದಲ್ಲಿ ನೂತನವಾಗಿ ಸಂಜೀವಿನಿ ಕ್ಲಿನಿಕ್‌ಅಂಡ್ ಸ್ಪೆಷಾಲಿಟಿ ಡಯಾಗ್ನೋಸ್ಟಿಕ್ ಸೆಂಟರ್ ನ್ನು ಶಾಸಕ ಕೆ.ವೈ ನಂಜೇಗೌಡ ಉದ್ಘಾಟಿಸಿದರು. ಪಟ್ಟಣವು ದಿನೇ ದಿನೇ ಬೆಳೆಯುತ್ತಿದ್ದು, ಮಾಲೂರು ಸುತ್ತಮುತ್ತ ಮೂರು ಹಂತದಕೈಗಾರಿಕಾ ಪ್ರಾಂತ್ಯಾಗಳ್ಳಿದ್ದು, ತಾಲೂಕಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಲಸಿಗರು ಬರುತ್ತಿದ್ದಾರೆ. ಜನತೆಯಆರೋಗ್ಯದದೃಷ್ಟಿಯಿಂದ ಅತ್ಯುತ್ತಮವಾದ ಸೌಕರ್ಯ ಸೌಕರ್ಯಉಳ್ಳ ಹಾಗೂ ನುರಿತತಜ್ಞರು ತಾಲೂಕಿಗೆ ಅವಶ್ಯಕತೆವಾಗಿದ್ದುಅದೇರೀತಿಡಾ. ಗೀತಾರೆಡ್ಡಿ ಹಾಗೂ ಡಾ. ಪ್ರಮೋದ್‌ರೆಡ್ಡಿರವರು ನೂತನವಾಗಿ ಸಂಜೀವಿನಿ ಕ್ಲಿನಿಕ್ ಅಂಡ್ ಸ್ಪೆಷಾಲಿಟಿ ಡಯಾಗ್ನೋಸ್ಟಿಕ್ ಸೆಂಟರ್ ನ್ನು ಪ್ರಾರಂಭಿಸಿದ್ದು. ತಾಲೂಕಿನಜನತೆಗೆಚಿಕಿತ್ಸೆ ನೀಡುವ ಮೂಲಕ ತಾಲೂಕಿನಜನತೆಯ ಸೇವೆಸಲ್ಲಿಸಬೇಕಾಗಿದೆ. ತಾಲೂಕಿನಜನತೆಯು ಸಹ ಇಂತಹಉತ್ತಮಕ್ಲಿನಿಕ್ ನ್ನು ಸದುಉಪಯೋಗಪಡಿಸಿಕೊಂಡು ಉತ್ತಮಆರೋಗ್ಯವಂತರಾಗ ಬೇಕೆಂದು ತಿಳಿಸಿದರು. ಪುರಸಭೆಯಅಧ್ಯಕ್ಷೆ ಕೋಮಲ ನಾರಾಯಣ್, ಉಪಾಧ್ಯಕ್ಷೇ ವಿಜಯಲಕ್ಷ್ಮಿ, ಸ್ಥಾಯಿ ಸಮಿತಿಅಧ್ಯಕ್ಷರಾಜಪ್ಪ, ಮಾಜಿತಾಪಂ ಸದಸ್ಯರವಿಕುಮಾರ್ ಮಂಜು, ಪುರಸಭೆ ಸದಸ್ಯರಾದ ಮುರಳೀಧರ್, ಪಿ ಪರಮೇಶ್, ಇಮ್ತಿಯಸ್, ಭಾರತಮ್ಮ ಶಂಕರಪ್ಪ, ಚೈತ್ರಾರವಿ, ಡಾ.ಕಿರಣ್ ಸೋಮಣ್ಣ, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಮಧುಸೂದನ್ ಇದ್ದರು.

## ಕರ್ನಾಟಕ ಅರಣ್ಯ ಇಲಾಖೆ

ಸುಲ್ತಾನ್ ಷರೀಫ್ ವೃತ್ತ, ಸತ್ತಿರಸ್ತೆ, ಚಾಮರಾಜನಗರ - 571313
ಕಚೇರಿ: 08226-222059 E-mail: acf.nagara@gmail.com

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ವನ್ಯಜೀವಿ ಉಪವಿಭಾಗ, ಚಾಮರಾಜನಗರ.**

ಸಂಖ್ಯೆ : ಎ1/ಬಿಯುಡಿ/ಹೊ.ಗು/ಟೆಂಡರ್/ಸಿಆರ್-42/2024-25
ದಿನಾಂಕ: 04-10-2024

**ಟೆಂಡರ್ ಪತ್ರಿಕಾ ಪ್ರಕಟಣೆಗಾಗಿ**

2024-25ನೇ ಸಾಲಿನಲ್ಲಿ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶ, ಚಾಮರಾಜನಗರ ವಿಭಾಗ ಹಾಗೂ ವಿಭಾಗ ವ್ಯಾಪ್ತಿಯಲ್ಲಿ ಬರುವ ಉಪ ವಿಭಾಗ ಹಾಗೂ ವಿವಿಧ ವಲಯಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುವ ಸಂಬಂಧ ಮಾನವ ಸಂಪನ್ಮೂಲ ಸೇವೆಯನ್ನು ಒದಗಿಸುವ ಕುರಿತು ಹೊರಸಂಪನ್ಮೂಲ ಏಜೆನ್ಸಿಗಳಿಂದ ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ (http://kppp.gov.in)ನಲ್ಲಿ ಹೊರಡಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ವೆಬ್‌ಸೈಟ್ ಮತ್ತು ಈ ಕಛೇರಿಯಲ್ಲಿ ಕಛೇರಿಯ ಸಮಯದಲ್ಲಿ ಸಂಪರ್ಕಿಸಿ ಪಡೆದುಕೊಳ್ಳಬಹುದಾಗಿದೆ.

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ಉಪವಿಭಾಗ, ಚಾಮರಾಜನಗರ.**

ಸಂ:ವಾಸಸಂಇ: ಚಾ.ನಗರ: 321:2024-25

## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಪಿಎ/ಟಿಪಿ/ಭೂಉಬ/71/2024-25/1602 ದಿನಾಂಕ : 07.10.2024

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಶ್ರೀ ವೆಂಕಟಪ್ಪ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 119/2 | 0-37.08 & 1ಗು 'ಎ' ಖರಾಬು | ವ್ಯವಸಾಯ | ವಸತಿ |
| 2. | ಶ್ರೀಮತಿ ಕೆಂಪಮ್ಮ ಕೋಂ ಲೇ॥ ಕೆ.ವಿ. ನಂಜುಂಡಪ್ಪ & ಶ್ರೀ ಕೇಶವರಾಜು ಬಿನ್ ಲೇ॥ ಕೆ.ವಿ ನಂಜುಂಡಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 120/2 | 2-23 | ವ್ಯವಸಾಯ | ವಸತಿ |
| 3. | ಶ್ರೀ ಶಾಂತಕುಮಾರ್ ವಿ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 120/3 | 0-36 | ವ್ಯವಸಾಯ | ವಸತಿ |
| 4. | ಶ್ರೀ ಶಾಂತಕುಮಾರ್ ವಿ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 129/1 | 0-13 | ವ್ಯವಸಾಯ | ವಸತಿ |
| 5. | ಶ್ರೀಮತಿ ಬಚ್ಚಮ್ಮ ಕೋಂ ದೇವಣ್ಣ | ದೇವನಹಳ್ಳಿ | ಕುಂದಾಣ | ಕುಂದಾಣ | 129/2 | 0-20 | ವ್ಯವಸಾಯ | ವಸತಿ |
| 6. | ಶ್ರೀಮತಿ ಕವಿತಾ ಬಿನ್ ವೆಂಕಟೇಶ್ | ದೇವನಹಳ್ಳಿ | ಕುಂದಾಣ | ಕುಂದಾಣ | 129/3 | 1-17 | ವ್ಯವಸಾಯ | ವಸತಿ |
| 7. | ಶ್ರೀ ಶಾಂತಕುಮಾರ್ ವಿ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 129/4 | 0-35 | ವ್ಯವಸಾಯ | ವಸತಿ |
| 8. | ಶ್ರೀ ಶಾಂತಕುಮಾರ್ ವಿ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 129/5 | 0-35 | ವ್ಯವಸಾಯ | ವಸತಿ |
| 9. | ಶ್ರೀಮತಿ ಕವಿತಾ ಕೋಂ ವೆಂಕಟಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 129/6 | 0-31 | ವ್ಯವಸಾಯ | ವಸತಿ |
| 10. | ಶ್ರೀ ಕೆ.ಎಂ ವೆಂಕಟರಮಣಸ್ವಾಮಿ ಬಿನ್ ಲೇ॥ ಮುನಿನಂಜಪ್ಪ & ಶ್ರೀಮತಿ ರತ್ನಮ್ಮ ಕೋಂ ಕೆ.ಎಂ. ವೆಂಕಟರಮಣಸ್ವಾಮಿ | ದೇವನಹಳ್ಳಿ | ಕುಂದಾಣ | ಕುಂದಾಣ | 132/3 | 0-21 | ವ್ಯವಸಾಯ | ವಸತಿ |
| 11. | ಶ್ರೀ ಶಾಂತಕುಮಾರ್ ವಿ ಬಿನ್ ಲೇ॥ ವೆಂಕಟೇಶಪ್ಪ | ದೇವನಹಳ್ಳಿ | ಕುಂದಾಣ | ಕುಂದಾಣ | 132/4 | 0-20 | ವ್ಯವಸಾಯ | ವಸತಿ |
| 12. | ಶ್ರೀಮತಿ ಅಶ್ವಥಮ್ಮ ಬಿನ್ ಸುಬ್ಬಯ್ಯ | ದೇವನಹಳ್ಳಿ | ಕುಂದಾಣ | ಕುಂದಾಣ | 132/5 | 0-05 | ವ್ಯವಸಾಯ | ವಸತಿ |
| 13. | ಶ್ರೀಮತಿ ಮುನಿರತ್ನಮ್ಮ ಬಿನ್ ಸುಬ್ಬಯ್ಯ | ದೇವನಹಳ್ಳಿ | ಕುಂದಾಣ | ಕುಂದಾಣ | 132/6 | 0-05 | ವ್ಯವಸಾಯ | ವಸತಿ |
| 14. | ಶ್ರೀಮತಿ ವಿಶಾಲಾಕ್ಷಿ ಬಿನ್ ಸುಬ್ಬಮ್ಮ | ದೇವನಹಳ್ಳಿ | ಕುಂದಾಣ | ಕುಂದಾಣ | 132/7 | 0-05 | ವ್ಯವಸಾಯ | ವಸತಿ |
| 15. | ಶ್ರೀ ರಾಮಾಂಜಿನಪ್ಪ ಬಿನ್ ಸುಬ್ಬಯ್ಯ | ದೇವನಹಳ್ಳಿ | ಕುಂದಾಣ | ಕುಂದಾಣ | 132/8 | 0-05 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಉದ್ದೇಶಿತ ಜಮೀನುಗಳಲ್ಲಿ ಯೋಜಿತ ಬೆಳವಣಿಗೆಯ ಅಭಿವೃದ್ಧಿಯನ್ನು ಅಭಿವೃದ್ಧಿಪಡಿಸುವುದರಿಂದ ಸುತ್ತಮುತ್ತಲ ಗ್ರಾಮಸ್ಥರಿಗೆ ಉದ್ಯೋಗಾವಕಾಶ ಕಲ್ಪಿಸಿದಂತಾಗುವುದೆಂದೂ ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ಧ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು 'ವ್ಯವಸಾಯ ವಲಯ' ದಿಂದ 'ವಸತಿ ವಲಯ' ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/-
**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ**

ವಾ.ಸಾ.ಸಂ.ಇ/ವಾಪ್ರ/2423/2024-25

## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಪಿಎ/ಟಿಪಿ/ಭೂಉಬ/35/2024-25/1605 ದಿನಾಂಕ: 04.10.2024

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು **ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ** ಭೂಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಶ್ರೀ ಅಶೋಕ ರೆಡ್ಡಿ ಎ ಬಿನ್ ಆಶ್ವಥಪ್ಪ, ಶ್ರೀ ಎಂ ದಿಲೀಪ್ ಬಿನ್ ಮಾರಪ್ಪ ಹಾಗೂ ಶ್ರೀಮತಿ ದೀಪ ಎಸ್ ವಾಣಿ ಕೋಂ ಶ್ರೀ ದೇವ್ ಕುಮಾರ್ ಆರ್. | ದೇವನಹಳ್ಳಿ | ಕುಂದಾಣ | ಇಲ್‌ತೊರೆ | 55/1 | 0-38 | ವ್ಯವಸಾಯ | ವಸತಿ |
| 2 | ಶ್ರೀ ಅಶೋಕ ರೆಡ್ಡಿ ಎ ಬಿನ್ ಆಶ್ವಥಪ್ಪ, | ದೇವನಹಳ್ಳಿ | ಕುಂದಾಣ | ಇಲ್‌ತೊರೆ | 55/2 | 0-19 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಉದ್ದೇಶಿತ ಜಮೀನುಗಳಲ್ಲಿ ಯೋಜಿತ ಬೆಳವಣಿಗೆಯ ಅಭಿವೃದ್ಧಿಯನ್ನು ಅಭಿವೃದ್ಧಿಪಡಿಸುವುದರಿಂದ ಸುತ್ತಮುತ್ತಲ ಗ್ರಾಮಸ್ಥರಿಗೆ ಉದ್ಯೋಗಾವಕಾಶ ಕಲ್ಪಿಸಿದಂತಾಗುವುದೆಂದೂ ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ಧ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು **'ವ್ಯವಸಾಯ ಭೂಉಪಯೋಗ ವಲಯ'** ದಿಂದ **'ವಸತಿ ವಲಯ'**ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- **ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ**

ವಾಸಾಸಂಇ/ವಾಪ್ರ/ಜೆಎ/2420/2024-25

# ವಜ್ರಮುಷ್ಟಿ ಕಾಳಗ : ಚಾಮರಾಜನಗರದಿಂದ ಶ್ರೀನಿವಾಸ್ ಜೆಟ್ಟಿ ಆಯ್ಕೆ

**ಚಾಮರಾಜನಗರ:** ವಿಶ್ವವಿಖ್ಯಾತ ಮೈಸೂರು ಜಂಬೂ ಸವಾರಿಗೆ ದಿನಗಣನೆ ಆರಂಭವಾಗಿದ್ದು, ನಾಡಹಬ್ಬದ ಪ್ರಮುಖ ಆಕರ್ಷಣೆಯಾದ ಮುಷ್ಠಿ ಕಾಳಗಕ್ಕೆ ಚಾಮರಾಜನಗರದ ಜಟ್ಟಿ ನಿತ್ಯ ಬೆವರು ಹರಿಸುತ್ತಿದ್ದಾರೆ. ಮುಷ್ಠಿ ಕಾಳಗಕ್ಕೆ ತಾನು ರೆಡಿ ಎನ್ನುತ್ತಿದ್ದಾರೆ ಪೈಲ್ವಾನ್ ಶ್ರೀನಿವಾಸ್ ಜಟ್ಟಿ.

ನಾಡಹಬ್ಬ ದಸರಾದ ವಿಜಯದಶಮಿ ದಿನದಂದು ಮೈಸೂರಿನ ಅಂಬಾ ವಿಲಾಸ ಅರಮನೆಯ ಕರಿಕಲ್ಲು ತೊಟ್ಟಿಯಲ್ಲಿ ನಡೆಯುವ ಮೈನವಿರೇಳಿಸುವ ವಜ್ರಮುಷ್ಠಿ ಕಾಳಗಕ್ಕೆ ಚಾಮರಾಜನಗರದ ಶ್ರೀನಿವಾಸ ಜಟ್ಟಿ ಸಜ್ಜುಗೊಳ್ಳುತ್ತಿದ್ದಾರೆ. ಕಳೆದ ಎರಡು ತಿಂಗಳಿನಿಂದ ಚಾಮರಾಜನಗರದ ದೊಡ್ಡ ಗರಡಿಯಲ್ಲಿ ತರಬೇತುದಾರ ಪುಟ್ಟಣ್ಣ ಜಟ್ಟಿ ಅವರಿಂದ ಶ್ರೀನಿವಾಸ್ ತರಬೇತಿ ಪಡೆಯುತ್ತಿದ್ದಾರೆ. ಈ ಹಿಂದೆ 2 ಬಾರಿ ಮುಷ್ಠಿ ಕಾಳಗದಲ್ಲಿ ಭಾಗವಹಿಸಿರುವ ಅನುಭವ ಇವರಿಗಿದೆ.



ದಸರಾ ಮಹೋತ್ಸವದಲ್ಲಿ ವಜ್ರಮುಷ್ಠಿ ಕಾಳಗಕ್ಕೆ ಅತ್ಯಂತ ಮಹತ್ವವಿದೆ. ವಿಜಯದಶಮಿ ದಿನ ನಡೆಯುವ ಜಂಬೂ ಸವಾರಿಗೂ ಮೊದಲು ರಾಜ ಮನೆತನದವರ ಸಮ್ಮುಖದಲ್ಲಿ ಈ ಕಾಳಗ ನಡೆಯುತ್ತದೆ. ಸಂಪ್ರದಾಯದ ಉದ್ದೇಶದಿಂದ ನಡೆಯುವ ಈ ಕಾಳಗ ಕೆಲವೇ ಸೆಕೆಂಡುಗಳಲ್ಲಿ ಮುಗಿಯುತ್ತದೆ. ಆದರೂ, ಈ ಕಾಳಗವನ್ನು ವೀಕ್ಷಿಸಲು ಜನರ ದಂಡೇ ನೆರೆಯುತ್ತದೆ. ಜಟ್ಟಿ ಜನಾಂಗಕ್ಕೆ ಸೇರಿದ ನಾಲ್ವರು ಪೈಲ್ವಾನರು ವಜ್ರಮುಷ್ಠಿ ಕಾಳಗ ಮಾಡುತ್ತಾರೆ. ಕೈಯಲ್ಲಿ ದಂತದ ನಖವನ್ನು ಧರಿಸಿ ಮಾಡುವ ಈ ಹೊಡೆದಾಟದಲ್ಲಿ ಯಾರಾದರೂ ಒಬ್ಬ ಜಟ್ಟಿಯ ತಲೆಯಲ್ಲಿ ರಕ್ತ ಸುರಿಯಲು ಆರಂಭವಾದ ತಕ್ಷಣ ಕಾಳಗವನ್ನು ಮುಕ್ತಾಯ ಮಾಡಲಾಗುತ್ತದೆ.

ಈ ವರ್ಷ ಯಾರನ್ನು ಕಳುಹಿಸುತ್ತೇವೆ ಎಂಬುದರ ಬಗ್ಗೆ ರಾಜಮನೆತನಕ್ಕೆ ಮೊದಲೇ ತಿಳಿಸುತ್ತೇವೆ. ದಸರಾ ಆರಂಭಕ್ಕೆ ಒಂದು ತಿಂಗಳು ಇರುವಾಗ ಆಯ್ಕೆ ಮಾಡಿದವರಿಗೆ ತರಬೇತಿ ನೀಡಲು ಆರಂಭಿಸುತ್ತೇವೆ. ಕಾಳಗದ ನಡೆಗಳನ್ನು ಕಲಿಸಲಾಗುತ್ತದೆ. ನಿತ್ಯ ಬೆಳಗ್ಗೆ ತರಬೇತಿ ಇರುತ್ತದೆ. ಜಟ್ಟಿಗಳಾಗಿರುವುದು ನಮಗೆ ಹೆಮ್ಮೆ ಎಂದು ತರಬೇತುದಾರ ಪುಟ್ಟಣ್ಣ ಜಟ್ಟಿ ಸಂತಸ ವ್ಯಕ್ತಪಡಿಸುತ್ತಾರೆ. ವಜ್ರಮುಷ್ಠಿ ಕಾಳಗದಲ್ಲಿ ಭಾಗವಹಿಸುವುದೆಂದರೆ ಅದೊಂದು ಗೌರವ. ನಮ್ಮ ಜನಾಂಗಕ್ಕೆ ಮಾತ್ರ ಇದರಲ್ಲಿ ಭಾಗಿಯಾಗಲು ಅವಕಾಶ. ಇದಕ್ಕಾಗಿ ನಮಗೆ ಗೌರವಧನ ಸಿಗುತ್ತದೆ. ಆದರೆ, ದುಡ್ಡಿಗಾಗಿ ನಾವು ಇದರಲ್ಲಿ ಪಾಲ್ಗೊಳ್ಳುತ್ತಿಲ್ಲ. ಅದು ನಮಗೆ ಮುಖ್ಯವೂ ಅಲ್ಲ. ಹಲವಾರು ವರ್ಷಗಳಿಂದ ನಡೆದುಕೊಂಡು ಬರುತ್ತಿರುವ ಸಂಪ್ರದಾಯವನ್ನು ಮುಂದುವರಿಸಿಕೊಂಡು ಹೋಗುವುದು ಮತ್ತು ರೋಮಾಂಚಕಾರಿಯಾದ ಈ ಸಮರ ಕಲೆಯನ್ನು ಉಳಿಸುವುದಕ್ಕಾಗಿ ಸಂತೋಷದಿಂದಲೇ ಪಾಲ್ಗೊಳ್ಳುತ್ತೇವೆ ಎಂದು ಈ ಬಾರಿ ಕಾಳಗಕ್ಕೆ ಅಣಿಯಾಗುತ್ತಿರುವ ಶ್ರೀನಿವಾಸ್ ಜಟ್ಟಿ ಹೇಳುತ್ತಾರೆ. ಒಟ್ಟಿನಲ್ಲಿ ಶತಮಾನಗಳಿಂದ ಇರುವ ಸಮರ ಕಲೆಯನ್ನು ನಾಡಹಬ್ಬದ ದಿನದಂದು ಪ್ರದರ್ಶಿಸಿ ದೇವರು ಮತ್ತು ರಾಜರಿಗೆ ರಕ್ತ ಹರಿಸುವ ಇವರ ಧೈರ್ಯ, ಸಾಹಸ ನಿಜಕ್ಕೂ ರೋಮಾಂಚಕಾರಿಯಾಗಿದೆ.

# ಗ್ರಾಪಂ ಪಿಡಿಒ, ಕಾರ್ಯದರ್ಶಿಗಳ ಧರಣಿ

**ಚಾಮರಾಜನಗರ:** ವರ್ಗಾವಣೆ ನಿಯಮ ಬದಲಾವಣೆ ಮುನ್ನ ಸಂಘದ ಸಲಹೆ ಪಡೆಯಬೇಕು, ಬೇರೆ ತಾಲ್ಲೂಕಿಗೆ ವರ್ಗಾವಣೆ ನಿಯಮ ಕೈಬಿಡಬೇಕು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ನೇತೃತ್ವದಲ್ಲಿ ಜಿಲ್ಲಾಡಳಿತ ಭವನದ ಎದುರು ಅನಿರ್ಧಿಷ್ಟ ಕಾಲ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರದ ಜಿಲ್ಲಾಡಳಿತ ಭವನ ಮುಂದೆ ಧರಣಿ ಕುಳಿತ ನೌಕರರು ಸರ್ಕಾರ ನೌಕರರ ವಿರೋಧಿ ನೀತಿಗಳನ್ನು ಅನುಸರಿಸುತ್ತಿದೆ ಎಂದು ಬಿತ್ತಿಪತ್ರ ಪ್ರದರ್ಶನ ಮಾಡಿ ಅಸಮಾಧಾನ ವ್ಯಕ್ತಪಡಿಸಿದರು. ಈ ಸಂದರ್ಭ ಮಾತನಾಡಿದ ಪಿಡಿಒ ನೌಕರರ ಸಂಘದ ಅಧ್ಯಕ್ಷ ಡಿ.ಕುಮಾರಸ್ವಾಮಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೊಳಪಡುವ ಗ್ರಾಮ ಪಂಚಾಯಿತಿ ಕಚೇರಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರ ನಿರಂತರವಾಗಿ ಮನವಿ ಸಲ್ಲಿಸುತ್ತಾ ಬಂದರೂ ಪ್ರಯೋಜನವಾಗಿಲ್ಲ. ಸರ್ಕಾರದ ನಿರ್ಲಕ್ಷ್ಯ ಧೋರಣೆ ಖಂಡಿಸಿ ರಾಜ್ಯ ಸಮಿತಿಯ ಆದೇಶದಂತೆ ಗ್ರಾಮ ಪಂಚಾಯಿತಿಯ ಎಲ್ಲ ಸೇವೆಗಳನ್ನು ಬಂದ್ ಮಾಡಿ ರಾಜ್ಯದಾದ್ಯಂತ ಪ್ರತಿಭಟನೆ ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ 65 ರಿಂದ 70ರಷ್ಟು ಜನರಿಗೆ ಗ್ರಾಮ ಪಂಚಾಯಿತಿ ಸರ್ಕಾರದ ಸೇವೆಗಳನ್ನು ಒದಗಿಸುತ್ತಿದೆ. ಗ್ರಾಮ ಪಂಚಾಯತಿ, ಅಧ್ಯಕ್ಷರು,ಉಪಾಧ್ಯಕ್ಷರು, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕ್ಲರ್ಕ್ ಕಂ ಡಿಇಒ, ಕರ ವಸೂಲಿಗಾರರು, ಕಚೇರಿ ಸಹಾಯಕರು, ಸ್ವಚ್ಛತಾಗಾರರು ದುಡಿಯುತ್ತಿದ್ದಾರೆ. ಕಾರ್ಯನಿರ್ವಹಣೆಯಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಪರಿಹರಿಸುವಂತೆ ಮನವಿ ಮಾಡಿದರೂ ಈಡೇರಿಲ್ಲ. ಸರ್ಕಾರ ತಕ್ಷಣ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಸಂಘದ ಗೌರವ ಅಧ್ಯಕ್ಷ ಎನ್.ಜಿ.ಮಾದಪ್ಪ ಮಾತನಾಡಿ, ಗ್ರಾಮ ಪಂಚಾಯಿತಿಗಳಲ್ಲಿರುವ ಸಮಸ್ಯೆ ಪರಿಹರಿಸುವಂತೆ ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖೆಗೆ ಹಲವು ವರ್ಷಗಳಿಂದ ಮನವಿ ಸಲ್ಲಿಸುತ್ತಾ ಬಂದರೂ ಪ್ರಯೋಜನವಾಗುತ್ತಿಲ್ಲ. ಎಲ್ಲ ಸಮಸ್ಯೆಗಳಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ನೌಕರರನ್ನು ಹಾಗೂ ಸಿಬ್ಬಂದಿಯನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತಿದೆ. ಈ ಧೋರಣೆಯನ್ನು ಖಂಡಿಸಿ ಗ್ರಾಮ ಪಂಚಾಯತಿಯಲ್ಲಿ ಸಿಗುವ ಸೇವೆಗಳಾದ ನರೇಗಾ,15ನೇ ಹಣಕಾಸು ಯೋಜನೆ ಕಾರ್ಯಕ್ರಮಗಳು, ಆಶ್ರಯ ಮನೆಗಳ ನಿರ್ಮಾಣ, ಇ-ಜಾಮೆ, ಸ್ವಚ್ಛ ಭಾರತ್ ಮಿಷನ್, ಬಾಪೂಜಿ ಸೇವಾ ಕೇಂದ್ರದ ಸೇವೆಗಳು, ಕಸ ಸಂಗ್ರಹಣೆ, ಕುಡಿಯುವ ನೀರು ಸರಬರಾಜು, ವಿದ್ಯುತ್ ದೀಪಗಳ ನಿರ್ವಹಣೆ, ಕಚೇರಿ ಕರ್ತವ್ಯ ನಿಲ್ಲಿಸಿ ಅನಿರ್ದಿಷ್ಟಾವಧಿ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದರು. ಪ್ರತಿಭಟನೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ಜಿಲ್ಲಾಧ್ಯಕ್ಷ ಕೆಂಪರಾಜು, ಪ್ರಧಾನ ಕಾರ್ಯದರ್ಶಿ ಪುನೀತ್, ಉಪಾಧ್ಯಕ್ಷ ಬಸಪ್ಪನಪಾಳ್ಯ ರೇವಣ್ಣ, ರೂಪೇಶ್ ಕಾಡಹಳ್ಳಿ, ಎಸ್ಡಿಎ ಮತ್ತು ಕಾರ್ಯದರ್ಶಿಗಳ ಸಂಘದ ಅಧ್ಯಕ್ಷ ಕೊತ್ತಲವಾಡಿ ಮಹದೇವಸ್ವಾಮಿ, ಡಿಇಒ ಸಂಘಗಳ ಅಧ್ಯಕ್ಷ ರಾಜೇಂದ್ರ, ರಾಜ್ಯ ಪರಿಷತ್ ಸದಸ್ಯ ಸುರೇಶ್, ಪ್ರಧಾನ ಕಾರ್ಯದರ್ಶಿ ಶಾಂತರಾಜು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ನೌಕರರು ಇದ್ದರು.



## ರೈತನ ಮೇಲೆ ಅರಣ್ಯ ಇಲಾಖೆ ಸಿಬ್ಬಂದಿ ಹಲ್ಲೆ

# ರೈತ ಸಂಘ ಪ್ರತಿಭಟನೆ

**ಯಳಂದೂರು:** ತಾಲೂಕಿನ ಕೆ. ದೇವರಹಳ್ಳಿ ಗ್ರಾಮದ ರೈತ ಮರಿಸ್ವಾಮಪ್ಪ ಎಂಬುವವರ ಮೇಲೆ ಅರಣ್ಯ ಇಲಾಖೆಯ ವಾಚರ್ ಹಲ್ಲೆ ನಡೆಸಿದ್ದು ಇವರ ವಿರುದ್ಧ ರೈತ ಸಂಘದ ಕಾರ್ಯಕರ್ತರು ಪಟ್ಟಣದ ಅರಣ್ಯ ಇಲಾಖೆಯ ಕಚೇರಿಯ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಿದರು.



ಈ ಸಂದರ್ಭದಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್ ಮಾತನಾಡಿ, ತಾಲೂಕಿನ ಕಾಡಂಚಿನ ಗ್ರಾಮಗಳಾದ ಕೆ. ದೇವರಹಳ್ಳಿ, ಶಿವಕಳ್ಳಿ, ಮಲಾರಪಾಳ್ಯ ಸೇರಿದಂತೆ ಹಲವು ಗ್ರಾಮಗಳಲ್ಲಿ ರೈತರು ಇಲ್ಲಿನ ಸರ್ಕಾರಿ ಗೋಮಾಳದಲ್ಲಿ ತಮ್ಮ ಜಾನುವಾರುಗಳನ್ನು ಮೇಯಿಸಲು ತೆರಳುತ್ತಾರೆ. ಇವರು ಪ್ರತಿನಿತ್ಯ ಅರಣ್ಯ ಇಲಾಖೆಯ ಸಿಬ್ಬಂಧಿಯಿಂದ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ. ಇಲಾಖೆಯ ಒಬ್ಬ ವಾಚರ್ ಕೆ. ದೇವರಹಳ್ಳಿ ಗ್ರಾಮದ ರೈತ ಮರಿಸ್ವಾಮಪ್ಪ ಎಂಬುವವರ ಮೇಲೆ ದೈಹಿಕವಾಗಿ ಹಲ್ಲೆ ನಡೆಸಿದ್ದಾರೆ. ಇದು ಖಂಡನಾರ್ಹ ವಿಷಯವಾಗಿದೆ. ರೈತರು ಅರಣ್ಯದೊಳಗೆ ತಮ್ಮ ಜಾನುವಾರುಗಳನ್ನು ಬಿಡುವುದಿಲ್ಲ, ಸರ್ಕಾರಿ ಗೋಮಾಳಗಳಲ್ಲಿ ದನ, ಹಸು, ಕರು, ಕುರಿ, ಮೇಕೆಗಳನ್ನು ಮೇಯಿಸಲು ತೆರಳುತ್ತಾರೆ. ಆದರೆ ಅರಣ್ಯ ಸಿಬ್ಬಂಧಿ ಇಲ್ಲೂ ಕೂಡ ಜಾನುವಾರ ಮೇಯಿಸಲು ಅವಕಾಶ ನೀಡುತ್ತಿಲ್ಲ ಎಂಬ ದೂರಿದೆ. ಈ ಇಲಾಖೆಯ ಸೂಕ್ತ ಕ್ರಮ ವಹಿಸಬೇಕು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಇಲ್ಲವಾದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಇದಕ್ಕೆ ಆರ್‌ಎಫ್‌ಒ ನಾಗೇಂದ್ರನಾಯಕ್ ನಮ್ಮ ಇಲಾಖೆಯ ಸಿಬ್ಬಂಧಿಯಿಂದ ಹಲ್ಲೆಯಾಗಿದ್ದರೆ ಇದಕ್ಕೆ ನಾನು ಕ್ಷಮೆಯಾಚಿಸುತ್ತೇನೆ. ಈತನ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತದೆ. ಇನ್ನು ಮುಂದೆ ರೈತರಿಗೆ ನಮ್ಮ ಇಲಾಖೆಯಿಂದ ಯಾವುದೇ ತೊಂದರೆಯಾಗದಂತೆ ಇಲಾಖೆಯ ಸಿಬ್ಬಂಧಿಗೆ ಎಚ್ಚರಿಕೆ ನೀಡುತ್ತೇನೆ ಎಂದರು. ನಂತರ ಎಸ್‌ಬಿಐ ಬ್ಯಾಂಕ್ ಬಳಿ ಬಂದ ಪ್ರತಿಭಟನಾಕಾರರು ಈ ಬ್ಯಾಂಕಿನ ಶಾಖೆಯಲ್ಲಿ ಪಿಎಂ ಕಿಸಾನ್ ಯೋಜನೆಯಡಿಯಲ್ಲಿನ ಹಣ, ಸಾಮಾಜಿಕ ಭದ್ರತಾ ಕೇವಣಿ, ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಸೇರಿದಂತೆ ಇತರೆ ರೈತರಿಗೆ ಬರುವ ಹಣವನ್ನು ಸಾಲಕ್ಕೆ ವಜಾ ಮಾಡಿಕೊಳ್ಳಲಾಗುತ್ತಿದೆ. ಈ ಬಗ್ಗೆ ಈ ಹಿಂದೆ ಸಂಬಂಧಪಟ್ಟ ಲೀಡ್ ಬ್ಯಾಂಕಿನ ವ್ಯವಸ್ಥಾಪಕರು ಈ ಹಣವನ್ನು ಸಾಲಕ್ಕೆ ವಜಾ ಮಾಡಿಕೊಳ್ಳಬಾರದು ಎಂದು ಸೂಚನೆ ನೀಡಿದ್ದರೂ ಇದನ್ನು ದಿಕ್ಕರಿಸಲಾಗುತ್ತಿದೆ ಎಂದು ವ್ಯವಸ್ಥಾಪಕರನ್ನು ತರಾಟೆಗೆ ತೆಗೆದುಕೊಂಡರು. ನಂತರ ಬ್ಯಾಂಕಿನ ವ್ಯವಸ್ಥಾಪಕರು ಈ ಬಗ್ಗೆ ಹೀಗಾಗದಂತೆ ಕ್ರಮ ವಹಿಸುವ ಭರವಸೆ ನೀಡಿದ ಮೇಲೆ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

ಸಂಘದ ತಾಲೂಕು ಅಧ್ಯಕ್ಷ ಸಿದ್ದಲಿಂಗಸ್ವಾಮಿ ಸದಸ್ಯರಾದ ಗೌಡಹಳ್ಳಿ ಸ್ವಾಮಿ, ವಷಬೇಂದ್ರ, ಷಡಕ್ಷರಿ, ಶಿವರುದ್ರಪ್ಪ, ಮಹದೇವಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ರೈತ ದಸರಾ ಮೆರವಣಿಗೆಯಲ್ಲಿ ಕಲಾತಂಡಗಳು ಭಾಗಿ

**ಚಾಮರಾಜನಗರ:** ಚಾಮರಾಜನಗರ ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 9ರಂದು ರೈತ ದಸರಾ ಹಮ್ಮಿಕೊಂಡಿದ್ದು, ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗಿಯಾಗಲಿವೆ.

ಚಾಮರಾಜನಗರ ತಾಲೂಕು ಅಂಬಳೆ ಗ್ರಾಮದ ಆರ್. ನಂಜುಂಡಸ್ವಾಮಿ ಮತ್ತು ತಂಡದವರಿಂದ ನಾದಸ್ವರ, ರಾಮಸಮುದ್ರದ ಡಿ ಶಂಕರ್ ಮತ್ತು ತಂಡದವರಿಂದ ಗೊರವರ ಕುಣಿತ, ಗಂಗವಾಡಿ ಗ್ರಾಮದ ಡಾ. ಶಿವರುದ್ರಸ್ವಾಮಿ ಮತ್ತು ತಂಡದವರಿಂದ ವೀರಗಾಸೆ, ಕೆಕೆಹುಂಡಿ ಗ್ರಾಮದ ಚಂದ್ರಶೇಖರ್ ಮತ್ತು ತಂಡದವರಿಂದ ಡೊಳ್ಳು ಕುಣಿತ, ರಾಮಸಮುದ್ರದ ಮಹದೇವಸ್ವಾಮಿ. ಎಂ ಮತ್ತು ತಂಡದಿಂದ ಕಂಸಾಳೆ, ಕೆಂಪನಪುರ ಗ್ರಾಮದ ಶಾಂತರಾಜು ಮತ್ತು ತಂಡದವರಿಂದ ಬ್ಯಾಂಡ್ ಸೆಟ್ ವಾದನ, ಬನ್ನಿತಾಳಪುರ ಗ್ರಾಮದ ನಿಂಗ ಚಾರಿ ಮತ್ತು ತಂಡದವರಿಂದ ಗಾರುಡಿ ಗೊಂಬೆ, ಸಿದ್ದಯ್ಯನಪುರ ಗ್ರಾಮದ ಪುಷ್ಪಲತಾ ಮತ್ತು ತಂಡದವರಿಂದ ಮಹಿಳೆಯರ ಕಂಸಾಳೆ, ಬೂದಿತಿಟ್ಟು ಗ್ರಾಮದ ರಾಜು ಅವರಿಂದ ತಮಟೆ ವಾದನ, ರಾಮಸಮುದ್ರದ ಸುರೇಶ್ ಎಂ ಮತ್ತು ತಂಡದವರಿಂದ ಗೊರವರ ಕುಣಿತ, ಬಂಡಿಗೆರೆ ಗ್ರಾಮದ ರವಿಕುಮಾರ್ ಪಿ ಮತ್ತು ತಂಡದವರಿಂದ ನಾದಸ್ವರ, ಚಾಮರಾಜನಗರ ಪಟ್ಟಣದ ಭಗಿರಥನಗರದ ಸೌಂದರಾಜು ಮತ್ತು ತಂಡದವರಿಂದ ನಾದಸ್ವರ, ಚಂದಕವಾಡಿ ಗ್ರಾಮದ ಸಿದ್ದರಾಜು ಮತ್ತು ತಂಡದವರಿಂದ ನಾದಸ್ವರ, ರಾಮಸಮುದ್ರದ ಆನಂದ ಮತ್ತು ತಂಡದವರಿಂದ ನಾದಸ್ವರ, ಸೋಮವಾರಪೇಟೆಯ ಎಸ್ ಕೆಂಪರಾಜು ಮತ್ತು ತಂಡದವರಿಂದ ನಾದಸ್ವರ, ರಾಮಸಮುದ್ರದ ತೇಜು ಆರ್ ಮತ್ತು ತಂಡದವರಿಂದ ಡೊಳ್ಳು ಕುಣಿತ, ಗುಂಡ್ಲುಪೇಟೆ ತಾಲೂಕು ಯಡವನಹಳ್ಳಿ ಗ್ರಾಮದ ಸುದರ್ಶನ್ ವೈಆರ್ ಮತ್ತು ತಂಡದವರಿಂದ ಡೊಳ್ಳು ಕುಣಿತ, ಚಾಮರಾಜನಗರ ತಾಲೂಕಿನ ಚನ್ನಪ್ಪನಪುರ ಗ್ರಾಮದ ನಾಗೇಂದ್ರ ಮತ್ತು ತಂಡದವರಿಂದ ನಂದಿ ಕಂಬ, ಬಂಡಿಗೆರೆ ಗ್ರಾಮದ ಸಿದ್ದರಾಜು ಮತ್ತು ತಂಡದವರಿಂದ ಹುಲಿ ವೇಷ, ರಾಮಸಮುದ್ರದ ರಾಜೀವ್ ಆರ್.ಎ ಮತ್ತು ತಂಡದವರಿಂದ ಕಂಸಾಳೆ ನೃತ್ಯ ಕಲಾತಂಡಗಳು ರೈತ ದಸರಾ ಮೆರವಣಿಗೆಯಲ್ಲಿ ಭಾಗವಹಿಸಲಿವೆ.

# ನವರಾತ್ರಿ ಹಿನ್ನೆಲೆಯಲ್ಲಿ ಲಲಿತ ಸಹಸ್ರನಾಮ ಪಾರಾಯಣ

**ಮಾಲೂರು:** ನಗರ್ತ ಮಹಿಳಾ ಸಂಘದ ವತಿಯಿಂದ ಲಲಿತಾ ಸಹಸ್ರನಾಮ ಪಾರಾಯಣ ಕಾರ್ಯಕ್ರಮ ನಡೆಯಿತು.

ಲಲಿತಾ ಸಹಸ್ರ ನಾಮ ಪಾರಾಯಣ ಮಾಡುವುದರಿಂದ ಚಂಚಲವಾದ ಮನಸ್ಸು ಏಕಾಗ್ರಗೊಂಡು ಭಗವಂತನ ದರ್ಶನ ಸಾನಿಧ್ಯಕ್ಕೆ ನೆರವಾಗುತ್ತದೆ ಎಂದು ಸಂಘದ ಅಧ್ಯಕ್ಷೆಯಾದ ಡಿ.ಕುಸುಮ ವಿಜಯಕುಮಾರ್ ರವರು ತಿಳಿಸಿದರು.

ನವರಾತ್ರಿ ಹಿನ್ನೆಲೆಯಲ್ಲಿ ಮಾಲೂರು ನಗರ್ತ ಮಹಿಳಾ ಸಂಘದ ವತಿಯಿಂದ ದಸರಾ ಬೊಂಬೆಗಳನ್ನು ಇಟ್ಟು ಪೂಜಿಸಲಾಗುತ್ತಿದೆ, ಪ್ರತಿದಿನ ಒಬ್ಬೊಬ್ಬರ ಮನೆಯಲ್ಲಿ ಲಲಿತ ಸಹಸ್ರನಾಮ ಪಾರಾಯಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರ್ತ ಮಹಿಳಾ ಸಂಘದ ಅಧ್ಯಕ್ಷೆ ಡಿ.ಕುಸುಮ ವಿಜಯಕುಮಾರ್, ಉಪಾಧ್ಯಕ್ಷೆ ಎಸ್.ಪಿ.ರೂಪ



ಗುರುಪ್ರಕಾಶ್, ಕಾರ್ಯದರ್ಶಿ ಎನ್.ಕುಮುದ ಮಹೇಶ್, ಖಜಾಂಚಿ ದಿವ್ಯ ಶಿವಕುಮಾರ್.ಎಂ, ನಿರ್ದೇಶಕರಾದ ಆರ್. ಮಮತಾ ನಾಗರಾಜು, ಎಸ್. ಮಂಜುಳಾ ಶಿವಶಂಕರ್, ವಿ.ಗಾಯತ್ರಿ ವಿಜಯ್ ಕುಮಾರ್, ಎಂ.ನಂದಿನಿ ರಮೇಶ್, ಬಿ.ನವ್ಯ ಮಂಜುನಾಥ್, ಪಿ.ಜಯಂತಿ ಉಮಾಶಂಕರ್, ಬಿ.ಮಾಲಾಶ್ರೀ ಮಹೇಶ್, ಎಂ.ಚೈತ್ರ ಮಂಜುನಾಥ್, ಎಸ್.ಪಲ್ಲವಿ ಚಂದ್ರಶೇಖರ್, ಸಿ.ಸುಷ್ಮಾ ರವಿಕುಮಾರ್, ಎನ್ .ಎ.ಬಿಂದು ನಂದೀಶ್ ಹಾಗೂ ಇತರರು ಇದ್ದರು.



ಹುಳಿಯಾರು ಹೋಬಳಿಯ ಬೆಳ್ಳಾರ ಗ್ರಾಮದಲ್ಲಿ ಶ್ರೀ ವಿನಾಯಕ ಯುವಕ ಸಂಘದ ವತಿಯಿಂದ ಪ್ರತಿಷ್ಟಾಪಿಸಿದ್ದ 46 ನೇ ವರ್ಷದ ಶ್ರೀ ವಿಘ್ನೇಶ್ವರನನ್ನು ಗ್ರಾಮದ ಹೊಸಕೆರೆಯಲ್ಲಿ ಸೋಮವಾರ ವಿಸರ್ಜನೆ ಮಾಡಲಾಯಿತು.

# ಎಲ್‌ಐಸಿ ಪ್ರತಿನಿಧಿಗಳ ತರಬೇತಿ ಕೇಂದ್ರದ ಉದ್ಘಾಟನೆ

**ಕೋಲಾರ:** ಎಲ್‌ಐಸಿ ಕೋಲಾರ ಶಾಖೆಯಲ್ಲಿ ನೂತನವಾಗಿ ಪ್ರತಿನಿಧಿಗಳ ತರಬೇತಿ ಕೇಂದ್ರವನ್ನು ಬೆಂಗಳೂರು ವಿಭಾಗ 2ರ ಹಿರಿಯ ವಿಭಾಗಾಧಿಕಾರಿ ಸಿ.ರಾಜಶೇಖರ್ ಉದ್ಘಾಟಿಸಿದರು.

ಸಿ.ರಾಜಶೇಖರ್ ಮಾತನಾಡಿ, ಕೋಲಾರ ಶಾಖೆಯಲ್ಲಿ ಪ್ರತಿನಿಧಿಗಳಿಗಾಗಿ ಡಿಜಿಟಲ್ ತರಬೇತಿ ಕೇಂದ್ರವನ್ನು ಪಾರಂಭಿಸಿರುವುದರಿಂದ ಅಭಿವೃದ್ಧಿ ಅಧಿಕಾರಿಗಳು, ಜೀವ ವಿಮಾ ಸಲಹೆಗಾರರು, ಪ್ರತಿನಿಧಿಗಳಿಗೆ ತರಬೇತಿ ಕೊಡಲು ಅನುಕೂಲವಾಗಿದೆ. ಈ ಹಿಂದೆ ಬೆಂಗಳೂರು ವಿಭಾಗ ಕಚೇರಿಯಲ್ಲಿ ತರಬೇತಿ ಪಡೆಯುತ್ತಿದ್ದರು. ಈಗ ಕೋಲಾರ ಶಾಖೆಯಲ್ಲಿ ನೂತನವಾಗಿ ಡಿಜಿಟಲ್ ತರಬೇತಿ ಕೇಂದ್ರವಾಗಿರುವುದರಿಂದ ಮಾಲೂರು ಶಾಖೆ, ಶ್ರೀನಿವಾಸಪುರ, ಕೋಲಾರ ಶಾಖೆಯ ಎಲ್ಲಾ ಪ್ರತಿನಿಧಿಗಳಿಗೆ ತರಬೇತಿ ನೀಡಲು ಅನುಕೂಲಕವಾಗಿದೆ ಇದನ್ನು ಉಪಯೋಗಿಸಿಕೊಂಡು ಪ್ರತಿನಿಧಿಗಳನ್ನು ನೇಮಕ ಮಾಡಲು ಪರೀಕ್ಷೆಗಳು ಸಹ ಇಲ್ಲಿಯೇ ನಡೆಯುತ್ತದೆ ಪ್ರತಿನಿತ್ಯದ ವ್ಯವಹಾರಗಳು ಎಲ್‌ಐಸಿ ಪ್ಲಾನ್ಗಳ ಬಗ್ಗೆ ತಿಳಿದುಕೊಳ್ಳಬಹುದು ಎಂದು ತಿಳಿಸಿದರು. ಬೆಂಗಳೂರು ವಿಭಾಗ 2ರ ಮಾರುಕಟ್ಟೆ ಅಧಿಕಾರಿ ಅರವಿಂದ್ ಮಾತನಾಡಿ ಪ್ರತಿನಿಧಿಗಳ ತರಬೇತಿ ಕೇಂದ್ರದಿಂದ ಈ ಹಿಂದೆ ಪ್ರತಿನಿಧಿಗಳು, ಅಭಿವೃದ್ಧಿ ಅಧಿಕಾರಿಗಳು ಆಫ್ಲೈನ್ ಮೂಲಕ ಪರೀಕ್ಷೆಯನ್ನು ಬರೆಯುತ್ತಿದ್ದರು. ಈಗ ಡಿಜಿಟಲ್ ಆಗಿರುವುದರಿಂದ ಆನ್ಲೈನ್ ಮೂಲಕ ಪಾಲಿಸಿಗಳ ಬಗ್ಗೆ ಪರೀಕ್ಷೆ ಬಗ್ಗೆ ತಿಳಿದುಕೊಳ್ಳುವುದರಿಂದ ಹೆಚ್ಚಿನ ರೀತಿಯಲ್ಲಿ ಪ್ರತಿನಿಧಿಗಳನ್ನು ನೇಮಕಾತಿ ಮಾಡಲು ಅನುಕೂಲವಾಗಿದೆ ಎಂದು ತಿಳಿಸಿದರು.ಬೆಂಗಳೂರು ವಿಭಾಗ 2ರ ಹಿರಿಯ ವಿಭಾಗಾಧಿಕಾರಿ ಸಿ.ರಾಜಶೇಖರ್, ಮಾರುಕಟ್ಟೆ ಅಧಿಕಾರಿ ಅರವಿಂದ್, ವಿಭಾಗದ ವ್ಯವಸ್ಥಾಪಕಿ ಭುವನೇಶ್ವರಿ, ತರಭೇತಿ ಕೇಂದ್ರದ ಪ್ರಾಂಶುಪಾಲೆ ಶೋಭ, ಕೋಲಾರ ಶಾಖೆಯ ಅಧಿಕಾರಿ ಎನ್.ಆರ್.ಸಿದ್ದೇಶ್, ಶ್ರೀನಿವಾಸಪುರ ಶಾಖಾಧಿಕಾರಿ ಪ್ರಸಾದ್, ಮಾಲೂರು ಶಾಖಾಧಿಕಾರಿ ಕಿಶೋರ್ ಕುಮಾರ್, ಅಭಿವೃದ್ಧಿ ಅಧಿಕಾರಿ ಬಾಲಚಂದ್ರ, ವಿಮಾ ಸಲಹೆಗಾರ ನಂಜುಂಡಪ್ಪ, ಕೋಲಾರ ಶಾಖೆಯ ಪ್ರತಿನಿಧಿಗಳ ಸಂಘದ ಅಧ್ಯಕ್ಷ ರವಿಪ್ರಕಾಶ್ ಹಾಜರಿದ್ದರು.

## ಪೌರ ಕಾರ್ಮಿಕರಿಗೆ ವಿಶೇಷ ಆಹ್ವಾನ

**ಬೆಂಗಳೂರು:** ಶೃಂಗೇರಿ ಜಗದ್ಗುರುಗಳು ಸನ್ಯಾಸ ಸ್ವೀಕರಿಸಿ 50 ವರ್ಷ ತುಂಬುವ ಶುಭ ಸಂದರ್ಭದಲ್ಲಿ ಇದೇ ತಿಂಗಳ 26 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಕಲ್ಯಾಣವೃಷ್ಟಿಸ್ತವ ಮಹಾಭಿಯಾನದ ಹಿನ್ನೆಲೆಯಲ್ಲಿ ಪೌರಕಾರ್ಮಿಕರು, ಮನೆ ಕೆಲಸದವರು, ಕರ್ಮಚಾರಿಗಳಿಗೂ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ವೇದಾಂತ ಭಾರತಿ ಸಂಸ್ಥೆಯ ನಿರ್ದೇಶಕ ಡಾ।। ಶ್ರೀಧರ ಹೆಗಡೆ ತಿಳಿಸಿದ್ದಾರೆ. ವಿಶೇಷವಾಗಿ ಸೇವಾದೀಪಿಕಾ ಎಂಬ ಶೀರ್ಷಿಕೆಯ ಅಡಿಯಲ್ಲಿ ಕರ್ಮಚಾರಿಗಳಿಗೂ ಮಹಾ ಅಭಿಯಾನದಲ್ಲಿ ಭಾಗವಹಿಸುವಂತೆ ವಿಶೇಷ ಆಹ್ವಾನ ನೀಡಲಾಗಿದ್ದು, ಶೃಂಗೇರಿ ಶಂಕರ ಮಠದ ಆವರಣದಲ್ಲಿ ಇದಕ್ಕಾಗಿ ಸಮರ್ಪಣ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಎಲ್ಲರನ್ನೊಳಗೊಂಡಂತೆ ಮಹಾ ಅಭಿಯಾನ ಯಶಸ್ವಿಗೊಳಿಸಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಡಾ. ಶೀಧರ ಹೆಗಡೆ, ಶೃಂಗೇರಿ ಜಗದ್ಗುರುಗಳ ನೇತೃತ್ವದಲ್ಲಿ ನಡೆಯಲಿರುವ ಮಹಾ ಸಮಾರಂಭದಲ್ಲಿ ಯಡತೊರೆ ಯೋಗಾನಂದೇಶ್ವರ ಸರಸ್ವತೀ ಮಠದ ಪೀಠಾಧೀಶರಾದ ಶಂಕರಭಾರತೀ ಮಹಾಸ್ವಾಮೀಜಿ. ಬ್ರಹ್ಮಾನಂದ ಭಾರತೀ ಸ್ವಾಮೀಜಿ ಮತ್ತಿತರರು ಉಪಸ್ಥಿತರಿರಲಿದ್ದಾರೆ. ಇದಕ್ಕಾಗಿ ಕಾರ್ಯಕರ್ತರ ಪೂರ್ವಭಾವಿ ಸಭೆಯನ್ನು ಅರಮನೆ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಸಭೆಯಲ್ಲಿ ಕೇಂದ್ರ ಸಂಯೋಜಕರು, ಪ್ರಬಂಧ ವ್ಯವಸ್ಥಾಪಕರು ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ರೂಪುರೇಷೆಗಳು ಮತ್ತು ಪೂರ್ವಭಾವಿ ಸಿದ್ಧತೆಗಳ ಬಗ್ಗೆ ಚರ್ಚಿಸಲಾಗಿದೆ. ನವರಾತ್ರಿಯ ಈ ಸಂದರ್ಭದಲ್ಲಿ ಪಾರಾಯಣಕರ್ತರು ತ್ರಿಪುರಸುಂದರಿ ಅಮ್ಮನವರ ಉಪಾಸನೆ ಮೂಲಕ ಸರ್ವರನ್ನು ಕಲ್ಯಾಣವೃಷ್ಟಿಸ್ತವ ಮಹಾಭಿಯಾನ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುತ್ತಿದ್ದಾರೆ ಎಂದು ತಿಳಿಸಿದ್ದಾರೆ.



## ಆಲಕೆರೆ ಕೃಷ್ಣೇಗೌಡ ನೇಮಕ

**ಮಂಡ್ಯ:** ನಗರದ ಪಿಎಲ್ಡಿ(ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್) ಬ್ಯಾಂಕ್ ಆಡಳಿತ ಮಂಡಳಿಯ ನಾಮ ನಿರ್ದೇಶಿತ ಸದಸ್ಯರಾಗಿ ತಾಲ್ಲೂಕಿನ ಆಲಕೆರೆ ಕೃಷ್ಣೇಗೌಡ ಅವರನ್ನು ನೇಮಕ ಮಾಡಿ ಸರ್ಕಾರದ ಅಧೀನ ಕಾರ್ಯದರ್ಶೀ ಜಿ.ರಂಗನಾಥ್ ಅವರು ಆದೇಶ ಪತ್ರ ನೀಡಿದ್ದಾರೆ. ಸರ್ಕಾರದ ಮುಂದಿನ ಆದೇಶದವರೆಗೂ ನಾಮ ನಿರ್ದೇಶಿತರಾಗಿ ಮುಂದುವರಿಯಲು ತಿಳಿಸಿದ್ದಾರೆ.

## ದಸರಾ ಚಲನಚಿತ್ರೋತ್ಸವ: ಯಶಸ್ವಿ ಪ್ರದರ್ಶನ

**ಚಾಮರಾಜನಗರ:** ಚಾಮರಾಜನಗರ ದಸರಾ ಚಲನಚಿತ್ರೋತ್ಸವ ಅಂಗವಾಗಿ ನಗರದ ವಿವಿಧ ಚಿತ್ರಮಂದಿರಗಳಲ್ಲಿ ಉಚಿತವಾಗಿ ಕನ್ನಡ ಚಲನಚಿತ್ರಗಳ ಪ್ರದರ್ಶನ ನಡೆಯುತ್ತಿದೆ. ಅಕ್ಟೋಬರ್ 7 ರಿಂದ 9ರವರೆಗೆ ಭ್ರಮರಾಂಭ, ಬಸವೇಶ್ವರ, ಗುರುರಾಘವೇಂದ್ರ, ಸಿಂಹ ಮೂವಿ ಪ್ಯಾರಡೈಸ್, ಸಿದ್ದಾರ್ಥ ಚಲನಚಿತ್ರ ಮಂದಿರಗಳಲ್ಲಿ ಕನ್ನಡ ಚಲನ ಚಿತ್ರಗಳನ್ನು ಪ್ರದರ್ಶಿಸಲಾಗುತ್ತಿದೆ. ಸೋಮವಾರದಂದು ಬಸವೇಶ್ವರ ಚಿತ್ರಮಂದಿರದಲ್ಲಿ ಪ್ರದರ್ಶನಗೊಂಡ ಚಾಮರಾಜನಗರದ ಭಾಷಾ ಸೊಗಡಿನಲ್ಲಿ ಮೂಡಿಬಂದಿರುವ ಕೋಳಿ ಎಸ್ರು ಚಲನಚಿತ್ರವನ್ನು ಚಿತ್ರದ ನಿರ್ದೇಶಕರಾದ ಚಂಪಾ ಶೆಟ್ಟಿ, ನಟಿ ಅಕ್ಷತಾ ಪಾಂಡವಪುರ, ನಿರ್ಮಾಪಕರಾದ ಪ್ರಕಾಶ್ ಬಿ.ಶೆಟ್ಟಿ ವೀಕ್ಷಿಸಿದರು. ಚಲನ ಚಿತ್ರ ವೀಕ್ಷಣೆ ಬಳಿಕ ಚಂಪಾಶೆಟ್ಟಿ,ಅಕ್ಷತಾ ಪಾಂಡವಪುರ,ಪ್ರಕಾಶ್.ಬಿ.ಶೆಟ್ಟಿ ಚಲನಚಿತ್ರದಲ್ಲಿ ನಟಿಸಿರುವ ಚಿತ್ರಾ, ವೆಂಕಟರಾಜು, ಶಿವಶಂಕರ್. ಎಸ್ ಚೆಟ್ಟು, ದಾಕ್ಷಾಯಿಣಿ ಸೇರಿದಂತೆ ಚಿತ್ರ ತಂಡವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎ. ರಮೇಶ್ ಅವರು ಗೌರವಿಸಿದರು. ರಾಷ್ಟ್ರಪ್ರಶಸ್ತಿ ವಿಜೇತ ಸಂಕಲನಕಾರರಾದ ಸ್ವಾಮಿ ಅಮ್ಮನಪುರ, ಹಿರಿಯ ಕಲಾವಿದರಾದ ಅಬ್ರಾಹಂ ಡಿ. ಸಿಲ್ವಾ, ಕೆ. ವೆಂಕಟರಾಜು, ಸಿ.ಎಂ. ನರಸಿಂಹಮೂರ್ತಿ, ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಮಂಗಳವಾರದಂದು ಬೆಳಿಗ್ಗೆ ಗುರುರಾಘವೇಂದ್ರ ಚಿತ್ರಮಂದಿರದಲ್ಲಿ ಚಿರತೆ ಬಂತು ಚಿರತೆ ಸಿನಿಮಾ ಯಶಸ್ವಿಯಾಗಿ ಪ್ರದರ್ಶನಗೊಂಡಿತು. ಚಾಮರಾಜನಗರ ಭಾಗದ ಮತ್ತು ಗ್ರಾಮೀಣ ಕಥಾಹಂದರವನ್ನು ಒಳಗೊಂಡ ಚಿತ್ರವನ್ನು ಜನರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಚಿತ್ರದ ನಿರ್ದೇಶಕರಾದ ಕೃಷ್ಣಮೂರ್ತಿ. ಸಿ.ಆರ್(ಬೆನಕ ಕಿಟ್ಟಿ), ನಿರ್ಮಾಪಕರಾದ ಜಗದೀಶ್ ಮಲ್ನಾಡ್, ಚಿತ್ರದ ನಟರಾದ ಕಿರಣ್ ಗಿರ್ಗಿ, ಸ್ಪೂರ್ತಿ ಸುಬ್ರಹ್ಮಣ್ಯ, ಚಂದನ ಅವರನ್ನು ಚಾಮರಾಜನಗರ ಜಿಲ್ಲಾಡಳಿತದ ಪರವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಎ. ರಮೇಶ್ ನೆನಪಿನ ಕಾಣಿಕೆ ನೀಡಿ ಗೌರವಿಸಿದರು. ಗುರುರಾಘವೇಂದ್ರ, ಚಿತ್ರಮಂದಿರದಲ್ಲಿ ಸಂಜೆ 4 ಗಂಟೆಗೆ ಪ್ರದರ್ಶನಗೊಂಡ ಡಿಎನ್‌ಎ ಚಲನಚಿತ್ರದ ನಿರ್ದೇಶಕರಾದ ಪ್ರಕಾಶ್ ರಾಜ್ ಮೇಹು ಹಾಗೂ ನಟರಾದ ಧ್ರುವ ಅವರನ್ನು ಸನ್ಮಾನಿಸಲಾಯಿತು. ಇನ್ನಿತರ ಚಿತ್ರಮಂದಿರದಲ್ಲಿ ದಸರಾ ಚಲನಚಿತ್ರೋತ್ಸವ ಅಂಗವಾಗಿ ಚಲನಚಿತ್ರಗಳು ಪ್ರದರ್ಶನಗೊಂಡಿತು.

## 10ರಂದು ಮಾಸಿಕ ಕೆ.ಡಿ.ಪಿ ಸಭೆ

**ಚಾಮರಾಜನಗರ:** ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತ ಮಾಸಿಕ ಕೆ.ಡಿ.ಪಿ ಸಭೆಯು ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಕಾರ್ಯದರ್ಶಿಗಳಾದ ಪಿ. ಮೇಜರ್ ಮಣಿವಣ್ಣನ್ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 10 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ನೂತನ ಕೆ.ಡಿ.ಪಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮಾಸಿಕ ಕೆಡಿಪಿ ಸಭೆಯ ಸದಸ್ಯ ಕಾರ್ಯದರ್ಶಿ, ಮುಖ್ಯ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಗೆಲುವು ಹರ್ಷ ತಂದಿದೆ: ಅರವಿಂದ್

**ಮಂಡ್ಯ:** ಹರಿಯಾಣ ರಾಜ್ಯದಲ್ಲಿ ಬಿಜೆಪಿ ಗೆಲುವು ಹರ್ಷ ತಂದಿದೆ ಗ್ಯಾರಂಟಿ ಯೋಜನೆ ಕೈ ಬಿಟ್ಟಿದೆ ಎಂದು ಜಿಲ್ಲಾ ಬಿಜೆಪಿ ಮುಖಂಡ ಎಚ್.ಆರ್. ಅರವಿಂದ್ ಹೇಳಿದರು.

ನಗರದಲ್ಲಿರುವ ಜೆಸಿ ವೃತ್ತದಲ್ಲಿ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಆಯೋಜಿಸಿದ್ದ ಹರಿಯಾಣ ರಾಜ್ಯದಲ್ಲಿ ಬಿಜೆಪಿ ಗೆಲುವು ಸಂಭ್ರಮಾಚರಣೆ-ಸಿಹಿ ವಿತರಣೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಭಾರೀ ಕುತೂಹಲ ಕೆರಳಿಸಿ ಹರಿಯಾಣದಲ್ಲಿ ಬಿಜೆಪಿ ಧೂಳಿಪಟ ಆಗುತ್ತದೆ ಎಂದು ವಿಪಕ್ಷಗಳು ಬೊಬ್ಬೆ ಹಾಕುತ್ತಿದ್ದವು. ಆದರೆ ಬಿಜೆಪಿ ಸತತವಾಗಿ ಜನಾಶೀರ್ವಾದಿಂದ 3ನೇ ಬಾರಿ ಬಿಜೆಪಿ ಅಧಿಕಾರ ಲಭ್ಯವಾಗಿದೆ ಎನ್ನುವುದು ಸಂತೋಷದ ವಿಷಯವಾಗಿದೆ ಎಂದರು.

ಹರಿಯಾಣ ರಾಜ್ಯದಲ್ಲಿ ಒಟ್ಟು 90ವಿಧಾನಸಾಭಾ ಕ್ಷೇತ್ರಗಳಲ್ಲಿ ಬಿಜೆಪಿ 47 ಕ್ಷೇತ್ರದಲ್ಲಿ ಗೆಲುವು ಸಾಧಿಸಿ, ಬಹುಮತ ಪಡೆದಿದೆ, ಕಾಂಗ್ರೆಸ್ 37 ಸ್ಥಾನಗಳಲ್ಲಿ ಗೆದ್ದಿದೆ, ಇತರರು 6 ಕ್ಷೇತ್ರಗಳಲ್ಲಿ ಗೆದ್ದಿದ್ದಾರೆ, ಒಟ್ಟಾರೆ ಕಾಂಗ್ರೆಸ್ ಹೀನಾಯವಾಗಿ ಸೋಲಪ್ಪಿದೆ ಎಂದು ನುಡಿದರು.

ಆದರೆ ಜಮ್ಮು-ಕಾಶ್ಮೀರ ರಾಜ್ಯದಲ್ಲಿ ಬಿಜೆಪಿ ಗೆಲ್ಲಬೇಕಿತ್ತು, ರಾಜ್ಯದ ಅಭಿವೃದ್ದಿಗಾಗಿ 370ನೇ ಕಾಲಂ ತೆಗೆದು ಸಾಕಷ್ಟು ಯೋಜನೆಗಳನ್ನು



ಜಾರಿಮಾಡಿದ್ದರು, ಅಲ್ಲಿನ ಭಾರತೀಯರ ಮಾನ-ಪ್ರಾಣ, ಉದ್ಯೋಗ ಕ್ಷೇತ್ರಕ್ಕೆ ಹೆಚ್ಚು ಮಹತ್ವ ನೀಡಲಾಗಿತ್ತು, ಆದರೆ ಒಟ್ಟು 90 ವಿಧಾನಸಭಾ ಕ್ಷೇತ್ರಗಳಲ್ಲಿ 28ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿದೆ ಎಂದರು.

ಇನ್ನಾದರೂ ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮೂಡಾ ಹಗರದಿಂದ ಪಾರಾಗಲು ಜನಗಣತಿ ಬಗ್ಗೆ ಮಾತನಾಡುತ್ತಿದ್ದಾರೆ, ತಮ್ಮ ತಪ್ಪುಗಳನ್ನು ಮುಚ್ಚಿಸಲು ಜನರ ಮನಸ್ಸನ್ನು ಬೇರೆಕಡೆಗೆ ತಿರುಗಿಸುತ್ತಿದ್ದಾರೆ, ಸಿಎಂ ಸಿದ್ದರಾಮಯ್ಯ ಅವರು ಕೂಡಲೇ ರಾಜೀನಾಮೆ ನೀಡಿ, ಮುಡಾ ಹಗರಣದ ತನಿಖೆ ಎದುರಿಸಬೇಕು ಎಂದು ಒತ್ತಾಯಿಸಿದರು.

ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ಬಿಜೆಪಿ ಜಯಗಳಿಸಲಿದೆ, ಬಿಜೆಪಿ ಮುಂದಿನ ದಿನಗಳಲ್ಲಿ ಅಧಿಕಾರಕ್ಕೆ ಬರುತ್ತೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಯೋಜನೆಗಳನ್ನು ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರವು ಸಮಗ್ರವಾಗಿ ಜಾರಿ ಮಾಡಲಿ ಎಂದು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಪಟಾಕಿ ಸಿಡಿಸಿ, ಬಿಜೆಪಿ ಗೆಲುವುಗೆ ಸಂಭ್ರಮಿಸಿದ ಕಾರ್ಯಕರ್ತರು ಸಾರ್ವಜನಿಕರಿಗೆ ಸಿಹಿ ವಿತರಿಸಿದರು.

ಕಾರ್ಯಕ್ರಮದಲ್ಲಿ ವಕೀಲ ಕ್ರಾಂತಿ ಮಂಜು, ನಗರಸಭಾ ಮಾಜಿ ಸದಸ್ಯರಾದ ಪ್ರಸನ್ನ, ಚಂದ್ರ, ಮಾಧ್ಯಮ ವಕ್ತಾರ ಸಿ.ಟಿ.ಮಂಜುನಾಥ್, ಮಹಾಂತಪ್ಪ ಸಿದ್ದರಾಜು, ಹೊಸಹಳ್ಳಿ ಶಿವು, ಶಿವಲಿಂಗು, ನಂದೀಶ್,ಯೋಗೇಶ್, ಆನಂದ್ ಮತ್ತಿತರರಿದ್ದರು.

# ವಾಲ್ಮೀಕಿ ಭವನದ ಒತ್ತುವರಿ ತೆರವಿಗೆ ಆಗ್ರಹ

**ಕೋಲಾರ:** ವಾಲ್ಮೀಕಿ ಭವನದ ಒತ್ತುವರಿ ವಿಚಾರದಲ್ಲಿ ಸಮುದಾಯಕ್ಕೆ ವಂಚನೆ ಮಾಡುತ್ತಿರುವ ಜಿಲ್ಲಾಡಳಿತದ ವಿರುದ್ಧ ಅ.15ರಿಂದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುತ್ತದೆ ಎಂದು ಜನಾಂಗದ ಮುಖಂಡ ಪೆಟ್ರೋಲ್ ಬಂಕ್ ಮಂಜುನಾಥ್ ಹೇಳಿದರು.

ಇಲ್ಲಿನ ಜಿಲ್ಲಾಡಳಿತದ ಭವನದಲ್ಲಿ ನಡೆದ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯನ್ನು ಬಹಿಷ್ಕರಿಸಿ ಡಿಸಿ ಕಚೇರಿ ಮುಂದೆ ನಡೆದ ಪ್ರತಿಭಟನೆಯಲ್ಲಿ ಮಾತನಾಡಿ, ನಗರದ ಕೋಡಿಕಣ್ಣೂರು ರಸ್ತೆಯ ಆರ್ಜಿ ಲೇಔಟ್ ನಲ್ಲಿ ನಿರ್ಮಾಣವಾಗಿರುವ ವಾಲ್ಮೀಕಿ ಭವನ ಜಾಗವನ್ನು ಪಕ್ಕದ ಕಲ್ಯಾಣ ಮಂಟಪದ ಮಾಲೀಕರು ಒತ್ತುವರಿ ಮಾಡಿಕೊಂಡು ಕಟ್ಟಡ ನಿರ್ಮಿಸಿದ್ದು ಇದಕ್ಕೆ ಜಿಲ್ಲಾಡಳಿತದ ಕುಮ್ಮಕ್ಕು ಇದೆ ಎಂದು ಆರೋಪಿಸಿದರು.

ಹಿಂದಿನ ಜಿಲ್ಲಾಧಿಕಾರಿ ಮಂಜುನಾಥ ಅವರು ಅಳತೆ ಮಾಡಿಸಿ ಒತ್ತುವರಿಯನ್ನು ಗುರ್ತಿಸಿ ತೆರವು ಕಾರ್ಯಾಚರಣೆಗೆ ಮುಂದಾದಾಗ ಕಲ್ಯಾಣ ಮಂಟಪದ ಮಾಲೀಕರು ಸಿವಿಲ್ ಕೋರ್ಟ್ನಿಂದ ಸ್ಟೇ ಆರ್ಡರ್ ತಂದಿದ್ದರು. ನ್ಯಾಯಾಧೀಶರು ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶ ನೀಡಿದ್ದರೂ ಜಿಲ್ಲಾಡಳಿತದಿಂದ ವಾಲ್ಮೀಕಿ ಭವನದ ಕಾಂಪೌಂಡ್ ನಿರ್ಮಾಣಕ್ಕೆ ಮುಂದಾಗಿರುವ ಕ್ರಮ ಏಕೆಂದು ಪ್ರಶ್ನಿಸಿದರು.



ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯಲ್ಲಿ ಭವನದ ನಿರ್ಮಾಣ ವಿಚಾರ ಮಾತನಾಡಬಾರದೆಂದು ಡಿಸಿಯವರು ಬೆದರಿಕೆ ಹಾಕುವ ಮೂಲಕ ಸಮುದಾಯದ ನಾಯಕರ ಬಾಯಿ ಮುಚ್ಚಿಸಲು ಮುಂದಾಗಿದ್ದು ಸರಿಯಲ್ಲ. ಎರಡೂ ಕಾಲು ಗುಂಟೆ ಒತ್ತುವರಿ ಆಗಿರುವಾಗ 12.5 ಗುಂಟೆ ಬಿಟ್ಟು ಕಾಂಪೌಂಡ್ ಹಾಕುವ ಉದ್ದೇಶ ಏನು? ಖಾಲಿ ಜಾಗವನ್ನು ಕಲ್ಯಾಣ ಮಂಟಪಕ್ಕೆ ಬಿಟ್ಟುಕೊಡಲು ಜಿಲ್ಲಾಡಳಿತವೇ ಮುಂದಾಗಿರುವುದು ಏಕೆ ಎಂದು ಪ್ರಶ್ನಿಸಿದರು. ಸಮುದಾಯದ ಮುಖಂಡ ಆನಂದಕುಮಾರ್ ಮಾತನಾಡಿ, ನ್ಯಾಯಾಲಯದಿಂದ ಸ್ಟೇ ಆರ್ಡರ್ ಇರುವಾಗ ಜಿಲ್ಲಾಡಳಿತ ಮಧ್ಯ ಪ್ರವೇಶ ಮಾಡಿ ಕಾಂಪೌಂಡ್ ನಿರ್ಮಾಣ ಮಾಡುತ್ತಿರುವುದು ನ್ಯಾಯಾಂಗ ನಿಂದನೆ ಆಗುವುದಿಲ್ಲವೇ ಎಂದು ಪ್ರಶ್ನಿಸಿದರು. ಇನ್ನಾದರೂ ಡಿಸಿಯವರು ಕಾಮಗಾರಿಯನ್ನು ಸ್ಥಗಿತಗೊಳಿಸುವ ಮೂಲಕ ಕಾನೂನನ್ನು ಎತ್ತಿ ಹಿಡಿಯಬೇಕೆಂದು ಒತ್ತಾಯಿಸಿದರು. ಮುಖಂಡ ವಾಲ್ಮೀಕಿ ಮಾದೇಶ ಮಾತನಾಡಿ, ಜಿಲ್ಲಾಧಿಕಾರಿಗಳು ಎಲ್ಲ ಜಾತಿ,ಧರ್ಮವನ್ನು ಸಮಾನಾಂತರವಾಗಿ ನೋಡಬೇಕಿದ್ದು ಒಂದು ಧರ್ಮದ ವಕ್ತಾರರಾಗಿ ಕೆಲಸ ಮಾಡಬಾರದು. ಅ.15ರಂದು ಕಾಂಪೌಂಡ್ ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಸಾವಿರಾರು ಮಂದಿ ಪ್ರತಿಭಟನೆ ಆರಂಭಿಸುತ್ತಿದ್ದು ನ್ಯಾಯ ಸಿಗುವವರೆಗೆ ಕದಲುವುದಿಲ್ಲ ಎಂದು ತಿಳಿಸಿದರು. ಮುಖಂಡರಾದ ಟೀಚರ್ ನರಸಿಂಹಯ್ಯ, ಕೆಜಿಐಡಿ ನಾಗರಾಜ್, ಶ್ಯಾಂನಾಯಕ್, ಕ್ಯಾಲನೂರು ಶ್ರೀರಾಮ್, ಕೋಟೆಮಧು, ಅಮ್ಮೇರಹಳ್ಳಿ ರವಿ, ಗರುಡನಹಳ್ಳಿ ಬಾಬು, ಮುಳ್ಳಹಳ್ಳಿ ಮಂಜುನಾಥ್, ಕೆಎಸ್ಆರ್ಟಿಸಿ ಮುನಿಯಪ್ಪ, ಸುಗಟೂರುಆನಂದ್, ಕುರುಗಲ್ ಗಿರೀಶ್, ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷ ಸೂಲೂರು ಆಂಜಿನಪ್ಪ ಇದ್ದರು.

# ಸಂಜೆ ಟಿಪ್ಸ್

## ಫ್ಲಿಪ್ ಕಾರ್ಟ್ ಜೊತೆಗೆ ಸಹಯೋಗ ಮಾಡಿಕೊಂಡ ಜಾವಾ ಯೆಜ್ಡಿ ಮೋಟಾರ್ ಸೈಕಲ್ಸ್

ಆನ್‌ಲೈನ್‌ನಲ್ಲಿ ಮೋರಾಟ್ ಸೈಕಲ್ ಮಾರಾಟ ಪ್ರಕ್ರಿಯೆಯನ್ನು ಹೆಚ್ಚಿಸಲು ಫ್ಲಿಪ್ ಕಾರ್ಟ್ ಜೊತೆಗೆ ಜಾವಾ ಯೆಜ್ಡಿ ಮೋಟಾರ್ಸೈಕಲ್ಸ್ ಸಹಯೋಗ ಮಾಡಿಕೊಂಡಿದ್ದು, ಇದು ಭಾರತದ ಪ್ರೀಮಿಯಂ ಮೋಟಾರ್ ಸೈಕಲ್ ಮಾರುಕಟ್ಟೆಯಲ್ಲಿ ಮಹತ್ವದ ಬೆಳವಣಿಗೆ ಆಗಿದೆ. ಈ ಪಾಲುದಾರಿಕೆಯ ಮೂಲಕ ಫ್ಲಿಪ್ಕಾರ್ಟ್ ನ ಇ- ಕಾಮರ್ಸ್ ಪ್ಲಾಟ್ ಫಾರ್ಮ್ ನಲ್ಲಿ ತನ್ನ ಉತ್ಪನ್ನಗಳನ್ನು ಒದಗಿಸುವ ಮೊತ್ತ ಮೊದಲ ಪ್ರೀಮಿಯಂ ಮೋಟಾರ್ ಸೈಕಲ್ ತಯಾರಕ ಎಂಬ ಹೆಗ್ಗಳಿಕೆಗೆ ಜಾವಾ ಯೆಜ್ಡಿ ಪಾತ್ರವಾಗಿದೆ. ಈ ಮೂಲಕ ಭಾರತದಾದ್ಯಂತ ಇರುವ ಉತ್ಸಾಹಿ ಬೈಕ್ ಪ್ರೇಮಿಗಳಿಗೆ ಉನ್ನತ ಮಟ್ಟದ ಮೋಟಾರ್ ಸೈಕಲ್ ಗಳನ್ನು ಸುಲಭವಾಗಿ ಒದಗಿಸುವ ಮತ್ತು ಖರೀದಿ ಮಾಡುವ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಫ್ಲಿಪ್ ಕಾರ್ಟ್‌ನ ಈ ಸಹಯೋಗವು ಜಾವಾ ಯೆಜ್ಡಿ ಮೋಟಾರ್ ಸೈಕಲ್ಸ್ ಸಂಸ್ಥೆಯ ಡಿಜಿಟಲ್ ಯೋಜನೆಯ ಭಾಗವಾಗಿ ಮೂಡಿಬಂದಿದೆ. ಗ್ರಾಹಕರ ಅನುಭವವನ್ನು ಉತ್ತಮ ಗೊಳಿಸಲು ಮತ್ತು ಅದರ ಪ್ರೀಮಿಯಂ ಮೋಟಾರ್ ಸೈಕಲ್ ಶ್ರೇಣಿಯ ಉತ್ಪನ್ನಗಳನ್ನು ಸುಲಭವಾಗಿ ಒದಗಿಸಲು ಈ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ. 500 ಮಿಲಿಯನ್ ಬಳಕೆದಾರರನ್ನು ಹೊಂದಿರುವ ಫ್ಲಿಪ್ ಕಾರ್ಟ್ ನ ಪ್ಲಾಟ್ಫಾರ್ಮ್ ಅನ್ನು ಬಳಸುವ ಮೂಲಕ ಜಾವಾ ಯೆಜ್ಡಿ ಮೋಟಾರ್ ಸೈಕಲ್ಸ್ ಹೆಚ್ಚಿನ ಪ್ರೇಕ್ಷಕರನ್ನು ತಲುಪಲಿವೆ. ಈ ಮೂಲಕ ಭಾರತದ ವಿವಿಧ ಭಾಗಗಳ ಮೋಟಾರ್ ಸೈಕಲ್ ಉತ್ಸಾಹಿಗಳಿಗೆ ಉತ್ತಮ ಕಾರ್ಯಕ್ಷಮತೆಯ ಜಾವಾ ಕ್ಲಾಸಿಕ್ ಬೈಕ್ ಗಳ ಉತ್ಪನ್ನ ಶ್ರೇಣಿಯನ್ನು ಹುಡುಕಲು, ಹೋಲಿಸಲು ಮತ್ತು ಆಯ್ಕೆ ಮಾಡಲು ಸುಲಭವಾಗಲಿದೆ. ಕ್ಲಾಸಿಕ್ ಲೆಜೆಂಡ್ಸ್ ನ ಸಿಇಒ ಆಶಿಶ್ ಸಿಂಗ್ ಜೋಶಿ ಅವರು ಈ ಪಾಲುದಾರಿಕೆಯ ಕುರಿತು ಮಾತನಾಡಿ, ಫ್ಲಿಪ್ಕಾರ್ಟ್ ಜೊತೆಗಿನ ನಮ್ಮ ಸಹಯೋಗವು ಪ್ರೀಮಿಯಂ ಮೋಟಾರ್ ಸೈಕಲ್ ವಿಭಾಗದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಜಾವಾ ಮತ್ತು ಯೆಜ್ಡಿ ಮೋಟಾರ್ ಸೈಕಲ್ ಗಳನ್ನು ಫ್ಲಿಪ್ ಕಾರ್ಟ್ ನ ಪ್ಲಾಟ್ಫಾರ್ಮ್ಗೆ ತರುವ ಮೂಲಕ ನಾವು ಬೈಕ್ ಪ್ರೇಮಿಗಳಿಗೆ ಬೈಕ್ ಹುಡುಕಲು ಮತ್ತು ಖರೀದಿಯನ್ನು ಸುಲಭಗೊಳಿಸಲು ಅನುವು ಮಾಡಿಕೊಡುತ್ತಿದ್ದೇವೆ ಎಂದು ಹೇಳಿದರು.

## ಎಳ್ಳು ಚಿಕ್ಕಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬಿಳಿ ಎಳ್ಳು – 1 ಬಟ್ಟಲು, ಪುಡಿ ಮಾಡಿದ ಬೆಲ್ಲ – 1 ಬಟ್ಟಲು, ನೀರು– ಸ್ವಲ್ಪ, ತುಪ್ಪ – ಸ್ವಲ್ಪ, ಏಲಕ್ಕಿ ಪುಡಿ – ಕಾಲು ಚಮಚ, ಅಡುಗೆ ಸೋಡಾ – ಕಾಲು ಚಮಚ

### ಮಾಡುವ ವಿಧಾನ

ಮೊದಲಿಗೆ ಒಂದು ಪ್ಯಾನ್ ಬಿಸಿಗಿಟ್ಟು ಅದಕ್ಕೆ ಎಳ್ಳನ್ನು ಹಾಕಿಕೊಂಡು 2 ನಿಮಿಷಗಳವರೆಗೆ ಫ್ರೈ ಮಾಡಿಕೊಂಡು ಪಕ್ಕಕ್ಕಿಡಿ. ಬಳಿಕ ಅದೇ ಪ್ಯಾನ್ಗೆ ಬೆಲ್ಲ ಹಾಕಿ, 2 ಚಮಚ ನೀರನ್ನು ಸೇರಿಸಿಕೊಳ್ಳಿ. ಮೀಡಿಯಮ್ ಉರಿಯಲ್ಲಿ ಬೆಲ್ಲವನ್ನು ಕರಗಿಸಿಕೊಳ್ಳಿ.ಕರಗಿಸಿದ ಬೆಲ್ಲಕ್ಕೆ ಒಂದು ಚಮಚ ತುಪ್ಪ, ಏಲಕ್ಕಿ ಪುಡಿಯನ್ನು ಸೇರಿಸಿಕೊಂಡು ಬೆಲ್ಲದ ಪಾಕ ಕಂದು ಬಣ್ಣ ಆಗುವವರೆಗೆ ತಿರುವಿಕೊಳ್ಳಿ. ನಂತರ ಆ ಮಿಶ್ರಣಕ್ಕೆ ಕಾಲು ಚಮಚ ಅಡುಗೆ ಸೋಡಾವನ್ನು ಹಾಕಿ ಸ್ವಲ್ಪ ಫ್ರೈ ಮಾಡಿ, ಬಳಿಕ ಎಳ್ಳನ್ನು ಸೇರಿಸಿಕೊಳ್ಳಿ. ಸಣ್ಣ ಉರಿಯಲ್ಲಿ 2 ರಿಂದ 3 ನಿಮಿಷ ಈ ಮಿಶ್ರಣವನ್ನು ತಿರುವಿಕೊಳ್ಳಬೇಕು. ಈಗ ಒಂದು ಪ್ಲೇಟ್ಗೆ ತುಪ್ಪ ಸವರಿ ಬೆಲ್ಲ ಮತ್ತು ಎಳ್ಳಿನ ಮಿಶ್ರಣವನ್ನು ಅದಕ್ಕೆ ವರ್ಗಾಯಿಸಿಕೊಳ್ಳಿ.ನಂತರ ಸಮತಟ್ಟಾಗಿ ಪ್ಲೇಟ್ಗೆ ಹರಡಿಕೊಂಡು ಬಿಸಿಯಿರುವಾಗಲೇ ಚೌಕಾಕಾರದಲ್ಲಿ ಚಾಕುವಿನಿಂದ ತುಂಡರಿಸಿಕೊಳ್ಳಿ. ಅರ್ಧ ಗಂಟೆಗಳ ಕಾಲ ಹಾಗೆಯೇ ಬಿಡಿ. ಇದೀಗ ಎಳ್ಳು ಚಿಕ್ಕಿ ಸವಿಯಲು ಸಿದ್ಧ.

## ಪ್ರಕಾಶ್ V/S ಪವನ್ ಕಲ್ಯಾಣ್ ಟ್ವೀಟ್ ವಾರ್



ತಿರುಮಲ ಲಡ್ಡು ಕಲಬೆರಕೆ ಪ್ರಕರಣ ಆಂಧ್ರ ಪ್ರದೇಶದಲ್ಲಿ ಅಲ್ಲೋಲ-ಕಲ್ಲೋಲ ಎಬ್ಬಿಸುತ್ತು. ಇದೇ ವಿಚಾರ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಮತ್ತು ನಟ ಪ್ರಕಾಶ್ ರಾಜ್ ನಡುವಿನ ಟ್ವೀಟ್ ವಾರ್ಗೂ ಕಾರಣವಾಗಿತ್ತು. ಸಿನಿಮಾ ಸ್ಟೈಲ್ ನಲ್ಲಿ ನಟ ಪ್ರಕಾಶ್ ರಾಜ್ ಅವರಿಗೆ ಸೋಶಿಯಲ್ ಮೀಡಿಯಾ ಮೂಲಕ ಪವರ್ ಸ್ಟಾರ್ ಪವನ್ ಪಂಚ್ ಕೊಟ್ಟಿದ್ದಾರೆ.

ಈ ನಟರ ಪಾಲಿಟಿಕ್ಸ್ ಕಿತ್ತಾಟ ತಿರುಮಲ ಲಡ್ಡು ಬಳಿಕ ತಮಿಳುನಾಡು ರಾಜಕೀಯದತ್ತ ತಿರುಗಿದೆ. ಪವನ್, ಪ್ರಕಾಶ್ ನಡುವೆ ಮತ್ತೆ ಟ್ವೀಟ್ ವಾರ್ ಶುರುವಾಗಿದೆ.

ಅಕ್ಟೋಬರ್ 7ರಂದು ಪ್ರಕಾಶ್ ರಾಜ್, ಪವನ್ ಕಲ್ಯಾಣ್ ಅವರ ಎಂಜಿಆರ್ ಮೇಲಿನ ಪ್ರೀತಿ ಬಗ್ಗೆ ವ್ಯಂಗ್ಯವಾಗಿ ಪೋಸ್ಟ್ ಮಾಡಿದ್ದಾರೆ. ಪ್ರಕಾಶ್ ರಾಜ್ ಟ್ವೀಟ್ಗೆ ಪವನ್ ಪರೋಕ್ಷವಾಗಿ ಟಾಂಗ್ ಕೊಟ್ಟಿದ್ದಾರೆ. ಪುರಚ್ಚಿ ತಲೈವರ್ ಮತ್ತು ಎಂಜಿಆರ್ ಅವರಿಂದ ನಾನು ಪಾಠ ಕಲಿತಿದ್ದೇನೆ ಎಂದ ಪವನ್ ಹಲವು ವಿಡಿಯೋಗಳನ್ನು ಪೋಸ್ಟ್ ಮಾಡಿದ್ದಾರೆ. ಇಬ್ಬರು ನಟರ ನಡುವಿನ ಈ ಟ್ವೀಟ್ ವಾರ್ ಗಂಭೀರ ಸ್ವರೂಪ ಪಡೆಯುತ್ತಿದೆ ಎಂದು ನೆಟ್ಟಿಗರು ಕಮೆಂಟ್ ಮಾಡ್ತಿದ್ದಾರೆ.

ಎಪಿಯ ತಿರುಪತಿ ಲಡ್ಡು ವಿಚಾರದಲ್ಲಿ ಪವನ್ ಕಲ್ಯಾಣ್ ಅವರನ್ನು ಪ್ರಕಾಶ್ ರಾಜ್ ಕೆಣಕಿದ್ರು. ಇದೀಗ ಇಬ್ಬರು ತಮಿಳುನಾಡು ರಾಜಕೀಯದ ಸುತ್ತ ಗಿರಕಿ ಹೊಡೆಯುತ್ತಿದ್ದಾರೆ. ಪವನ್ ಕಲ್ಯಾಣ್ ಸನಾತನಧರ್ಮವನ್ನು ರಕ್ಷಿಸಲು ತಿರುಪತಿಯಲ್ಲಿ ಸಭೆ ಆಯೋಜಿಸಿದ ನಂತರ ಪ್ರಕಾಶ್ ರಾಜ್ ದೇವರು ವಿಚಾರದಲ್ಲಿ ರಾಜಕೀಯ ಮಾಡಬಾರದು ಎಂದು ಹೇಳುತ್ತಲೇ ಪವನ್ ಕಲ್ಯಾಣ್ ಅವರನ್ನು ವೈಯಕ್ತಿಕವಾಗಿ ಟಾರ್ಗೆಟ್ ಮಾಡುತ್ತಿದ್ದಾರೆ ಎನ್ನಲಾಗ್ತಿದೆ.

ಇತ್ತೀಚಿಗೆ ಎಂಜಿಆರ್ ಬಗ್ಗೆ ಪವನ್ ಕಲ್ಯಾಣ್ ಪೋಸ್ಟ್ ಮಾಡಿದ್ರು. ಇದಕ್ಕೆ ಪ್ರತಿಕ್ರಿಯಿಸಿದ ನಟ ಪ್ರಕಾಶ್ ರಾಜ್ ಎಂಜಿಆರ್ ಅವರನ್ನು ಮೇಲೆ ಏಕೆ ಇದ್ದಕ್ಕಿದ್ದಂತೆ ಪ್ರೀತಿ ಮೂಡಿದೆ. ಮೇಲಿನಿಂದ ಆದೇಶ ಬಂದಿದ್ಯಾ ಎಂದು ಟ್ವೀಟ್ ಮಾಡಿದಾಗ ಪ್ರಕಾಶ್ ರಾಜ್ ಟ್ವೀಟ್ ಮಾಡಿದ್ರು. ಇದಕ್ಕೆ ಪವನ್ ಕೂಡ ಪರೋಕ್ಷವಾಗಿ ತಿರುಗೇಟು ನೀಡಿದ್ದಾರೆ.

ಎಂಜಿಆರ್ ಮೇಲೆ ಯಾಕೆ ಇಷ್ಟೊಂದು ಪ್ರೀತಿ, ಮೇಲಿಂದ ಮೇಲೆ ಆದೇಶ ಬಂದಿದೆಯಾ ಎಂಬ ಪ್ರಕಾಶ್ ರಾಜ್ ಟ್ವೀಟ್ಗೆ ಅಕೌಂಟರ್ ಎಂಬಂತೆ ಪವನ್ ಕಲ್ಯಾಣ್ ಮತ್ತೊಮ್ಮೆ ಎಂಜಿಆರ್ ಬಗ್ಗೆ ಟ್ವೀಟ್ ಮಾಡಿದ್ದಾರೆ. ಈ ಹಿಂದೆ ಎಂಜಿಆರ್ ಬಗ್ಗೆ ಮಾತಾಡಿ ಹಳೆಯ ವಿಡಿಯೋಗಳನ್ನು ಶೇರ್ ಮಾಡಿದ್ದಾರೆ. ಪುರಚ್ಚಿ ತಲೈವರ್ ಮತ್ತು ಶ್ರೀ ಎಂಜಿಆರ್ ಅವರಿಂದ ಹಲವು ಪಾಠಗಳನ್ನು ಕಲಿತಿರೋದಾಗಿ ಬರೆದಿದ್ದಾರೆ.

## ಕಿಡ್ನಿ ಸೋಂಕು ತಡೆಯುವ ಮನೆ ಮದ್ದುಗಳು



ಕಿಡ್ನಿಯಲ್ಲಿ ಸೋಂಕನ್ನು ಉಂಟುಮಾಡುವಂತಹ ಬ್ಯಾಕ್ಟೀರಿಯಾಗಳನ್ನು ಹೊರಗೆ ಹಾಕಬೇಕೆಂದರೆ ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯಬೇಕು.

**ಹಣ್ಣಿನ ಜ್ಯೂಸ್:** ಕಿತ್ತಳೆ, ನಿಂಬೆ ಹಾಗೂ ದ್ರಾಕ್ಷಿಯಲ್ಲಿ ವಿಟಮಿನ್ ಸಿ ಸಮೃದ್ಧವಾಗಿದೆ. ಇದು ದೇಹದಲ್ಲಿರುವ ವಿಷಕಾರಿ ಅಂಶಗಳನ್ನು ಹೊರಹಾಕುತ್ತದೆ. ಮತ್ತು ಕಿಡ್ನಿಯನ್ನು ಸ್ವಚ್ಛವಾಗಿಟ್ಟುಕೊಂಡು ಯಾವುದೇ ಸೋಂಕು ಬರದಂತೆ ಕಾಪಾಡುತ್ತದೆ.

**ಅಡುಗೆ ಸೋಡಾ:** ಒಂದು ಚಮಚ ಅಡುಗೆ ಸೋಡಾವನ್ನು ಒಂದು ಲೋಟ ನೀರಿಗೆ ಹಾಕಿಕೊಳ್ಳಿ. ಇದನ್ನು ಸರಿಯಾಗಿ ಕಲಸಿ ಮತ್ತು ಕುಡಿಯಿರಿ. ಇದನ್ನು ದಿನಾಲೂ ಮಾಡುವುದರಿಂದ ಕಿಡ್ನಿ ಸೋಂಕನ್ನು ತಡೆಯಬಹುದು.

**ಬೆಳ್ಳುಳ್ಳಿ:** ಮೂತ್ರದ ಮೂಲಕ ಉಪ್ಪು ಹಾಗೂ ಇತರ ಕಲ್ಮಶವನ್ನು ಹೊರಹಾಕುವಲ್ಲಿ ಬೆಳ್ಳುಳ್ಳಿಯು ಪ್ರಮುಖ ಪಾತ್ರ ನಿರ್ವಹಿಸುತ್ತದೆ. ದೈನಂದಿನ ಆಹಾರದಲ್ಲಿ ಬೆಳ್ಳುಳ್ಳಿಯನ್ನು ಸೇರಿಸಿಕೊಳ್ಳಿ ಅಥವಾ ಪ್ರತಿ ದಿನ 2–3 ಬೆಳ್ಳುಳ್ಳಿಯನ್ನು ಸೇವನೆ ಮಾಡಿ.

**ಆಲಿವ್ ಆಯಿಲ್:** ಒಂದು ಚಮಚ ಆಲಿವ್ ತೈಲ ಮತ್ತು ಕೆಲವು ಹನಿ ನಿಂಬೆ ರಸವನ್ನು ಒಂದು ಲೋಟ ನೀರಿಗೆ ಹಾಕಿಕೊಳ್ಳಿ. ಇದನ್ನು ಸರಿಯಾಗಿ ಮಿಶ್ರಣ ಮಾಡಿಕೊಂಡು ದಿನದಲ್ಲಿ ಎರಡು ಸಲ ಇದನ್ನು ಕುಡಿಯಿರಿ. ಇದು ಕಿಡ್ನಿಯಲ್ಲಿರುವ ವಿಷಕಾರಿ ಅಂಶಗಳನ್ನು ಹೊರಹಾಕಿ ಕಿಡ್ನಿಗೆ ಯಾವುದೇ ರೀತಿಯ ಸೋಂಕು ಬರದಂತೆ ತಡೆಯುತ್ತದೆ.

### ಹೆಲ್ತ್ ಟಿಪ್ಸ್

**ಅಲೋವೆರಾ ಜ್ಯೂಸ್:** ದಿನದಲ್ಲಿ ಎರಡು ಸಲ ಅಲೋವೆರಾ ಜ್ಯೂಸ್ ಅನ್ನು ಕುಡಿಯುವುದರಿಂದ ದೇಹದಲ್ಲಿನ ವಿಷಕಾರಿ ಅಂಶವು ಹೊರಹೋಗುತ್ತದೆ ಮತ್ತು ಕಿಡ್ನಿಯು ಸ್ವಚ್ಛವಾಗುತ್ತದೆ. ಇದರಿಂದ ಕಿಡ್ನಿಯ ಸೋಂಕನ್ನು ಪರಿಣಾಮಕಾರಿಯಾಗಿ ತಡೆಯಬಹುದು.

## ಫ್ಯಾನ್ಸ್‌ಗೆ ಸಿಹಿಸುದ್ದಿ - ಹೊರಬಿತ್ತು 'ಪುಷ್ಪ 2' ಚಿತ್ರದ ಬಿಗ್ ಅಪ್‌ಡೇಟ್

ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಸಿನಿಮಾ ಬಗ್ಗೆ ಫ್ಯಾನ್ಸ್‌ಗೆ ಗುಡ್ ನ್ಯೂಸ್ ಸಿಕ್ಕಿದೆ. 'ಪುಷ್ಪ 2' ಚಿತ್ರದ ಹೊಸ ಪೋಸ್ಟರ್ ವೊಂದನ್ನು ಚಿತ್ರತಂಡ ಬಿಡುಗಡೆ ಮಾಡಿದೆ.

'ಪುಷ್ಪ 2' ಹೊಸ ಪೋಸ್ಟರ್‌ನಲ್ಲಿ ಅಲ್ಲು ಅರ್ಜುನ್ ಕಾಣಿಸಿಕೊಂಡಿದ್ದಾರೆ. ಪೋಸ್ಟರ್‌ನಲ್ಲಿ ಫಸ್ಟ್ ಹಾಫ್ ಲಾಕ್ ಮತ್ತು ಲೋಡ್ ಫುಲ್ ಫೈರ್ ಎಂದು ಶೀರ್ಷಿಕೆ ನೀಡಿದ್ದಾರೆ. ಚಿತ್ರದ ಬಗ್ಗೆ ಹೆಚ್ಚಿನ ಮಾಹಿತಿಯನ್ನು ತಂಡ ರಿವೀಲ್ ಮಾಡದೇ ಇದ್ದರೂ ಪೋಸ್ಟರ್ ಲುಕ್ ನೋಡಿ ಬನ್ನಿ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಇನ್ನೂ ಡಿಸೆಂಬರ್ 6ರಂದು ರಿಲೀಸ್ ಆಗುವ ಬಗ್ಗೆ ಅಧಿಕೃತ ಮಾಹಿತಿ ಸಿಕ್ಕಿದೆ.

ಇನ್ನೂ ಡಿ.6ರಂದು ರಿಲೀಸ್ ಆಗಲಿದೆ ಎಂದು ದಿನಾಂಕವನ್ನು ಈ ಮೊದಲೇ ಘೋಷಿಸಿದ್ದರು. ಆದರೆ ಸುದೀರ್ಘವಾಗಿ ಶೂಟಿಂಗ್ ನಡೆಯುತ್ತಿದ್ದ ಕಾರಣ, ಈ ವರ್ಷದ ಅಂತ್ಯದಲ್ಲಿ ಸಿನಿಮಾ ಬಿಡುಗಡೆಯಾಗೋದು ಅನುಮಾನ ಎಂದು ಸುದ್ದಿ ಹರಿದಾಡುತ್ತಿತ್ತು. ಈಗ ಮತ್ತೊಮ್ಮೆ ರಿಲೀಸ್ ಕುರಿತು ಅಧಿಕೃತ ಅಪ್‌ಡೇಟ್ ಸಿಕ್ಕಿರೋದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಸಿನಿಮಾಗಾಗಿ ಅಭಿಮಾನಿಗಳು ಎದುರು ನೋಡ್ತಿದ್ದಾರೆ.



## ಲಿಪ್ ಸ್ಟಿಕ್ ಪ್ರಿಯರಿಗೆ 'ಟಿಪ್ಸ್'

### ಬ್ಯೂಟಿ ಟಿಪ್ಸ್

ಲಿಪ್ ಸ್ಟಿಕ್ ಹಚ್ಚುವುದರಿಂದ ಮುಖದ ಚೆಲುವು ಹೆಚ್ಚುವುದು ನಿಜ. ಆದರೆ ಕ್ವಾಲಿಟಿ ಲಿಪ್ ಸ್ಟಿಕ್ ಬಳಸದಿದ್ದರೆ ತುಟಿ ಸೌಂದರ್ಯ ಕೆಡುವುದು ಖಚಿತ. ಪ್ರತಿದಿನ ಲಿಪ್ ಸ್ಟಿಕ್ ಬಳಸದಿದ್ದರೆ ತುಟಿ ಡ್ರೈ ಅನಿಸುತ್ತದೆ. ಹಾಗಾಗಿ ಲಿಪ್ ಸ್ಟಿಕ್ ಬೇಕೇ ಬೇಕು. ಜೊತೆಗೆ ಲಿಪ್ ಸ್ಟಿಕ್ನಿಂದ ತುಟಿ ಹಾಳಾಗಬಾರದೆಂದು ನೀವು ಬಯಸಿದರೆ ಇಲ್ಲಿವೆ ಕೆಲ ಟಿಪ್ಸ್. ಮೂರು ವರ್ಷಕ್ಕಿಂತ ಹಳೆಯದಾದ ಲಿಪ್ ಸ್ಟಿಕ್ ಬಳಸಲೇಬೇಡಿ. ವಾರದಲ್ಲಿ ಒಂದು ಅಥವಾ ಎರಡು ಬಾರಿ ತುಟಿಗೆ ಏನೂ ಹಚ್ಚಬೇಡಿ. ಲಿಪ್ ಸ್ಟಿಕ್ ದಿನಾ ಬಳಸಿ ಬೋರು ಅನಿಸಿದರೆ ಲಿಪ್ ಗ್ಲಾಸ್ ಹಚ್ಚಬಹುದು. ದಿನಕ್ಕೆ ಎರಡು ಬಾರಿಗಿಂತ ಅಧಿಕ ಬಾರಿ ಲಿಪ್ ಸ್ಟಿಕ್ ಹಚ್ಚಬೇಡಿ. ಲಿಪ್ ಸ್ಟಿಕ್ ಹಚ್ಚುವ ಮುನ್ನ ಲಿಪ್ ಬಾಮ್ ಹಚ್ಚಿ. ಒಳ್ಳೆಯ ಬ್ರಾಂಡೆಡ್ ಶಾಪ್ ಗಳಲ್ಲಿ ಲಿಪ್ ಸ್ಟಿಕ್ ಗಳನ್ನು ಖರೀದಿಸಿ. ಇಲ್ಲವಾದಲ್ಲಿ ಫೇಕ್ ಲಿಪ್ ಸ್ಟಿಕ್ ಗೆ ಹಣ ಸುರಿಬೇಕಾಗುತ್ತದೆ. ಇನ್ನು ಲಿಪ್ ಸ್ಟಿಕ್ ಸಂಪೂರ್ಣವಾಗಿ ತುಟಿಯಿಂದ ತೆಗೆಯಬೇಕಿದ್ದಲ್ಲಿ, ಕೊಬ್ಬರಿ ಎಣ್ಣೆ ಬಳಸಿ ಸ್ವಚ್ಛಗೊಳಿಸಿ.



## ಸಾಂಸ್ಕೃತಿಕ ವಿನಿಮಯದ ಹೊಸದೊಂದು ಅಧ್ಯಾಯ: ಬನ್ನಿ, ಭೇಟಿಯಾಗಿ - ಬೆಂಗಳೂರೆಸಿಡೆನ್ಸಿ ಕಲಾವಿದರನ್ನು!

ಅಂತಾರಾಷ್ಟ್ರೀಯ ಕಲಾತ್ಮಕ ವಿನಿಮಯ ಮತ್ತು ಸಹಯೋಗವನ್ನು ಸಂಭ್ರಮಿಸುವ ಕಾಲ ಮತ್ತೊಮ್ಮೆ ಒದಗಿಬಂದಿದೆ. ಬೆಂಗಳೂರೆಸಿಡೆನ್ಸಿ 2024, ಜರ್ಮನಿಯ 10 ಪ್ರತಿಭಾವಂತ ಕಲಾವಿದರ ಆಗಮನದೊಂದಿಗೆ ಆರಂಭವಾಗಲಿದೆ. ಮುಂದಿನ 6–8 ವಾರಗಳ ಕಾಲ ಈ ಕಲಾವಿದರು ನಮ್ಮ 9 ಪಾಲುದಾರ ಸಂಸ್ಥೆಗಳ ಆಶ್ರಯದಲ್ಲಿ, ಅಲ್ಲೇ ವಾಸ್ತವ್ಯ ಹೂಡಿ, ತಮ್ಮ ತಮ್ಮ ವೈಯಕ್ತಿಕ ಪ್ರಾಜೆಕ್ಟ್ ಗಳ ಮೇಲೆ ಕೆಲಸ ಮಾಡಲಿದ್ದಾರೆ. ಈ ಮೂಲಕ ಬೆಂಗಳೂರಿನ ಸಾಂಸ್ಕೃತಿಕ ಲೋಕದಲ್ಲಿಟಿಮಿಂದೇಳಲಿದ್ದಾರೆ. ದೃಶ್ಯ ಮಾಧ್ಯಮ, ಸೌಂಡ್ ಆರ್ಟ್, ಡಿಜಿಟಲ್ ಮಾಧ್ಯಮದಿಂದ ಹಿಡಿದು ಪರಿಸರ ಅಧ್ಯಯನದವರೆಗೆ,

ಈ ಕಲಾವಿದರ ವೈವಿಧ್ಯಮಯ ಪ್ರಾಜೆಕ್ಟ್ ಗಳು ಬೆಂಗಳೂರಿನ ಸೃಜನಶೀಲ ಮತ್ತು ಸಾಂಸ್ಕೃತಿಕ ಲೋಕದಲ್ಲಿ ತಮ್ಮದೇ ಆದ ಛಾಪು ಮೂಡಿಸುವುದರಲ್ಲಿ ಯಾವುದೇ ಸಂದೇಹವಿಲ್ಲ! ಬೆಂಗಳೂರೆಸಿಡೆನ್ಸಿ (ಅಕ್ಟೋಬರ್ 6 – ನವೆಂಬರ್ 30), ಕೇವಲ ಒಂದು ರೆಸಿಡೆನ್ಸಿಯಾಗಿರದೆ, ವಿವಿಧ ಸಂಸ್ಕೃತಿಗಳ ನಡುವೆ ಬಾಂಧವ್ಯ ಬೆಸೆಯುವ ಮತ್ತು ಸಹಯೋಗವನ್ನು ಬೆಳೆಸುವ ಒಂದು ಅಪರೂಪವಾದ ವೇದಿಕೆಯಾಗಿದೆ. ಜರ್ಮನಿಯಿಂದ ಬೆಂಗಳೂರಿಗೆ ಬರುವ ಕಲಾವಿದರು ಇಲ್ಲಿನ ಸಾಮಾಜಿಕ, ರಾಜಕೀಯ ಮತ್ತು ಪಾರಿಸಾರಿಕ ಸವಾಲುಗಳ ನಡುವೆ ತಮ್ಮನ್ನು ತಾವು ಕಂಡುಕೊಳ್ಳಲಿದ್ದಾರೆ. ಸ್ಥಳೀಯ ಸಂಸ್ಥೆಗಳೊಂದಿಗೆ ನಿಕಟವಾಗಿ ಕೆಲಸ ಮಾಡುವುದರ ಮೂಲಕ, ಈ ಕಲಾವಿದರೆಲ್ಲರೂ ಈ ನಗರ, ಇಲ್ಲಿನ ಜನಜೀವನ ಮತ್ತು ವಿವಿಧ ತಾಣಗಳಿಂದ ಸ್ಫೂರ್ತಿ ಪಡೆದು, ಹೊಸ ಚಿಂತನೆಗೆ ಹಚ್ಚುವ ಕಲಾಕೃತಿಗಳನ್ನು ರಚಿಸುವೆಡೆಗೆ ತಮ್ಮ ಸಮಯವನ್ನು ಮೀಸಲಿಡಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ತೊಡಗಿರುವ,

ವಿವಿಧ ಆಸಕ್ತಿಗಳನ್ನು ಹೊಂದಿರುವ ಈ ಕಲಾವಿದರ ಗುಂಪು, ತಂತ್ರಜ್ಞಾನ, ಪರಿಸರ ವಿಜ್ಞಾನ, ಅಸ್ಮಿತೆ, ನಗರ ಜೀವನ ಹೀಗೆ ಹಲವು ಥೀಮ್ ಗಳ ಅಡಿಯಲ್ಲಿ ತಮ್ಮ ಕಲಾಕೃತಿಗಳನ್ನು ರಚಿಸಿ, ಹೊಸ ದೃಷ್ಟಿಕೋನಗಳನ್ನು ನಮಗೆ ಪರಿಚಯಿಸಲಿದ್ದಾರೆ. ಈ ರೆಸಿಡೆನ್ಸಿಯಲ್ಲಿ ತಮ್ಮನ್ನು ತಾವು ಗಂಭೀರವಾಗಿ ತೊಡಗಿಸಿಕೊಳ್ಳುವ ಮುನ್ನ, ನೀವು ನಮ್ಮ ಕಲಾವಿದರನ್ನು ಭೇಟಿಯಾಗಿ, ಅವರ ಕಲಾಭ್ಯಾಸದ ಬಗ್ಗೆ ಇನ್ನಷ್ಟು ತಿಳಿದುಕೊಳ್ಳುವ ಅವಕಾಶವನ್ನು ಗ್ಯೋಥೇ ಇನ್ಸ್ಟಿಟ್ಯೂಟ್ – ಮ್ಯಾಕ್ಸ್ ಮುಲ್ಲರ್ ಭವನ ನಿಮಗೆ ಕಲ್ಪಿಸಿಕೊಡಲಿದೆ. 'ಸ್ಪಾಟ್ ಆನ್ ಬೆಂಗಳೂರೆಸಿಡೆನ್ಸ್' (Spot On bangaloREsidents) – ಎಂಬ ಹೆಸರಿನಡಿ ನಡೆಯುವ ಈ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬ ಕಲಾವಿದರೂ ತಮ್ಮ ಕಲಾಭ್ಯಾಸವನ್ನೂ, ಈ ರೆಸಿಡೆನ್ಸಿಯ ಅಡಿಯಲ್ಲಿ ತಾವು ಕೈಗೊಳ್ಳುತ್ತಿರುವ ಪ್ರಾಜೆಕ್ಟನ್ನು ನಿಮ್ಮೆದುರಿಗೆ ಪ್ರಸ್ತುತ ಪಡಿಸಲಿದ್ದಾರೆ.

ಕಾರ್ಯಕ್ರಮ: ಸ್ಪಾಟ್ ಆನ್ ಬೆಂಗಳೂರೆಸಿಡೆನ್ಸ್ – ಕಲಾವಿದರೊಡನೆ ಭೇಟಿ

ಜರ್ಮನಿಯಿಂದ ಆಗಮಿಸಿರುವ 10 ಕಲಾವಿದರಿಂದ ಮಲ್ಟಿಮೀಡಿಯಾ ಪ್ರಸ್ತುತಿಗಳು

ದಿನಾಂಕ: ಶುಕ್ರವಾರ, ಅಕ್ಟೋಬರ್ 11, 2024

ಸ್ಥಳ: ಗ್ಯೋಥೆ ಇನ್ಸ್ಟಿಟ್ಯೂಟ್ – ಮ್ಯಾಕ್ಸ್ ಮುಲ್ಲರ್ ಭವನ ಬೆಂಗಳೂರು



## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಭೂ ವಿವಾದ ಬಗೆಹರಿಯುವುದು, ಆರ್ಥಿಕ ಪರಿಸ್ಥಿತಿ ಸುಧಾರಣೆ, ನೂತನ ವಸ್ತುಗಳ ಖರೀದಿ ಯೋಗ.

**ವೃಷಭ:** ವ್ಯಾಪಾರದಲ್ಲಿ ಸಾಧಾರಣ ಲಾಭ, ನೌಕರಿಯಲ್ಲಿ ಅಪಮಾನ, ಮನೆಯಲ್ಲಿ ಶುಭಕಾರ್ಯ, ಶೀತ ಸಂಬಂಧವಾದ ರೋಗಗಳು.

**ಮಿಥುನ:** ವಾಹನ ರಿಪೇರಿಗಾಗಿ ಖರ್ಚು, ಮನ ಶಾಂತಿ, ಮಿತ್ರರೊಡನೆ ವಾದ ವಿವಾದ.

**ಕಟಕ:** ದಾಂಪತ್ಯ ಜೀವನದಲ್ಲಿ ನೆಮ್ಮದಿ, ಸಹೋದರರಲ್ಲಿ ವೈರತ್ವ, ಭೋಗ ವಸ್ತುಗಳ ಪ್ರಾಪ್ತಿ, ಸಜ್ಜನ ಮಿತ್ರರಲ್ಲಿ ವಿರಸ.

**ಸಿಂಹ:** ನಯವಾದ ಮಾತಿನಿಂದ ಕೆಲಸ ಸಾಧಿಸುವಿರಿ, ಆಸ್ತಿ ವಿಷಯದಲ್ಲಿ ಮೌನ ವಹಿಸಿ, ದುಷ್ಟರಿಂದ ದೂರವಿರಿ.

**ಕನ್ಯಾ:** ಆಪ್ತರ ಆಗಮನದಿಂದ ಸಂತೋಷ, ಮನಸ್ಸಿನಲ್ಲಿ ತಳಮಳ, ಏಕಾಗ್ರತೆ ಇರುವುದಿಲ್ಲ, ಪುಸ್ತಕ ವ್ಯಾಪಾರಿಗಳಿಗೆ ಲಾಭ.

**ತುಲಾ:** ಲ ಭಾದೆ, ಚಂಚಲ ಮನಸ್ಸು, ಲೇವಾದೇವಿ ವ್ಯವಹಾರದಲ್ಲಿ ತೊಂದರೆ, ಸ್ಥಳ ಬದಲಾವಣೆ

**ವೃಶ್ಚಿಕ:** ಸಲ್ಲದ ಅಪವಾದ, ಕೆಲಸ ಕಾರ್ಯಗಳಲ್ಲಿ ವಿಘ್ನ, ಅನಾರೋಗ್ಯ, ಭೂ ವ್ಯವಹಾರಗಳಲ್ಲಿ ನಷ್ಟ

**ಧನಸ್ಸು:** ಅಭಿವೃದ್ಧಿಯ ಕಡೆ ಗಮನ ಕೊಡುವಿರಿ, ಭೂ ಲಾಭ, ಸೇವಕವರ್ಗದಿಂದ ಸಹಾಯ, ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ.

**ಮಕರ:** ಕೋರ್ಟ್ ಕೆಲಸಗಳಲ್ಲಿ ಜಯ, ಸಾಮಾಜಿಕ ಕಾರ್ಯಗಳಲ್ಲಿ ತೊಡಗುವಿರಿ, ಉದ್ಯೋಗ ಲಭ್ಯ.

**ಕುಂಭ:** ದುಡಿಮೆಗೆ ತಕ್ಕ ಪ್ರತಿಫಲ, ಆಧ್ಯಾತ್ಮಿಕ ವಿಚಾರಗಳತ್ತ ಗಮನ, ವರಮಾನದಲ್ಲಿ ಸುಧಾರಣೆ, ನೌಕರಿಯಲ್ಲಿ ಕಿರಿಕಿರಿ.

**ಮೀನ:** ಗೆಳೆಯರ ಸಹಾಯ, ಹೊರ ದೇಶದ ಪ್ರಯಾಣ, ನಸಿಕ ನೆಮ್ಮದಿ ಕಳೆದುಕೊಳ್ಳುವಿರಿ, ವಿದ್ಯಾರ್ಥಿಗಳಲ್ಲಿ ಪ್ರಗತಿ.

## ವಿಶ್ವ ಅಂಚೆ ದಿನ




ವಿಶ್ವ ಅಂಚೆ ದಿನವು ಅಕ್ಟೋಬರ್ 9 ಆಗಿದೆ ಮತ್ತು ಕೆಲವು ಉತ್ತಮ ಹಳೆಯ-ಶೈಲಿಯ ಅಕ್ಷರಗಳೊಂದಿಗೆ ಹಿಂದಿನ ಸಂವಹನ ವಿಧಾನಗಳಿಗೆ ಹಿಂತಿರುಗಲು ನಾವು ಪಂಪ್ ಮಾಡುತ್ತಿದ್ದೇವೆ. ಮೇಲ್ ವಾಹಕ ಸೇವೆಗಳು ಪುರಾತನ ಕಾಲದಿಂದಲೂ ಅಸ್ತಿತ್ವದಲ್ಲಿವೆ, ಮತ್ತು ಒಂದು ಗುಂಡಿಯ ಸ್ಪರ್ಶದಲ್ಲಿ ನಾವು ಬಹುತೇಕ ಯಾವುದನ್ನಾದರೂ (ಅಕ್ಷರಶಃ) ಸಂವಹನ ಮಾಡಬಹುದಾದರೂ, ನಮ್ಮ ಸ್ಥಳೀಯ ಅಂಚೆ ಸೇವೆಗಳ ಪ್ರಾಮುಖ್ಯತೆಯನ್ನು ಅಲ್ಲಗಳೆಯುವಂತಿಲ್ಲ. ಪ್ರತಿ ವರ್ಷ ಅಕ್ಟೋಬರ್ 9 ರಂದು ವಿಶ್ವ ಅಂಚೆ ದಿನ. 1874 ರಲ್ಲಿ ಯುನಿವರ್ಸಲ್ ಪೋಸ್ಟಲ್ ಯೂನಿಯನ್ ಸ್ಥಾಪನೆಯ ವಾರ್ಷಿಕೋತ್ಸವವನ್ನು ಗುರುತಿಸುವುದರಿಂದ ದಿನಾಂಕವನ್ನು ಆಯ್ಕೆ ಮಾಡಲಾಗಿದೆ. ಪತ್ರವನ್ನು ಕಳುಹಿಸುವುದು ನೀವು ಕಾಳಜಿವಹಿಸುವ ವ್ಯಕ್ತಿಯನ್ನು ತೋರಿಸುವ ಅತ್ಯಂತ ಸಾಂಪ್ರದಾಯಿಕ ಕ್ರಿಯೆಗಳಲ್ಲಿ ಒಂದಾಗಿದೆ. ನಾವು ಸ್ಟಾಂಪ್ ಅನ್ನು ನೆಕ್ಕಿದ ನಂತರ ಪ್ರಪಂಚದಾದ್ಯಂತ ನಮ್ಮ ಮೇಲ್ ಅನ್ನು ಜಿಪ್ ಮಾಡುವ ಪ್ರಕ್ರಿಯೆಗಳು ಅಥವಾ ನಿಬಂಧನೆಗಳ ಬಗ್ಗೆ ನಾವು ಹೆಚ್ಚು ಗಮನ ಹರಿಸದಿದ್ದರೂ, ಹುಟ್ಟುಹಬ್ಬದ ಕಾರ್ಡ್ಗಳನ್ನು ಪಡೆಯಲು ಮತ್ತು ೦ ನಿಂದ ಃ ವರೆಗೆ ಆನ್ಲೈನ್ ಶಾಪಿಂಗ್ ಮಾಡಲು ಅಂತರರಾಷ್ಟ್ರೀಯ ತಂಡವನ್ನು ತೆಗೆದುಕೊಳ್ಳುತ್ತದೆ. ಪ್ರಾಚೀನ ಈಜಿಪ್ಟ್ ಸುಮಾರು 2500 ಃಅ ಯ ಅಂಚೆ ಸೇವೆಯ ದಿನಾಂಕ ಎಂದು ನಾವು ಈಗ ತಿಳಿದಿರುವ ಮೂಲಗಳು, ಆದರೆ ಹಳೆಯ ಅಧಿಕೃತ ಅಂಚೆ ಸೇವೆಯು 550 ಃಅ ಇರಾನ್ನಲ್ಲಿ ಕಂಡುಬರುತ್ತದೆ. ವಿವಿಧ ನಾಗರಿಕತೆಗಳು ಸಾವಿರಾರು ಮೈಲುಗಳಷ್ಟು ವ್ಯಾಪಿಸಿರುವ ಸಾಮ್ರಾಜ್ಯಗಳಾದ್ಯಂತ ಪತ್ರಗಳು, ಸಂದೇಶಗಳು, ಸುದ್ದಿಗಳು ಮತ್ತು ಪಾರ್ಸೆಲ್ಗಳನ್ನು ರವಾನಿಸಲು ಕೊರಿಯರ್ ಸೇವೆಯನ್ನು ಬಳಸಿಕೊಂಡವು, ಮೇಲ್ಮ್ಯಾನ್ನ ಆಧುನಿಕ ಕಲ್ಪನೆಯನ್ನು ಪ್ರೇರೇಪಿಸಿತು.

ಅಕ್ಟೋಬರ್ 9, 1874 ರಂದು, ಯುನಿವರ್ಸಲ್ ಪೋಸ್ಟಲ್ ಯೂನಿಯನ್ ಅನ್ನು ಅದರ ಸದಸ್ಯ ರಾಷ್ಟ್ರಗಳ ಮೇಲ್ ಸೇವೆಗಳ ನಡುವೆ ಸಹಕಾರ ಮತ್ತು ನಿಯಂತ್ರಣದ ಸಾಧನವಾಗಿ ಸ್ಥಾಪಿಸಲಾಯಿತು – ಇಂದು ಇದು ನಿಮ್ಮ ಅಂಚೆಪೆಟ್ಟಿಗೆಯಿಂದ ಟಿಂಬಕ್ಟುಗೆ ಮತ್ತು ನಡುವೆ ಎಲ್ಲೆಡೆಯೂ ಮೇಲ್ ಅನ್ನು ಮುಕ್ತವಾಗಿ ಹರಿಯುವಂತೆ ಮಾಡುತ್ತದೆ! 1969 ರಲ್ಲಿ, ಟೋಕಿಯೊ ಯೂನಿವರ್ಸಲ್ ಪೋಸ್ಟಲ್ ಕಾಂಗ್ರೆಸ್ನಲ್ಲಿ ವಿಶ್ವ ಅಂಚೆ ದಿನವನ್ನು ಉದ್ಘಾಟಿಸಲಾಯಿತು.ಪ್ರತಿ ವರ್ಷ, ಯುಪಿಯುನ 192 ಸದಸ್ಯ ರಾಷ್ಟ್ರಗಳು ಸಾರ್ವತ್ರಿಕ ಅಂಚೆಯ ಪ್ರಾಮುಖ್ಯತೆ ಮತ್ತು ಸಮಾಜ ಮತ್ತು ಜಾಗತಿಕ ಆರ್ಥಿಕತೆಗೆ ಯುಪಿಯುನ ಕೊಡುಗೆಗಳನ್ನು ಗುರುತಿಸಲು ಅಕ್ಟೋಬರ್ 9 ರಂದು ವಿಶ್ವ ಅಂಚೆ ದಿನವನ್ನು ಆಚರಿಸುತ್ತವೆ.

# ಸತ್ಯಕ್ಕೆ ಸಂದ ಅಭೂತಪೂರ್ವ ಐತಿಹಾಸಿಕ ಗೆಲುವು- ಪ್ರಧಾನಿ



**ನವದೆಹಲಿ:** ಭಾರತದ ಘನತೆಯ ಬಗ್ಗೆ ಅಪಪ್ರಚಾರ ಮಾಡಲು ಹಲವರು ದೊಡ್ಡ ಷಡ್ಯಂತ್ರ ನಡೆಸುತ್ತಿರುವುದಕ್ಕೆ ತಕ್ಕ ಉತ್ತರವೆಂಬಂತೆ ಇಂದು ಬಿಜೆಪಿಗೆ ಐತಿಹಾಸಿಕ ಗೆಲುವು ಸಿಕ್ಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಕಾಂಗ್ರೆಸ್ ಮತ್ತು ಇಂಡಿಯಾ ಮಿತ್ರಕೂಟ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಹರಿಯಾಣದಲ್ಲಿ ಬಿಜೆಪಿ ಸತತ ಮೂರನೇ ಬಾರಿ ಗೆಲುವು ಸಾಧಿಸಿದ ನಿಮಿತ್ತ, ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರಿಗೆ ಪ್ರಧಾನಿ ಶುಭಾಶಯ ಕೋರಿ ಮಾತನಾಡಿದರು. ಕಾಂಗ್ರೆಸ್ನ ಪರಿವಾರವು ದೇಶದ ದೊಡ್ಡ ಭ್ರಷ್ಟ ಪರಿವಾರವಾಗಿದೆ. ಅವರೇ ಭ್ರಷ್ಟಾಚಾರದ ಜನ್ಮದಾತರು ಎಂದು ಕುಟುಕಿದರು.

ದಲಿತರು, ಒಬಿಸಿ ವರ್ಗ ಬಿಜೆಪಿಯ ಜೊತೆಗಿದ್ದಾರೆ ಎಂಬುವುದಕ್ಕೆ ಇಂದಿನ ಚುನಾವಣೆಯ ಫಲಿತಾಂಶವೇ ನಿದರ್ಶನ. ಹೀಗಾಗಿ ಕಾಂಗ್ರೆಸ್ನ ದೇಶ ವಿರೋಧಿ ರಾಜಕೀಯ ನಡೆಯುವುದಿಲ್ಲ. ಭಾರತದ ವಿರುದ್ಧ ಹಲವು ಷಡ್ಯಂತ್ರ ನಡೆದಿವೆ. ಭಾರತದ ಪ್ರಜಾಪ್ರಭುತ್ವವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ದುರ್ಬಲಗೊಳಿಸುವ ಪಿತೂರಿ ನಡೆದಿದೆ. ಇದರಲ್ಲಿ ಕಾಂಗ್ರೆಸ್ ಹಾಗೂ ಮಿತ್ರ ಪಕ್ಷಗಳು ಭಾಗಿಯಾಗಿವೆ ಎಂದು ಪ್ರಧಾನಿ ಗಂಭೀರ ಆರೋಪ ಮಾಡಿದರು.

# ರಾಜಕೀಯ ಮತ್ತು ಕುಸ್ತಿ ಒಟ್ಟಿಗೆ ಸಾಗಲು ಸಾಧ್ಯವಿಲ್ಲ: ವಿನೇಶ್



**ಚಂಡೀಗಢ:** ಹರಿಯಾಣದ ಹಾಟೆಸ್ಟ್ ಸೀಟ್ ಎಂದು ಪರಿಗಣಿಸಲಾದ ಜೂಲಾನಾದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿನೇಶ್ ಫೋಗಟ್ ಗೆಲುವು ಸಾಧಿಸಿದ್ದಾರೆ. ಈ ಗೆಲುವಿನ ನಂತರ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿರುವ ಅವರು ರಾಜಕೀಯ ಮತ್ತು ಕುಸ್ತಿ ಒಟ್ಟಿಗೆ ಸಾಗಲು ಸಾಧ್ಯವಿಲ್ಲ ಎಂದಿದ್ದಾರೆ.

ವಿನೇಶ್ ಕುಸ್ತಿ ಮುಂದುವರಿಸುತ್ತಾರಾ? ಈ ಪ್ರಶ್ನೆಗೆ ಉತ್ತರಿಸಿದ ಅವರು, ರಾಜಕೀಯಕ್ಕೆ ಎಂಟ್ರಿ ಕೊಟ್ಟಿದ್ದು, ಇಲ್ಲೇ ಮುಂದುವರಿಯುತ್ತೇನೆ. ಇಲ್ಲಿನ ಜನರು ನನಗೆ ಪ್ರೀತಿ ನೀಡಿದ್ದಾರೆ. ಇಡೀ ವಿಧಾನಸಭೆಯ ಜನ ನನ್ನ ಪ್ರೀತಿ ಸ್ವೀಕರಿಸಿದ್ದಾರೆ. ಅವರಿಗಾಗಿ ಈ ನೆಲದಲ್ಲಿ ದುಡಿಯಬೇಕು. ಎಲ್ಲ ಕ್ಷೇತ್ರಗಳಿಗೂ ಅದರಲ್ಲೂ ಆದಷ್ಟು ಕ್ರೀಡೆಗೂ ದುಡಿಯುತ್ತೇನೆ. ಆದರೆ ರಾಜಕೀಯ ಮತ್ತು ಕುಸ್ತಿ ಎರಡೂ ಏಕಕಾಲದಲ್ಲಿ ಮುಂದುವರಿಸಲು ಸಾಧ್ಯವಿಲ್ಲ ಎಂದರು.

ಒಟ್ಟಿನಲ್ಲಿ ವಿನೇಶ್ ಅವರು ಸುಮಾರು 20 ವರ್ಷಗಳ ನಂತರ ಜೂಲಾನಾ ಕಾಂಗ್ರೆಸ್ನ ಮೊದಲ ಮಹಿಳಾ ಶಾಸಕಿಯಾಗಿದ್ದಾರೆ. ಈ ಮೂಲಕ ವಿನೇಶ್ ಫೋಗಟ್ ಅವರು ಒಂದು ರೀತಿಯಲ್ಲಿ ಜೂಲಾನಾ ಕ್ಷೇತ್ರದಲ್ಲಿ ಕಾಂಗ್ರೆಸ್ಸಿನ ಬರವನ್ನು ಕೊನೆಗೊಳಿಸಿದ್ದಾರೆ ಅಂತಾನೇ ಹೇಳಬಹುದು. 2005ರಲ್ಲಿ ಕಾಂಗ್ರೆಸ್ನ ಶಂಶೇರ್ ಸಿಂಗ್ ಜೂಲಾನಾದಿಂದ ಗೆದ್ದಿದ್ದರು.

## ದೇಶ ತೊರೆಯುವಂತೆ ಒಮರ್ ಬಿನ್ ಲಾಡೆನ್ ಗೆ ಫ್ರಾನ್ಸ್ ಆದೇಶ

**ದೆಹಲಿ:** ಭಯೋತ್ಪಾದಕ ಸಂಘಟನೆ ಅಲ್ ಖೈದಾ ನಾಯಕನಾಗಿದ್ದ ಉಗ್ರ, ಒಸಾಮಾ ಬಿನ್ ಲಾಡೆನ್ನ ಮಗ ಒಮರ್ ಬಿನ್ ಲಾಡೆನ್ ಕೂಡಲೇ ಫ್ರಾನ್ಸ್ ತೊರೆಯುವಂತೆ ಅಲ್ಲಿನ ಆಡಳಿತ ಆದೇಶ ಹೊರಡಿಸಿದೆ. ಸೋಶಿಯಲ್ ಮೀಡಿಯಾದಲ್ಲಿ ಅವಹೇಳನಕಾರಿ ಪೋಸ್ಟ್ ಮಾಡಿರುವುದನ್ನ ಖಂಡಿಸಿ ದೇಶ ತೊರೆಯುವಂತೆ ಫ್ರಾನ್ಸ್ ಆದೇಶಿಸಿದೆ.ಒಮರ್ ಬಿನ್ ಲಾಡೆನ್ ತನ್ನ ತಂದೆಯನ್ನ ತೊರೆದ ಬಳಿಕ 2016 ರಿಂದಲೂ ಉತ್ತರ ಫ್ರಾನ್ಸ್ನ ನಾರ್ಮಂಡಿಯಲ್ಲಿ ನೆಲೆಯೂರಿದ್ದ, ಆದ್ರೆ 2023 ರಲ್ಲಿ ತನ್ನ ಭಯೋತ್ಪಾದನೆಯನ್ನು ಪ್ರತಿಪಾದಿಸುವ ಬಗ್ಗೆ ಪೋಸ್ಟ್ ಮಾಡಿದ್ದನಂತೆ. ಈ ಹಿನ್ನೆಲೆ ಓರ್ನ್ ಪ್ರಿಫೆಕ್ಟ್ ಫ್ರೆಂಚ್ ಪ್ರದೇಶವನ್ನ ತೊರೆಯುವಂತೆ ಆದೇಶ ನೀಡಲಾಗಿದೆ. ಸದ್ಯ ಒಮರ್ ಬಿನ್ ಲಾಡೆನ್ ನೆಲೆ ಕಾಣದಂತಾಗಿತ್ತು. ಇನ್ನೆಲ್ಲಿಗೆ ತೆರಳುವುದೆಂದು ಹೊಸ ನೆಲೆಯ ಹುಡುಕಾಡದಲ್ಲಿದ್ದಾನೆ ಎನ್ನಲಾಗಿದೆ.



# ಅಮೆರಿಕದಲ್ಲಿ ವಿನಾಶಕಾರಿ ಚಂಡಮಾರುತ: ವಿಮಾನ ಹಾರಾಟ ಸ್ಥಗಿತ

**ಅಮೆರಿಕ:** ಅಮೆರಿಕದಲ್ಲಿ ಮಿಲ್ಟನ್ ಚಂಡಮಾರುತದಿಂದ ವಿನಾಶ ಸಂಭವಿಸುವ ಸಾಧ್ಯತೆ ಇದೆ. ಚಂಡಮಾರುತವು ಮಂಗಳವಾರ ಫ್ಲೋರಿಡಾದ ಟ್ಯಾಂಪಾ ಬೇ ಕರಾವಳಿಯತ್ತ ಸಾಗುತ್ತಿದೆ. ಚಂಡಮಾರುತದ ಹಿನ್ನೆಲೆಯಲ್ಲಿ ಫ್ಲೋರಿಡಾದ ಆಡಳಿತವು 10 ಲಕ್ಷಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ತಿಳಿಸಲಾಗಿದೆ. ಹೆಲೆನ್ ಚಂಡಮಾರುತವು ವಿನಾಶವನ್ನು ಉಂಟುಮಾಡಿದ ಎರಡು ವಾರಗಳ ನಂತರ ಬೃಹತ್ ಚಂಡಮಾರುತವು ಬರುತ್ತದೆ. ಮಿಲ್ಟನ್ ಚಂಡಮಾರುತವು ಬುಧವಾರ ಕರಾವಳಿಗೆ ಅಪ್ಪಳಿಸಬಹುದಾಗಿದ್ದು, ಫ್ಲೋರಿಡಾದ ಜನನಿಬಿಡ ಪಶ್ಚಿಮ ಕರಾವಳಿಗೆ ಅಪಾಯವನ್ನುಂಟುಮಾಡುತ್ತದೆ. ಮಿಲ್ಟನ್ ಪಶ್ಚಿಮ-ಮಧ್ಯ ಫ್ಲೋರಿಡಾಕ್ಕೆ ಅಪ್ಪಳಿಸಿದ ಅತ್ಯಂತ ವಿನಾಶಕಾರಿ ಚಂಡಮಾರುತಗಳಲ್ಲಿ ಒಂದಾಗಿರಬಹುದು ಎಂದು ಯುಎಸ್ ರಾಷ್ಟ್ರೀಯ ಚಂಡಮಾರುತ ಕೇಂದ್ರ ಹೇಳಿದೆ. ಟ್ಯಾಂಪಾ ಕೊಲ್ಲಿಯ ಉತ್ತರ ಮತ್ತು ದಕ್ಷಿಣದ ಕರಾವಳಿಯಲ್ಲಿ 10 ರಿಂದ 15 ಅಡಿಗಳಷ್ಟು ಅಲೆಗಳನ್ನು ನಿರೀಕ್ಷಿಸಲಾಗಿದೆ. 127 ರಿಂದ 254 ಮಿಮೀ ಅಥವಾ ಅದಕ್ಕಿಂತ ಹೆಚ್ಚಿನ ಮಳೆಯಾಗುವ ನಿರೀಕ್ಷೆಯಿದೆ. ಇದರಿಂದ ಪ್ರವಾಹ ಭೀತಿಯೂ ಎದುರಾಗಿದೆ. ಸುಮಾರು 900 ದೇಶೀಯ ಮತ್ತು ಅಂತರಾಷ್ಟ್ರೀಯ ವಿಮಾನಗಳು ವಿಳಂಬವಾಗಿವೆ. ಸುಮಾರು 700 ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಬುಧವಾರ ನಿಗದಿಯಾಗಿದ್ದ 1,500ಕ್ಕೂ ಹೆಚ್ಚು ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಅಧ್ಯಕ್ಷ ಜೋ ಬಿಡೆನ್ ತನ್ನ ಅಕ್ಟೋಬರ್ 10-15 ರ ಜರ್ಮನಿ ಮತ್ತು ಅಂಗೋಲಾ ಪ್ರವಾಸವನ್ನು ಮುಂದೂಡಿದ್ದಾರೆ ಎಂದು ಶ್ವೇತಭವನ ಮಂಗಳವಾರ ತಿಳಿಸಿದೆ. ಫ್ಲೋರಿಡಾದಲ್ಲಿ ಮಿಲ್ಟನ್ ಚಂಡಮಾರುತವು ಭೂಕುಸಿತವನ್ನು ಉಂಟುಮಾಡುವ ಮೊದಲು ತಕ್ಷಣವೇ ಸ್ಥಳಾಂತರಿಸಲು ಆದೇಶಿಸಿದ ಜನರನ್ನು ಯುಎಸ್ ಅಧ್ಯಕ್ಷ ಜೋ ಬಿಡೆನ್ ಒತ್ತಾಯಿಸಿದರು. ಇದು ಜೀವನ ಮತ್ತು ಸಾವಿನ ವಿಷಯ ಎಂದು ಬಿಡೆನ್ ಹೇಳಿದರು.



# ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಅಸಮಾಧಾನ!

**ನವದೆಹಲಿ:** ಹರ್ಯಾಣ ವಿಧಾನಸಭೆ ಚುನಾವಣೆಯಲ್ಲಿನ ಸೋಲಿನ ಬೆನ್ನಲ್ಲೇ ಚುನಾವಣಾ ಫಲಿತಾಂಶದ ಕುರಿತು ಅನುಮಾನ ವ್ಯಕ್ತಪಡಿಸಿರುವ ಕಾಂಗ್ರೆಸ್ ಪಕ್ಷ, ಚುನಾವಣಾ ಫಲಿತಾಂಶ ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದೆ.

ಹರ್ಯಾಣದ ಕೆಲವು ಜಿಲ್ಲೆಗಳಲ್ಲಿ ಮತ ಎಣಿಕೆ ಪ್ರಕ್ರಿಯೆ ಮತ್ತು ಇವಿಎಂಗಳ ಕಾರ್ಯನಿರ್ವಹಣೆಯ ಸಮಗ್ರತೆಯ ಬಗ್ಗೆ ಗಂಭೀರ ಸಮಸ್ಯೆಗಳು ಇರುವುದರಿಂದ ಹರ್ಯಾಣ ವಿಧಾನಸಭಾ ಚುನಾವಣೆಯ ತೀರ್ಪನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಮಂಗಳವಾರ ಹೇಳಿದೆ.

ಅಲ್ಲದೆ ಚುನಾವಣಾ ಫಲಿತಾಂಶದಲ್ಲಿ ಬಹುದೊಡ್ಡ ಪಿತೂರಿ ನಡೆದಿದ್ದು, ಪ್ರಜಾಪ್ರಭುತ್ವವು ಸೋತಿದ್ದು, ಹಿತಾಸಕ್ತಿಗಳು ಗೆದ್ದಿದೆ. ಹೀಗಾಗಿ ತಾನು



ಈ ವಿಷಯವನ್ನು ಚುನಾವಣಾ ಆಯೋಗಕ್ಕೆ ತೆಗೆದುಕೊಂಡು ಹೋಗುವುದಾಗಿ ಕಾಂಗ್ರೆಸ್ ಹೇಳಿದೆ. ಹರ್ಯಾಣ ಚುನಾವಣಾ ಫಲಿತಾಂಶ ಬೆನ್ನಲ್ಲೇ ಇಂದು ಎಐಸಿಸಿ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಮತ್ತು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಸಂವಹನ ಉಸ್ತುವಾರಿ ಜೈರಾಮ್ ರಮೇಶ್ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ನಮ್ಮ ಅಭ್ಯರ್ಥಿಗಳು ಕೆಲ ಗಂಭೀರ ಪ್ರಶ್ನೆಗಳನ್ನು ಎತ್ತಿದ್ದು, ನಾವು ಅದನ್ನು ಚುನಾವಣಾ ಆಯೋಗದ ಗಮನಕ್ಕೆ ತರುತ್ತೇವೆ ಎಂದು ಹೇಳಿದ್ದಾರೆ. ಈ ವೇಳೆ ಮಾತನಾಡಿದ ಜೈರಾಮ್ ರಮೇಶ್, 'ಹರ್ಯಾಣ ಚುನಾವಣಾ ಫಲಿತಾಂಶಗಳು ಸಂಪೂರ್ಣವಾಗಿ ಅನಿರೀಕ್ಷಿತ, ಸಂಪೂರ್ಣವಾಗಿ ಆಶ್ಚರ್ಯಕರ ಮತ್ತು ವಿರೋಧಾಭಾಸ ಎಂದು ಬಣ್ಣಿಸಿದ್ದಾರೆ. ಫಲಿತಾಂಶ ನೆಲದ ವಾಸ್ತವಕ್ಕೆ ವಿರುದ್ಧವಾಗಿ, ಹರಿಯಾಣದ ಜನರು ಬದಲಾವಣೆ ಮತ್ತು ಪರಿವರ್ತನೆಗಾಗಿ ತಮ್ಮ ಮನಸ್ಸು ಮಾಡಿದ್ದಕ್ಕೆ ವಿರುದ್ಧವಾಗಿ ಬಂದಿದೆ. ಹರ್ಯಾಣದಲ್ಲಿ ನಾವು ಇಂದು ಕಂಡಿರುವುದು ಕುಶಲತೆಯ ಮತ್ತು ಜನರ ಇಚ್ಛೆಯನ್ನು ಬುಡಮೇಲು ಮಾಡುವ ವಿಜಯವಾಗಿದೆ. ಇದು ಪಾರದರ್ಶಕ, ಪ್ರಜಾಪ್ರಭುತ್ವ ಪ್ರಕ್ರಿಯೆಗಳ ಸೋಲು ಎಂದು ಹೇಳಿದ್ದಾರೆ.

## ಇಮ್ರಾನ್ಖಾನ್ ವಿರುದ್ಧ ಕೊಲೆಯತ್ನ ಪ್ರಕರಣ ದಾಖಲು

**ಇಸ್ಲಾಮಾಬಾದ್:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ಖಾನ್ ಹಾಗೂ ಅವರ ಪಕ್ಷದ ಮುಖಂಡ, ಖೈಬರ್ ಪಖ್ತೂಂಕ್ವಾದ ಮುಖ್ಯಮಂತ್ರಿ ಆಲಿ ಅಮಿನ್ ಗಂದಪುರ್ ವಿರುದ್ಧ ಮಂಗಳವಾರ ಕೊಲೆಯತ್ನ ಪ್ರಕರಣ ದಾಖಲಿಸಲಾಗಿದೆ.ಕಳೆದ ವಾರಾಂತ್ಯ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಯ ಸಾವಿಗೆ ಸಂಬಂಧಿಸಿ ಕೊಲೆಯತ್ನದ ಹೊಸ ಪ್ರಕರಣ ದಾಖಲಿಸಲಾಗಿದೆ. ಒಂದು ವರ್ಷಕ್ಕೂ ಅಧಿಕ ಸಮಯದಿಂದ ರಾವಲ್ಪಿಂಡಿಯ ಅಡಿಯಾಲಾ ಜೈಲಿನಲ್ಲಿರುವ ಇಮ್ರಾನ್ಖಾನ್ ಅವರ ಬಿಡುಗಡೆಗೆ ಆಗ್ರಹಿಸಿ ಪಿಟಿಐ ಪಕ್ಷ ಕಳೆದ ವಾರಾಂತ್ಯ ನಡೆಸಿದ್ದ ಪ್ರತಿಭಟನಾ ರ್ಯಾಲಿಯನ್ನು ತಡೆಯಲು ಪ್ರಯತ್ನಿಸಿದಾಗ ನಡೆದ ಘರ್ಷಣೆಯಲ್ಲಿ ಪೊಲೀಸ್ ಮೃತಪಟ್ಟಿದ್ದು ಇತರ ಹಲವರು ಗಾಯಗೊಂಡಿದ್ದರು.



# ಪಾಕಿಸ್ತಾನದ ಕರಾಚಿಯಲ್ಲಿ ನವರಾತ್ರಿ ವೈಭವ

**ಇಸ್ಲಾಮಾಬಾದ್:** ಭಾರತದಲ್ಲಿ ನವರಾತ್ರಿ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ವಿಶೇಷ ಅಂದ್ರೆ ಈ ವರ್ಷ ಪಾಕಿಸ್ತಾನದ ಕರಾಚಿಯಲ್ಲಿಯೂ ನವರಾತ್ರಿ ವೈಭವ ಕಳೆಗಟ್ಟಿದೆ.

ಗಡಿಯಾಚೆಗಿನ ನವರಾತ್ರಿಯ ವೈರಲ್ ವೀಡಿಯೋ ನಿಜವಾಗಿಯೂ ಹಬ್ಬಗಳಿಗೆ ಯಾವುದೇ ಗಡಿಗಳಿಲ್ಲ ಎಂಬುದನ್ನು ಸಾಬೀತುಪಡಿಸಿದೆ.

ಪಾಕಿಸ್ತಾನಿ ಪ್ರಭಾವಿ ಧೀರಜ್ ಮಂದನ್ ಅವರು ಹಂಚಿಕೊಂಡ ಕ್ಲಿಪ್ ಕರಾಚಿಯಲ್ಲಿ ನವರಾತ್ರಿ ಆಚರಣೆಗಳ ಅಪರೂಪದ ನೋಟವನ್ನು ನೀಡಿತು.





## ಗಾಝಾ ಪುನರ್ ನಿರ್ಮಿಸಲು ರಾಷ್ಟ್ರೀಯ ತಂಡ: ಫೆಲೆಸ್ತೀನ್ ಪ್ರಧಾನಿ ಘೋಷಣೆ

**ರಮಲ್ಲಾ:** ಫೆಲೆಸ್ತೀನ್ ಪ್ರಧಾನಿ ಮುಹಮ್ಮದ್ ಮುಸ್ತಫಾ ಗಾಝಾವನ್ನು ಪುನರ್ ನಿರ್ಮಿಸಲು ರಾಷ್ಟ್ರೀಯ ತಂಡವನ್ನು ರಚಿಸುವುದಾಗಿ ಮಂಗಳವಾರ ಘೋಷಿಸಿದ್ದಾರೆ. ರಮಲ್ಲಾದಲ್ಲಿ ಟಿವಿ ವಾಹಿನಿಯ ನೇರ ಪ್ರಸಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದೇಶವು ಈಗಾಗಲೇ ಗಾಝಾದಲ್ಲಿ 4 ಲಕ್ಷಕ್ಕೂ ಹೆಚ್ಚು ಜನರಿಗೆ ನೆರವನ್ನು ಒದಗಿಸಿದೆ ಮತ್ತು ಇದನ್ನು ಮುಂದುವರಿಸಲಿದೆ ಎಂದರು. ಗಾಝಾ ಪಟ್ಟಿಯ ಪುನರ್ನಿರ್ಮಾಣಕ್ಕೆ ಸುಮಾರು 50 ಶತಕೋಟಿ ಡಾಲರ್ ವೆಚ್ಚವಾಗಬಹುದು ಎಂದು ವಿಶ್ವಸಂಸ್ಥೆ ಅಭಿವೃದ್ಧಿ ಕಾರ್ಯಕ್ರಮದ(ಯುಎನ್ಡಿಪಿ) ಯೋಜನಾ ಅಧಿಕಾರಿ ಹೇಳಿದ್ದಾರೆ. ಈ ಮಧ್ಯೆ, ಗಾಝಾದಲ್ಲಿ ಯಾವುದೇ ಸಂಭಾವ್ಯ ಕದನ ವಿರಾಮದ ನಂತರದ ನಿರ್ಣಾಯಕ ಪರಿಸ್ಥಿತಿ ಬಗ್ಗೆ ಉಲ್ಲೇಖಿಸಿದ ಯುಎನ್ಡಿಪಿ ಅರಬ್ ರಾಷ್ಟ್ರಗಳ ಪ್ರಾದೇಶಿಕ ಕಚೇರಿಯ ನಿರ್ದೇಶಕ ಅಬ್ದುಲ್ಲಾ ಅಲ್-ದರ್ದಾರಿ 'ಕದನ ವಿರಾಮ ಒಪ್ಪಂದದ ಬಳಿಕದ ದಿನ ಅತ್ಯಂತ ಅಪಾಯಕಾರಿ ಹಂತವಾಗಿದೆ. ಸ್ಥಳಾಂತರಿಸಲ್ಪಟ್ಟ ಜನರು ಹಾಗೂ ತಮ್ಮ ಮನೆಯನ್ನು ಕಳೆದುಕೊಂಡವರು ಪುನರ್ನಿರ್ಮಾಣ ಪ್ರಕ್ರಿಯೆಯ ಪ್ರಾರಂಭಕ್ಕಾಗಿ ಕಾತರದಿಂದ ಕಾಯುತ್ತಿದ್ದಾರೆ ಎಂದಿದ್ದಾರೆ.



# ಒಂದೇ ಗಂಟೆಯೊಳಗೆ 120ಕ್ಕೂ ಹೆಚ್ಚು ಹಿಜ್ಬುಲ್ಲಾ ಉಗ್ರರ ತಾಣಗಳನ್ನು ಧ್ವಂಸ ಮಾಡಿದ ಇಸ್ರೇಲ್



**ಟೆಲ್ ಅವೀವ್:** ಒಂದೇ ಗಂಟೆಯ ಅವಧಿಯಲ್ಲಿ 120ಕ್ಕೂ ಹೆಚ್ಚು ಹಿಜ್ಬುಲ್ಲಾ ಉಗ್ರರ ಕಚೇರಿಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ವಾಯುಪಡೆ ದಾಳಿ ನಡೆಸಿದೆ.

ದಕ್ಷಿಣ ಲೆಬನಾನ್‌ನಲ್ಲಿ ಒಂದು ಗಂಟೆಯೊಳಗೆ 120 ಕ್ಕೂ ಹೆಚ್ಚು ಭಯೋತ್ಪಾದಕರ ಅಡಗುದಾಣಗಳನ್ನು ಧ್ವಂಸ ಮಾಡಲಾಗಿದೆ ಎಂದು ಇಸ್ರೇಲ್ ಸೇನೆ ಹೇಳಿದೆ. ಸೋಮವಾರ ಉಗ್ರರ ವಿರುದ್ಧ ಕೈಗೊಂಡ ವ್ಯಾಪಕ ದಾಳಿಯ ಭಾಗವಾಗಿ ಈ ಕಾರ್ಯಾಚರಣೆ ನಡೆಸಲಾಗಿದೆ. ದಾಳಿಯಲ್ಲಿ ಸಾವು ನೋವಿನ ಬಗ್ಗೆ ಯಾವುದೇ ಮಾಹಿತಿಯನ್ನು ಇಸ್ರೇಲ್ ಹಂಚಿಕೊಂಡಿಲ್ಲ.

ಉಗ್ರರ ವಿರುದ್ಧ ಐಎಎಫ್ (ವಾಯು ಪಡೆ) ವ್ಯಾಪಕವಾದ ವೈಮಾನಿಕ ಕಾರ್ಯಾಚರಣೆಯನ್ನು ನಡೆಸಿತು. ಈ ವೇಳೆ ದಕ್ಷಿಣ ಲೆಬನಾನ್‌ನಲ್ಲಿ ಒಂದು ಗಂಟೆಯೊಳಗೆ 120 ಕ್ಕೂ ಹೆಚ್ಚು ಭಯೋತ್ಪಾದಕರ ತಾಣಗಳನ್ನು ಹೊಡೆಯಲಾಗಿದೆ ಎಂದು ಇಸ್ರೇಲ್ ಸೇನೆ ತಿಳಿಸಿದೆ. ಇಸ್ರೇಲ್ ಮತ್ತು ಇರಾನ್ ನಡುವೆ ಸೇಡು, ಪ್ರತೀಕಾರದ ದಾಳಿಗಳು ತೀವ್ರಗೊಳ್ಳುತ್ತಿವೆ. ಬೈರೂತ್ ನಗರದ ಮೇಲೆ ಇಸ್ರೇಲ್‌ನ ಪಡೆಗಳು ವೈಮಾನಿಕ ದಾಳಿ ಮುಂದುವರಿಸಿವೆ. ಇರಾನ್ ಸುಪ್ರೀಂ ಲೀಡರ್ ಇಸ್ರೇಲ್ ವಿರುದ್ಧ ಗುಡುಗಿದ ಬಳಿಕ ಇಸ್ರೇಲ್ ತನ್ನ ವಾಯುದಾಳಿಯನ್ನು ಮತ್ತಷ್ಟು ತೀವ್ರಗೊಳಿಸಿದೆ.

ಇನ್ನೂ ಗಾಜಾದಲ್ಲಿನ ಮಸೀದಿಯ ಮೇಲೆ ಇಸ್ರೇಲ್ ವಾಯುಪಡೆ ಶುಕ್ರವಾರ ನಡೆಸಿದ್ದ ವೈಮಾನಿಕ ದಾಳಿಯಿಂದ 26 ಮಂದಿ ಸಾವಿಗೀಡಾಗಿದ್ದರು. ಈ ಬೆನ್ನಲ್ಲೇ ಹಮಾಸ್ ಕೂಡ ಕೌಂಟರ್ ಅಟ್ಯಾಕ್ ಮಾಡಿತ್ತು. ಇಸ್ರೇಲ್ ವೈಮಾನಿಕ ದಾಳಿ ಬೆನ್ನಲ್ಲೇ ಗಾಜಾದಿಂದ ರಾಕೆಟ್ ಗಳನ್ನು ಹಾರಿಸಿತ್ತು.

# ಉಗಾಂಡಾ ಜೈಲಿನಲ್ಲಿ ಎಂಫಾಕ್ಸ್ ಪ್ರಕರಣ ಪತ್ತೆ

**ಕಂಪಾಲ:** ಮಧ್ಯ ಉಗಾಂಡಾದ ನಕಸೋಂಗೋಲಾ ಜೈಲಿನಲ್ಲಿ ಎಂಫಾಕ್ಸ್ ಪ್ರಕರಣ ಪತ್ತೆಯಾಗಿದೆ. ರೋಗಿಯನ್ನು ಪ್ರತ್ಯೇಕವಾಗಿರಿಸಿದ್ದು ಚಿಕಿತ್ಸೆ ಒದಗಿಸಲಾಗುತ್ತಿದೆ ಎಂದು ಜೈಲಿನ ಅಧಿಕಾರಿಗಳು ಮಂಗಳವಾರ ಹೇಳಿದ್ದಾರೆ.

ಕೈದಿ ಕೊಲೆ ಅಪರಾಧಕ್ಕೆ ಜೈಲಿನಲ್ಲಿ ಇರುವುದರಿಂದ ದುರದೃಷ್ಟವಶಾತ್ ಆತನನ್ನು ಜಾಮೀನು ಮೇಲೆ ಬಿಡುಗಡೆಗೊಳಿಸಲಾಗದು.

ಆತ ಜೈಲಿಗೆ ಬರುವಾಗಲೇ ಸೋಂಕಿಗೆ ತುತ್ತಾಗಿರುವ ಶಂಕೆಯಿದೆ ಎಂದು ಉಗಾಂಡಾ ಬಂಧೀಖಾನೆ ಇಲಾಖೆಯ ವಕ್ತಾರ ಫ್ರ್ಯಾಂಕ್ ಬೈನ್ ಹೇಳಿದ್ದಾರೆ. ಇದರೊಂದಿಗೆ ಉಗಾಂಡಾದಲ್ಲಿ ಎಂಫಾಕ್ಸ್ ಪ್ರಕರಣಗಳ ಸಂಖ್ಯೆ 41ಕ್ಕೇರಿದಂತಾಗಿದೆ.

ವರ್ಷದ ಆರಂಭದಲ್ಲಿ ನೆರೆಯ ಕಾಂಗೋ ಗಣರಾಜ್ಯದಲ್ಲಿ ಮೊದಲು ಪತ್ತೆಯಾದ ಎಂಫಾಕ್ಸ್ನ ಹೊಸ ರೂಪಾಂತರವನ್ನು ಆಗಸ್ಟ್ನಲ್ಲಿ ಗುರುತಿಸಿದ ಬಳಿಕ ಎಂಫಾಕ್ಸ್ ಅಂತರಾಷ್ಟ್ರೀಯ ಕಾಳಜಿಯ ಸಾರ್ವಜನಿಕ ಆರೋಗ್ಯ ತುರ್ತುಪರಿಸ್ಥಿತಿ ಎಂದು ವಿಶ್ವ ಆರೋಗ್ಯ ಸಂಸ್ಥೆ ಘೋಷಿಸಿದೆ.






# ನವೀನ್ಸ್ ಬೆಂಗಳೂರು ಡಾಲರ್ಸ್ ಕಾಲೋನಿಯಲ್ಲಿ ಮೊದಲ ಯೋಜನೆ

**ಬೆಂಗಳೂರು:** ಚೆನ್ನೈನ ಅತ್ಯಂತ ವಿಶ್ವಾಸಾರ್ಹ ರಿಯಲ್ ಎಸ್ಟೇಟ್ ಡೆವಲಪರ್ ಆಗಿ ಬುದ್ಧಿವಂತಿಕೆಯ ಪರಂಪರೆಯೊಂದಿಗೆ, ನವೀನ್ಸ್ ಈಗ ತನ್ನ ಆಂಥಿಯಾ ಪೊಯಟ್ರಿಯೊಂದಿಗೆ ಬೆಂಗಳೂರಿನ ಅಭಿವೃದ್ಧಿ ಹೊಂದುತ್ತಿರುವ ಮಾರುಕಟ್ಟೆಗೆ ತನ್ನ ಪರಿಣಿತಿಯನ್ನು ವಿಸ್ತರಿಸುತ್ತಿದೆ. ಬನ್ನೇರುಘಟ್ಟದ ಡಾಲರ್ಸ್ ಕಾಲೋನಿಯಲ್ಲಿರುವ ಜೆ. ಪಿ. ನಗರದ ಹೃದಯಭಾಗದಲ್ಲಿ, ಈ ಹೆಗ್ಗುರುತಾಗಿರುವ ಯೋಜನೆಯ ಸೊಗಸಾದ, ಐಷಾರಾಮಿ ಕಾಂಡೋಗಳನ್ನು ನೀಡುತ್ತಿದೆ. ಈ ನಿರ್ಮಾಣವು ಬೇಸ್ಮೆಂಟ್ (ನೆಲಮಾಳಿಗೆ) ಮತ್ತು ನೆಲದ +10 ಭವ್ಯವಾದ ಅಂತಸ್ತುಗಳನ್ನು ಒಳಗೊಂಡಿದೆ, 2, 3, 3.5 ಮತ್ತು 4 ಬಿ ಹೆಚ್ ಕೆ ವರೆಗಿನ 42 ವಿಶೇಷವಾದ ಕಾಂಡೋಮಿನಿಯಮ್ ಗಳನ್ನು ಒಳಗೊಂಡಿದೆ, ಐಷಾರಾಮಿ ಜೀವನಶೈಲಿಯನ್ನು ಬಯಸುವ ವಿವೇಚನಾಶೀಲ ಗ್ರಾಹಕರಿಗೆ ಪೂರೈಸಲು ವಿನ್ಯಾಸಗೊಳಿಸಲಾಗಿದೆ.

ಕಳೆದ 35 ವರ್ಷಗಳಲ್ಲಿ, ನಾವು ಚೆನ್ನೈನಲ್ಲಿ 125 ಕ್ಕೂ ಹೆಚ್ಚು ಯೋಜನೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದೇವೆ, ನಮ್ಮ ಗ್ರಾಹಕರ ನಂಬಿಕೆ ಮತ್ತು ಮೆಚ್ಚುಗೆಯನ್ನು ಗಳಿಸಿದ್ದೇವೆ. ನಾವು ಬೆಂಗಳೂರಿಗೆ ವಿಸ್ತರಿಸುತ್ತಿದ್ದಂತೆ, ನಮ್ಮ ಸೊಗಸಾದ ಕ್ರಿಯಾತ್ಮಕ ರಚನೆಗಳೊಂದಿಗೆ ನಗರದ ದೃಶ್ಯವನ್ನು ಹೆಚ್ಚಿಸುವ ಗುರಿಯೊಂದಿಗೆ ನಾವು ಅದೇ ಅಚಲವಾದ ಬದ್ಧತೆಯನ್ನು ಬೆಂಗಳೂರಿಗೆ ತರುತ್ತೇವೆ. ನವೀನ್ಸ್‌ನ ಆಂಥಿಯಾ ಪೊಯಟ್ರಿ ಐಷಾರಾಮಿ ವಾಸದ ಸ್ಥಳಗಳು, ಸಾಕಷ್ಟು ಬಾಲ್ಕನಿಗಳ ಜೊತೆ ಅಸಾಧಾರಣ ರೂಫ್ ಟಾಪ್ ರಿಟ್ರೀಟ್ಸ್ ಇದಕ್ಕೆ ಪೂರಕವಾಗಿದೆ. ಅತ್ಯುತ್ತಮ ದರ್ಜೆಯ ನಿರ್ಮಾಣವನ್ನು ನೀಡುವುದು ನಮ್ಮ ಗುರಿಯಾಗಿದೆ ಮತ್ತು ನಾವು ಸ್ಪರ್ಶಿಸುವ ಪ್ರತಿಯೊಂದು ನಗರದಲ್ಲಿ ಅತ್ಯಂತ ವಿಶ್ವಾಸಾರ್ಹ ಬಿಲ್ಡರ್ ಆಗಲು ನಾವು ಸಮರ್ಪಿತರಾಗಿದ್ದೇವೆ.'' ಎಂದು ನವೀನ್ಸ್‌ನ ವ್ಯವಸ್ಥಾಪಕ ನಿರ್ದೇಶಕರಾದ ನವೀನ್ ಕುಮಾರ್, ಹೇಳುತ್ತಾರೆ. ನವೀನ್ಸ್ ರವರ ಆಂಥಿಯಾ ಪೊಯಟ್ರಿ ಅದರ ನಿವಾಸಿಗಳಿಗೆ ಆಧುನಿಕ ವಿನ್ಯಾಸದಿಂದ ವ್ಯಾಖ್ಯಾನಿಸಲಾದ ಪ್ರೀಮಿಯಂ ಜೀವನಶೈಲಿಯನ್ನು ನೀಡುತ್ತದೆ ಮತ್ತು ಪ್ರಕೃತಿ ಪ್ರೇಮವನ್ನು ಬೆಳೆಸುವ ಬಾಲ್ಕನಿಗಳು ಇದರಲ್ಲಿ ಹೇರಳವಾಗಿವೆ. ಸೌಲಭ್ಯಗಳಲ್ಲಿ ಗ್ರ್ಯಾಂಡ್ ಎಂಟ್ರೆನ್ಸ್ ಪೋರ್ಟಲ್, ಡಬಲ್ ಸೀಲಿಂಗ್ ಹೈಟ್ ಲಾಬಿ ಜೊತೆಗೆ ಲೌಂಚ್, ಮಲ್ಟಿಪರ್ಪಸ್ ಹಾಲ್, ಜಿಮ್, ಮಕ್ಕಳ ಆಟದ ಪ್ರದೇಶ ಮತ್ತು ವಿಶಾಲವಾದ ಕಾರ್ ಪಾರ್ಕ್ ಸೇರಿವೆ. ಟೆರಸ್ (ತಾರಸಿ) ಅನುಭವವನ್ನು ಮತ್ತಷ್ಟು ಉತ್ತುಂಗಕ್ಕೇರಿಸುತ್ತದೆ, ತಾಪಮಾನ-ನಿಯಂತ್ರಿತ ಈಜುಕೊಳ, ಮಕ್ಕಳಿಗಾಗಿ ಮೀಸಲಾದ ಪೂಲ್, ಸುಂದರವಾಗಿ ಮಾಡಿದ ಲ್ಯಾಂಡ್ಸ್ಕೇಪ್ಡ್ ಉದ್ಯಾನವನಗಳು ಮತ್ತು ರಿಫ್ಲೆಕ್ಸಾಲಜಿ ಮಾರ್ಗವನ್ನು ನೀಡುತ್ತದೆ.

# ನಸ್ರಲ್ಲಾ ಉತ್ತರಾಧಿಕಾರಿಗಳೆಲ್ಲ ಫಿನಿಷ್: ನೆತನ್ಯಾಹು

**ಟೆಲ್‌ಅವಿವ್:** ಇಸ್ರೇಲ್ ಪಡೆಗಳು ಹೆಜ್ಬುಲ್ಲಾ ನಾಯಕತ್ವದ ಉತ್ತರಾಧಿಕಾರಿಯಾಗುತ್ತಿದ್ದ ಪ್ರಮುಖ ಉಗ್ರರನ್ನು ಈಗಾಗಲೇ ಹತ್ಯೆ ಮಾಡಿವೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮಂಗಳವಾರ ಘೋಷಿಸಿದ್ದಾರೆ. ಮೊದಲೇ ರೆಕಾರ್ಡ್ ಮಾಡಿದ ವಿಡಿಯೋ ಸಂದೇಶದಲ್ಲಿ, ''ನಾವು ಹೆಜ್ಬುಲ್ಲಾ ಸಾಮರ್ಥ್ಯವನ್ನು ಕುಗ್ಗಿಸಿದ್ದೇವೆ. ನಸ್ರಲ್ಲಾ ಅವರ ಉತ್ತರಾಧಿಕಾರಿ ಮತ್ತು ಉತ್ತರಾಧಿಕಾರಿಯ ಬದಲಿ ಸೇರಿದಂತೆ ಹಲವಾರು ಉಗ್ರರನ್ನು ಹೊಡೆದುರುಳಿಸಿದ್ದೇವೆ. ಉಗ್ರ ಸಂಘಟನೆ ಪ್ರಸ್ತುತ ದುರ್ಬಲವಾಗಿದೆ '' ಎಂದು ಹೇಳಿದ್ದಾರೆ. ಆದರೆ, ನೆತನ್ಯಾಹು ಅವರು ಯಾವುದೇ ನಿರ್ದಿಷ್ಟ ಹೆಸರುಗಳನ್ನು ಬಹಿರಂಗಪಡಿಸಿಲ್ಲ.



ಲೆಬನಾನ್ನ ಜನರು ಹೆಜ್ಬುಲ್ಲಾ ನಂಟಿನಿಂದ ತಮ್ಮನ್ನು ಮುಕ್ತಗೊಳಿಸಬೇಕು ಎಂದು ಎಂದು ಕೇಳಿಕೊಂಡಿದ್ದು, ಇಸ್ರೇಲ್ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಹೊಂದಿದೆ. ಬದಲಾವಣೆಯ ಅವಕಾಶವನ್ನು ಬಳಸಿಕೊಳ್ಳಿ ಎಂದು ಒತ್ತಾಯಿಸಿದರು, ನೀವು ಈಗ ನಿಮ್ಮ ದೇಶವನ್ನು ಬದಲಾಯಿಸಬಹುದು ಮತ್ತು ಅದನ್ನು ಶಾಂತಿ ಮತ್ತು ಸಮೃದ್ಧಿಯ ಹಾದಿಗೆ ಹಿಂತಿರುಗಿಸಬಹುದು.'' ಎಂದು ಹೇಳಿದ್ದಾರೆ. ಉದ್ವಿಗ್ನತೆಯ ಮಧ್ಯೆ ನೆತನ್ಯಾಹು ಅವರು ಹೇಳಿಕೆ ನೀಡಿದ್ದಾರೆ. ಭವಿಷ್ಯದ ಮೇಲೆ ಪ್ರಭಾವ ಬೀರಲು ಲೆಬನಾನಿನ ಜನರ ಶಕ್ತಿಯನ್ನು ಒತ್ತಿಹೇಳಿದರು. ಕ್ರಮ ಕೈಗೊಳ್ಳದಿದ್ದಲ್ಲಿ ಭೀಕರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಹೆಜ್ಬುಲ್ಲಾ ವಿರುದ್ಧ ನೀವು ಕ್ರಮ ಕೈಗೊಳ್ಳದಿದ್ದರೆ ಜನನಿಬಿಡ ಪ್ರದೇಶಗಳಲ್ಲಿಯೂ ಇಸ್ರೇಲ್ ಹೋರಾಡಲು ಪ್ರಯತ್ನಿಸುವುದನ್ನು ಮುಂದುವರಿಸುತ್ತದೆ'' ಎಂದು ಅಪಾಯವನ್ನು ಒತ್ತಿಹೇಳಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ನಡೆದೇ ಹೋಯ್ತು ಹಿಂದೆಂದೂ ಆಗಿರದ ಘನಘೋರ ತಪ್ಪು



**ಕ್ಯಾಪ್ಟನ್ ಸೇರಿ ಎಲ್ಲರೂ ನಾಮಿನೇಟ್**

'ಬಿಗ್ ಬಾಸ್'ನಲ್ಲಿ ಅದರದ್ದೇ ಆದ ನಿಯಮಗಳು ಇವೆ. ಈ ನಿಯಮಗಳನ್ನು ಸ್ಪರ್ಧಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು. ಅದರಲ್ಲೂ ಕೆಲವು ನಿಯಮಗಳನ್ನು ಸ್ಪರ್ಧಿಗಳು ತಪ್ಪುವಂತಿಲ್ಲ. ಕೆಲವೊಮ್ಮೆ ಸ್ಪರ್ಧಿಗಳು ಗೊತ್ತಿದ್ದೂ ನಿಯಮ ಬ್ರೇಕ್ ಮಾಡುತ್ತಾರೆ. ಈಗ ಬಿಗ್ ಬಾಸ್ ಇತಿಹಾಸದಲ್ಲಿ ನಡೆಯದೇ ಇರುವ ಘನಘೋರ ತಪ್ಪೊಂದು ನಡೆದು ಹೋಗಿದೆ. ಇದಕ್ಕೆ ಸಂಬಂಧಿಸಿದಂತೆ ದೊಡ್ಮನೆಯವರಿಗೆ ಶಿಕ್ಷೆ ಕೂಡ ಆಗಿದೆ. ಇದರಿಂದ ಮನೆಯಲ್ಲಿ ಅಸಮಾಧಾನದ ಬುಗ್ಗೆ ಎದ್ದಿದೆ.

ಆರಂಭದಲ್ಲಿ ಬಿಗ್ ಬಾಸ್ ನಾಮಿನೇಷನ್‌ಗೆ ಚಟುವಟಿಕೆ ಒಂದನ್ನು ನೀಡಿತ್ತು. ಈ ಚಟುವಟಿಕೆಯಲ್ಲಿ ತ್ರಿವಿಕ್ರಂ, ಅನುಷಾ, ಧನರಾಜ್, ಜಗದೀಶ್, ಐಶ್ವರ್ಯಾ, ಮಾನಸಾ ಹಾಗೂ ರಂಜಿತ್ ನಾಮಿನೇಟ್ ಆದರು. ಉಳಿದ ಸ್ಪರ್ಧಿಗಳು ನಿಟ್ಟುಸಿರು ಬಿಟ್ಟಿದ್ದರು. ಆದರೆ, ಮಾನಸಾ ಸೇರಿ ಕೆಲವರು ಮಾಡಿದ ತಪ್ಪಿನಿಂದ ಇಡೀ ಮನೆ ಶಿಕ್ಷೆಗೆ ಒಳಗಾಗಿದೆ. ಎಲ್ಲರೂ ನಾಮಿನೇಟ್ ಮಾಡಿ ಬಿಗ್ ಬಾಸ್ ಆದೇಶ ನೀಡಿದ್ದಾರೆ.

ನಿಯಮಗಳ ಪ್ರಕಾರ 'ಬಿಗ್ ಬಾಸ್'ನಲ್ಲಿ ಬ್ಲೈಂಡ್ಸ್ ಇಳಿಸಿದಾಗ ಯಾರೂ ಹೊರಗೆ ಇಣುಕಿ ನೋಡುವಂತಿಲ್ಲ. ಇದಕ್ಕೆ ಕಾರಣ ಅಲ್ಲಿ ಟಾಸ್ಕ್‌ಗೆ ಸಿದ್ಧತೆ ಮಾಡುತ್ತಾ ಇರಲಾಗುತ್ತದೆ. ಟಾಸ್ಕ್ ಹೇಗಿರುತ್ತದೆ ಎಂಬುದು ಮೊದಲೇ ಗೊತ್ತಾದರೆ ಸ್ಪರ್ಧಿಗಳು ಮಾನಸಿಕವಾಗಿ ರೆಡಿ ಆಗುತ್ತಾರೆ. ಈ ಕಾರಣದಿಂದ ಇದಕ್ಕೆ ಅನುಮತಿ ಇಲ್ಲ. ಆದರೆ, ಮಾನಸಾ ಸೇರಿದಂತೆ ಕೆಲವರು ಬ್ಲೈಂಡ್ಸ್‌ನ ಸರಿಸಿ ಹೊರಗೆ ಇಣುಕಿ ನೋಡಿದ್ದಾರೆ.

ಇದರಿಂದ ಬಿಗ್ ಬಾಸ್ ಸಿಟ್ಟಾದರು. 'ಬ್ಲೈಂಡ್ಸ್ ಡೌನ್ ಆಗಿದ್ದಾಗ ಆಚೆಗೆ ಇಣುಕಿ ನೋಡುವಂತಿಲ್ಲ ಎಂಬುದು ಮನೆಯ ತುಂಬಾ ಮುಖ್ಯವಾದ ಮೂಲ ನಿಯಮ. ಈಗಷ್ಟೇ ಆ ನಿಯಮವನ್ನು ಕೆಲ ಸದಸ್ಯರು ಉಲ್ಲಂಘಿಸಿದ್ದಾರೆ. ಈ ವಿಚಾರ ಮನೆಯ ಕ್ಯಾಪ್ಟನ್ ಗಮನಕ್ಕೆ ಬಂದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಇನ್ನಷ್ಟು ಶೋಚನೀಯ. ನಿಮ್ಮೆಲ್ಲರ ವರ್ತನೆಯಿಂದ ಬಿಗ್ ಬಾಸ್‌ಗೆ ನೋವಾಗಿದೆ. ಬಿಗ್ ಬಾಸ್‌ನ ಹಾಗೂ ಬಿಗ್ ಬಾಸ್ ನಿಯಮಗಳನ್ನು ಗೌರವಿಸದ ನಿಮಗೆ ಈ ಮನೆಯಲ್ಲಿ ಇರಲು ಯೋಗ್ಯತೆ ಇಲ್ಲ. ಈ ಕ್ಷಣದಿಂದ ಬಿಗ್ ಬಾಸ್ ಮನೆಯ ಎಲ್ಲ ಸದಸ್ಯರನ್ನು ನಾಮಿನೇಟ್ ಮಾಡುತ್ತಿದ್ದಾರೆ' ಎಂದು ಆದೇಶ ನೀಡಿದರು.

'ಬಿಗ್ ಬಾಸ್ ಇತಿಹಾಸದಲ್ಲಿ ಯಾವ ಕ್ಯಾಪ್ಟನ್ ಕೂಡ ನಾಮಿನೇಟ್ ಆಗಿರಲಿಲ್ಲ. ಆದರೆ, ಹಂಸ ಅವರೇ ನಿಮ್ಮ ಇಮ್ಯೂನಿಟಿಯನ್ನು ಹಿಂಪಡೆದು ನೇರವಾಗಿ ನಾಮಿನೇಟ್ ಮಾಡಿದ್ದೇವೆ. ಇದು ಇತಿಹಾಸ. ಅಭಿನಂದನೆಗಳು' ಎಂದು ಬಿಗ್ ಬಾಸ್ ಘೋಷಣೆ ಮಾಡಿದರು.



# ನಾನು ಎಮ್ಮೆ ಕಾದವನು ಎಂಎ ಮಾಡಿದವನಲ್ಲ



**ನನಗೇಕೆ ಡಾಕ್ಟರೇಟ್' ಎಂದು ಕೇಳಿದ್ದ ರಾಜ್**

ರಾಜ್ ಕುಮಾರ್ ಕೇವಲ ರಾಜ್‌ಕುಮಾರ್ ಅಲ್ಲ. ಅವರು ವರನಟ ಡಾಕ್ಟರ್ ರಾಜ್ ಕುಮಾರ್. ಅವರಿಗೆ ಮೈಸೂರು ವಿಶ್ವವಿದ್ಯಾನಿಲಯವು ಡಾಕ್ಟರೇಟ್ ನೀಡಿ ಗೌರವಿಸಿದೆ. ಅವರು ದೊಡ್ಡ ಮಟ್ಟದಲ್ಲಿ ಜನಪ್ರಿಯತೆ ಪಡೆದರೂ ರಾಜ್ ಕುಮಾರ್‌ಗೆ ಅಹಂ ಇರಲಿಲ್ಲ. ಅವರು ದೊಡ್ಡ ಮಟ್ಟದಲ್ಲಿ ಜನಪ್ರಿಯತೆ ಪಡೆದಿದ್ದರು. ಅವರು ಒಮ್ಮೆ ತಮಗೆ ಸಿಕ್ಕ ಗೌರವ ಡಾಕ್ಟರೇಟ್ ಬಗ್ಗೆ ಮಾತನಾಡಿದ್ದರು. ಅದನ್ನು ನನಗೇಕೇ ನೀಡಿದಿರಿ ಎಂದು ವಿಶ್ವ ವಿದ್ಯಾನಿಲಯದವರಿಗೆ ಕೇಳಿದ್ದರಂತೆ.

ರಾಜ್ ಕುಮಾರ್ ಅವರಿಗೆ ಸಿಕ್ಕ ಗೌರವಗಳು ಹಲವು. ಅವರಿಗೆ ಪದ್ಮ ಭೂಷಣ, ದಾದಾ ಸಾಹೇಬ್ ಫಾಲ್ಕೆ ರೀತಿಯ ಗೌರವಗಳು ಸಂದಾಯ ಆಗಿವೆ. ಇದರ ಜೊತೆಗೆ ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ನೀಡಲಾಗಿತ್ತು. ಇದನ್ನು ರಾಜ್ ಕುಮಾರ್ ಅವರು ಪ್ರೀತಿಯಿಂದ ಸ್ವೀಕರಿಸಿದ್ದರು. ಅವರು ಒಮ್ಮೆ ಅಭಿಮಾನಿಗಳನ್ನು ಉದ್ದೇಶಿಸಿ ಮಾತನಾಡುವಾಗ ಈ ಬಗ್ಗೆ ಮಾತನಾಡಿದ್ದರು.

'ನಾನು ವಿದ್ಯಾವಂತವನಲ್ಲ. ಡಿಗ್ರೀ ಪಡೆದವನಲ್ಲ. ಮೈಸೂರು ವಿಶ್ವವಿದ್ಯಾನಿಲಯದವರು ನನಗೆ ಡಾಕ್ಟರೇಟ್ ಕೊಟ್ಟರು. ಅಲ್ಲಿಯೇ ನಾನು ಕೇಳಿದೆ, ಏನು ನೋಡಿ ನನಗೆ ಡಾಕ್ಟರೇಟ್ ಕೊಡ್ತಿದೀರಿ ಎಂದು ಕೇಳಿದ್ದೆ. ನಾನು ಎಂಎ ಪಾಸ್ ಮಾಡಿದ್ದೀನಾ ಹಳ್ಳಿಯಲ್ಲಿದ್ದಾಗ ಎಮ್ಮೆ ಮೇಯಿಸುತ್ತಿದ್ದೆ ಎಂದೆ ಎಂಬುದಾಗಿ ಅವರಿಗೆ ಹೇಳಿದ್ದೆ' ಎಂದಿದ್ದರು ಅವರು.

ರಾಜ್ ಕುಮಾರ್ ಅವರಿಗೆ ರಸಿಕರ ರಾಜ ಎನ್ನುವ ಬಿರುದು ಕೂಡ ಇದೆ. ಈ ಬಗ್ಗೆಯೂ ಮಾತನಾಡಿದ್ದರು. 'ರಸಿಕರಿಗೆ ನಾನು ರಾಜನಂತೆ. ಎಲ್ಲಾ ನೀವು ಕೊಟ್ಟ ಹೆಸರು, ಎಲ್ಲಾ ನೀವು ಕೊಟ್ಟ ಆಸ್ತಿ, ನೀವು ಕೊಟ್ಟ ಕರುಣೆ. ಇದರ ವಿನಃ ರಾಜ್ ಕುಮಾರ್‌ಗೆ ಏನು ಗೊತ್ತಾಗಲು ಸಾಧ್ಯವಿಲ್ಲ' ಎಂದು ರಾಜ್ ಕುಮಾರ್ ಅವರು ಈ ಮೊದಲು ಹೇಳಿದ್ದರು.

ರಾಜ್ ಕುಮಾರ್ ಅವರು ಸರಳತೆಗೆ ಮತ್ತೊಂದು ಹೆಸರು ಆಗಿದ್ದರು. ಅವರು ಯಾವಾಗಲೂ ಬಿಳಿ ಶರ್ಟ್, ಬಿಳಿ ಪಂಚೆ ಧರಿಸುತ್ತಿದ್ದರು. ಅಭಿಮಾನಿಗಳನ್ನು ಕಂಡರೆ ಅವರು ತೋರಿಸುತ್ತಿದ್ದ ಪ್ರೀತಿ ಅಪಾರ. ಅವರ ಮನೆಗೆ ಯಾರೇ ಬಂದರೂ ರಾಜ್ ಕುಮಾರ್ ಅತಿಯಾಗಿ ಗೌರವಿಸುತ್ತಿದ್ದರು.

ರಾಜ್ ಕುಮಾರ್ ಅವರು ಜನಿಸಿದ್ದು 1929ರಲ್ಲಿ. ಮರಣ ಹೊಂದಿದ್ದು 2006ರಲ್ಲಿ. ಅವರ ಸರಳತೆ ಈಗಲೂ ಅನೇಕರಿಗೆ ಮಾದರಿ. ಅವರ ಮಾತುಗಳಲ್ಲಿ ಎಂದಿಗೂ ಗರ್ವ ಕಾಣಿಸಿಲ್ಲ. ಈ ಕಾರಣಕ್ಕೆ ಅವರು ಅನೇಕರಿಗೆ ಇಷ್ಟ ಆಗುತ್ತಾರೆ. ಅವರ ಸಿನಿಮಾಗಳು ಈಗಲೂ ಅನೇಕರಿಗೆ ಆದರ್ಶದಾಯಕವಾಗಿದೆ.

## 'ಕಾಂತಾರ' ಚಿತ್ರದ ಪ್ರತಿ ಹಂತವು ವಿಶೇಷವಾಗಿತ್ತು
# ರಾಷ್ಟ್ರ ಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ



ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಅವರು ದೆಹಲಿಯಲ್ಲಿ 'ಕಾಂತಾರ' ಚಿತ್ರದಲ್ಲಿನ ನಟನೆಗಾಗಿ ರಾಷ್ಟ್ರ ಪ್ರಶಸ್ತಿ ಸ್ವೀಕರಿಸಿದ್ದಾರೆ. ಇದೀಗ ಈ ಸಂಭ್ರಮವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಕನ್ನಡದ ಚಿತ್ರರಂಗದ ಕೀರ್ತಿಯ ಕ್ಷಣ. 'ಕಾಂತಾರ' ಸಿನಿಮಾಗಾಗಿ ಪ್ರತಿಷ್ಠಿತ ರಾಷ್ಟ್ರ ಪ್ರಶಸ್ತಿ ಸ್ವೀಕರಿಸಲು ಖುಷಿಯಿದೆ. 'ಕಾಂತಾರ' ಚಿತ್ರದ ಈ ಪ್ರಯಾಣದ ಪ್ರತಿಯೊಂದು ಹಂತವು ಸ್ಪೆಷಲ್ ಆಗಿತ್ತು. ಇನ್ನೂ ನಮ್ಮ ಕೆಲಸವನ್ನು ಗುರುತಿಸಿದ ತೀರ್ಪುಗಾರರಿಗೆ ಧನ್ಯವಾದಗಳು ಎಂದು ರಿಷಬ್ ಶೆಟ್ಟಿ ಸೋಶಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ.

ಇನ್ನೂ 'ಕಾಂತಾರ' ಚಿತ್ರದ ನಟನೆಗಾಗಿ ಅತ್ಯುತ್ತಮ ನಟ ಪ್ರಶಸ್ತಿ ಅವಾರ್ಡ್ ಸ್ವೀಕರಿಸಿದ್ದಾರೆ ರಿಷಬ್. ಈ ಚಿತ್ರಕ್ಕೆ ಅತ್ಯುತ್ತಮ ಮನರಂಜನಾ ಸಿನಿಮಾ ವಿಭಾಗದಲ್ಲಿಯೂ ಪ್ರಶಸ್ತಿ ಸಿಕ್ಕಿದೆ.

# 'ಕೆಜಿಎಫ್ 2' ಚಿತ್ರಕ್ಕಾಗಿ ಪ್ರಶಸ್ತಿ ಸ್ವೀಕರಿಸಿದ ನಿರ್ಮಾಪಕ ವಿಜಯ್ ಕಿರಗಂದೂರು

ಕನ್ನಡದ ಸಿನಿಮಾಗಳು ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡುತ್ತಿವೆ. ದೆಹಲಿಯಲ್ಲಿ ರಾಷ್ಟ್ರ ಪ್ರಶಸ್ತಿ ಪ್ರದಾನ ಸಮಾರಂಭ ನಡೆದಿದೆ. 'ಕೆಜಿಎಫ್ 2' ಸಿನಿಮಾಗಾಗಿ ನ್ಯಾಷನಲ್ ಅವಾರ್ಡ್ ಗೆದ್ದ ಹಿನ್ನೆಲೆ ನಿರ್ಮಾಪಕ ವಿಜಯ್ ಕಿರಗಂದೂರು ಅವರು ರಾಷ್ಟ್ರ ಪ್ರಶಸ್ತಿ ಪಡೆದಿದ್ದಾರೆ.



ರಾಷ್ಟ್ರಪತಿ ದ್ರೌಪತಿ ಮುರ್ಮು ಅವರು ರಾಷ್ಟ್ರ ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ಅತ್ಯುತ್ತಮ ಪ್ರಾದೇಶಿಕ ಸಿನಿಮಾ, ಅತ್ಯುತ್ತಮ ಸಾಹಸ ನಿರ್ದೇಶನ ವಿಭಾಗದಲ್ಲಿ 'ಕೆಜಿಎಫ್ 2'ಗೆ ರಾಷ್ಟ್ರ ಪ್ರಶಸ್ತಿ ದಕ್ಕಿದೆ. ಈ ಚಿತ್ರ ನಿರ್ಮಿಸಿರುವ ಹೊಂಬಾಳೆ ಸಂಸ್ಥೆಯ ರೂವಾರಿ ವಿಜಯ್ ಕಿರಗಂದೂರು ಅವರಿಗೆ ರಾಷ್ಟ್ರ ಪ್ರಶಸ್ತಿ ನೀಡಲಾಗಿದೆ. ಇನ್ನೂ ಅತ್ಯುತ್ತಮ ಮನರಂಜನಾ ಚಿತ್ರ 'ಕಾಂತಾರ' ಮತ್ತು ಈ ಚಿತ್ರದ ನಟನೆಗೆ ರಿಷಬ್ ಶೆಟ್ಟಿಗೆ ರಾಷ್ಟ್ರ ಪ್ರಶಸ್ತಿ ನೀಡಲಾಗಿದೆ.

ಇನ್ನೂ ಕನ್ನಡದ ನಟಿ ನಿತ್ಯಾ ಮೆನನ್‌ಗೆ 'ತಿರುಚಿತ್ರಂಬಲಂ' ಸಿನಿಮಾದ ನಟನೆಗಾಗಿ ಅತ್ಯುತ್ತಮ ನಟಿ ಪ್ರಶಸ್ತಿ ನೀಡಲಾಗಿದೆ.

## ವಿಶ್ವ ದಾಖಲೆ ಬರೆಯುವ ಸನಿಹದಲ್ಲಿ ಮಿಸ್ಟರ್ 360
# ಸೂರ್ಯನಿಗೆ ಬೇಕಿದೆ 39 ರನ್

ವಿಶ್ವದ ನಂ.2 ಟಿ20 ಬ್ಯಾಟರ್ ಎಂದೇ ಗುರುತಿಸಿಕೊಂಡಿರುವ ಟೀಂ ಇಂಡಿಯಾದ ಸ್ಟಾರ್ ಆಟಗಾರ ಸೂರ್ಯಕುಮಾರ್ ಯಾದವ್ ಮತ್ತೊಂದು ದಾಖಲೆ ಬರೆಯುವ ಸನಿಹದಲ್ಲಿದ್ದಾರೆ.

'ಮಿಸ್ಟರ್ 360' ಖ್ಯಾತಿಯ ಸೂರ್ಯಕುಮಾರ್ ಯಾದವ್ ಈವರೆಗೆ ಆಡಿರುವ 72 ಅಂತಾರಾಷ್ಟ್ರೀಯ ಟಿ20 ಪಂದ್ಯಗಳಲ್ಲಿ 2,461 ರನ್ ಸಿಡಿಸಿದ್ದಾರೆ. ಅ.9ರಂದು ಬಾಂಗ್ಲಾದೇಶ ಕ್ರಿಕೆಟ್ ತಂಡದ ವಿರುದ್ಧ ನಡೆಯಲಿರುವ 2ನೇ ಟಿ20 ಪಂದ್ಯದಲ್ಲಿ 39 ರನ್ ಸಿಡಿಸಿದ್ರೆ, 2,500 ಪೂರೈಸಲಿದ್ದಾರೆ.



ಇದರೊಂದಿಗೆ ಅಂತಾರಾಷ್ಟ್ರೀಯ ಟಿ20 ಕ್ರಿಕೆಟ್‌ನಲ್ಲಿ ಅತಿ ವೇಗವಾಗಿ 2,500 ರನ್ ಪೂರೈಸಿದ ವಿಶ್ವದ 2ನೇ ಆಟಗಾರ ಎಂಬ ವಿಶೇಷ ಸಾಧನೆಗೆ ಪಾತ್ರರಾಗಲಿದ್ದಾರೆ. 67 ಪಂದ್ಯಗಳಲ್ಲಿ ಈ ಸಾಧನೆ ಮಾಡಿರುವ ಪಾಕ್ ತಂಡದ ನಾಯಕ ಬಾಬರ್ ಆಜಂ ಅಗ್ರಸ್ಥಾನದಲ್ಲಿದ್ದಾರೆ. ಅಲ್ಲದೇ ವಿರಾಟ್ ಕೊಹ್ಲಿ, ಮೊಹಮ್ಮದ್ ರಿಜ್ವಾನ್, ಆರನ್ ಫಿಂಚ್, ಮಾರ್ಟಿನ್ ಗಪ್ಟಿಲ್ ಈ ಸಾಧಕರ ಪಟ್ಟಿಯಲ್ಲಿದ್ದಾರೆ.

**ಅತಿ ವೇಗವಾಗಿ 2,500 ರನ್ ಪೂರೈಸಿದ ಬ್ಯಾಟರ್**

- **ಬಾಬರ್ ಆಜಂ (ಪಾಕಿಸ್ತಾನ) – 67 ಪಂದ್ಯ**
- **ವಿರಾಟ್ ಕೊಹ್ಲಿ (ಭಾರತ) – 73 ಪಂದ್ಯ**
- **ಮೊಹಮ್ಮದ್ ರಿಜ್ವಾನ್ (ಪಾಕಿಸ್ತಾನ) – 76 ಪಂದ್ಯ**
- **ಆರನ್ ಫಿಂಚ್ (ಆಸ್ಟ್ರೇಲಿಯಾ) – 78 ಪಂದ್ಯ**
- **ಮಾರ್ಟಿನ್ ಗಪ್ಟಿಲ್ (ನ್ಯೂಜಿಲೆಂಡ್) – 86 ಪಂದ್ಯ**

ಇದೇ ಅಕ್ಟೋಬರ್ 6ರಂದು ಬಾಂಗ್ಲಾದೇಶದ ವಿರುದ್ಧ ನಡೆದ ಮೊದಲ ಟಿ20 ಪಂದ್ಯದಲ್ಲಿ ಭಾರತ 7 ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ 3 ಪಂದ್ಯಗಳ ಟಿ20 ಸರಣಿಯನ್ನು 1–0 ಅಂತರದಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಈ ಪಂದ್ಯದಲ್ಲಿ ನಾಯಕನಾಗಿ ಸೂರ್ಯಕುಮಾರ್ ಯಾದವ್ 14 ಎಸೆತಗಳಲ್ಲಿ 29 ರನ್ ಬಾರಿಸಿದ್ದರು.

# ಟೀಮ್ ಇಂಡಿಯಾ ಆಡುವ ಬಳಗದಲ್ಲಿ ಒಂದು ಬದಲಾವಣೆ ಸಾಧ್ಯತೆ

ಭಾರತ ಮತ್ತು ಬಾಂಗ್ಲಾದೇಶ್ ನಡುವಣ 2ನೇ ಟಿ20 ಪಂದ್ಯವು ಇಂದು ನಡೆಯಲಿದೆ. ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ಜರುಗಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಒಂದು ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯಿದೆ. ಏಕೆಂದರೆ ಭಾರತದ ಪರ ಕಣಕ್ಕಿಳಿಯಲು ಹಲವು ಆಟಗಾರರು ಸರದಿಯಲ್ಲಿದ್ದು, ಹೀಗಾಗಿ ಮೊದಲ ಮ್ಯಾಚ್‌ನಲ್ಲಿ ಅವಕಾಶ ಪಡೆಯದ ಆಟಗಾರರೊಬ್ಬರಿಗೆ ಈ ಸಲ ಚಾನ್ಸ್ ನೀಡುವ ಸಾಧ್ಯತೆಯಿದೆ. ಅದರಂತೆ ದ್ವಿತೀಯ ಪಂದ್ಯದಲ್ಲೂ ಟೀಮ್ ಇಂಡಿಯಾ ಆರಂಭಿಕರಾಗಿ ಅಭಿಷೇಕ್ ಶರ್ಮಾ ಹಾಗೂ ಸಂಜು ಸ್ಯಾಮ್ಸನ್ ಕಾಣಿಸಿಕೊಳ್ಳಲಿದ್ದಾರೆ. ಇನ್ನು ಮೂರನೇ ಕ್ರಮಾಂಕದಲ್ಲಿ ನಾಯಕ ಸೂರ್ಯಕುಮಾರ್ ಯಾದವ್ ಕಣಕ್ಕಿಳಿಯುವುದು ಖಚಿತ. ಹಾಗೆಯೇ ನಾಲ್ಕನೇ ಕ್ರಮಾಂಕದಲ್ಲಿ ರಿಯಾನ್ ಪರಾಗ್ ಆಡಬಹುದು.

ಇನ್ನು ಐದನೇ ಕ್ರಮಾಂಕವು ಹಾರ್ದಿಕ್ ಪಾಂಡ್ಯಗೆ ಸೀಮಿತ. ಆರನೇ ಕ್ರಮಾಂಕದಲ್ಲಿ ರಿಂಕು ಸಿಂಗ್ ಬ್ಯಾಟ್ ಬೀಸುವುದನ್ನು ಎದುರು ನೋಡಬಹುದು. ಹಾಗೆಯೇ ವಾಷಿಂಗ್ಟನ್ ಸುಂದರ್ ಹಾಗೂ ವರುಣ್ ಚಕ್ರವರ್ತಿ 7ನೇ ಮತ್ತು 8ನೇ ಸ್ಥಾನಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ.



ಇನ್ನುಳಿದಂತೆ ವೇಗಿಗಳಾಗಿ ಅರ್ಷದೀಪ್ ಸಿಂಗ್ ಹಾಗೂ ಮಯಾಂಕ್ ಯಾದವ್ ಕಣಕ್ಕಿಳಿಯುವುದನ್ನು ಎದುರು ನೋಡಬಹುದು. ಆದರೆ ಮೊದಲ ಪಂದ್ಯದಲ್ಲಿ ಆಡಿದ್ದ ಆಲ್‌ರೌಂಡರ್ ನಿತೀಶ್ ರೆಡ್ಡಿ ಅವರನ್ನು ಈ ಪಂದ್ಯದಿಂದ ಕೈ ಬಿಡುವ ಸಾಧ್ಯತೆಯಿದ್ದು, ಅವರ ಬದಲಿಗೆ ವೇಗಿ ಹರ್ಷಿತ್ ರಾಣಾಗೆ ಚಾನ್ಸ್ ನೀಡಬಹುದು.

ಸರಣಿ ಗೆಲ್ಲುವ ವಿಶ್ವಾಸದಲ್ಲಿ ಟೀಮ್ ಇಂಡಿಯಾ: ಬಾಂಗ್ಲಾದೇಶ್ ವಿರುದ್ಧದ ಮೂರು ಪಂದ್ಯಗಳ ಟಿ20 ಸರಣಿಯ ಮೊದಲ ಮ್ಯಾಚ್‌ನಲ್ಲೇ ಟೀಮ್ ಇಂಡಿಯಾ ಪಾರುಪತ್ಯ ಮೆರೆದಿದೆ. ಗ್ವಾಲಿಯರ್‌ನಲ್ಲಿ ನಡೆದ ಈ ಪಂದ್ಯವನ್ನು ಭಾರತ ತಂಡವು 7 ವಿಕೆಟ್ ಗಳಿಂದ ಗೆದ್ದುಕೊಂಡಿತ್ತು. ಇದೀಗ ಉಭಯ ತಂಡಗಳು ಎರಡನೇ ಪಂದ್ಯಕ್ಕಾಗಿ ಸಜ್ಜಾಗಿದೆ. ಈ ಮ್ಯಾಚ್‌ನಲ್ಲಿ ಟೀಮ್ ಇಂಡಿಯಾ ಗೆದ್ದರೆ ಸರಣಿ ವಶಪಡಿಸಿಕೊಳ್ಳಬಹುದು. ಅತ್ತ ಸರಣಿ ಆಸೆಯನ್ನು ಜೀವಂತವಿರಿಸಿಕೊಳ್ಳಬೇಕಿದ್ದರೆ ಬಾಂಗ್ಲಾದೇಶ್ ತಂಡ ಈ ಪಂದ್ಯವನ್ನು ಗೆಲ್ಲಲೇಬೇಕು.

## ಸಿಎಂ ಆಪ್ತ ಮಹದೇವಪ್ಪರನ್ನ ಭೇಟಿಯಾದ ಸತೀಶ್ ಜಾರಕಿಹೊಳಿ
# ರಾಜ್ಯ ರಾಜಕಾರಣದಲ್ಲಿ ಸಂಚಲನ

**ಮೈಸೂರು:** 'ಮುಂದಿನ ಸಿಎಂ ಸತೀಶ್ ಜಾರಕಿಹೊಳಿ' ಎಂಬ ಕೂಗು ಎದ್ದಿರುವ ಬೆನ್ನಲ್ಲೇ ಸಚಿವ ಸತೀಶ್ ಜಾರಕಿಹೊಳಿ ದಿಢೀರ್ ಮೈಸೂರಿಗೆ ಆಗಮಿಸಿದ್ದು, ಸಿಎಂ ಆಪ್ತ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಅವರನ್ನು ಭೇಟಿಯಾಗಿದ್ದಾರೆ. ಈ ಭೇಟಿ ರಾಜ್ಯ ರಾಜಕಾರಣದಲ್ಲಿ ಕೂತುಹಲ ಮೂಡಿಸಿದೆ.

ಇತ್ತೀಚಿಗಷ್ಟೇ ದೆಹಲಿಗೆ ತೆರಳಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕೇಂದ್ರ ಗೃಹ ಸಚಿವ ಜಿ.ಪರಮೇಶ್ವರ್ ಅವರನ್ನು ಸತೀಶ್ ಜಾರಕಿಹೊಳಿ ಭೇಟಿ ಮಾಡಿದ್ದರು. ದೆಹಲಿ ಭೇಟಿ ನಂತರ ರಾಜ್ಯ ನಾಯಕರುಗಳನ್ನು ಭೇಟಿ ಮಾಡಲಿದ್ದು, ಮೈಸೂರಿನಲ್ಲಿ ಮಹದೇವಪ್ಪ, ಶಾಸಕ ಹರೀಶ್ ಗೌಡ ಸೇರಿ ಹಲವು ಶಾಸಕರ ಭೇಟಿಗೆ ಸತೀಶ್ ಜಾರಕಿಹೊಳಿ ಮುಂದಾಗಿದ್ದಾರೆ. ದಿಢೀರ್ ಮೈಸೂರಿಗೆ ಆಗಮಿಸಿ ಭೇಟಿಯಾಗುತ್ತಿರುವುದು ರಾಜ್ಯ ರಾಜಕಾರಣದಲ್ಲಿ ಸಂಚಲನ ಮೂಡಿಸಿದೆ. ಸಿಎಂ ತವರು ಜಿಲ್ಲೆಯ ಶಾಸಕರನ್ನು ಸತೀಶ್ ಜಾರಕಿಹೊಳಿ ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾಗಿದ್ದಾರೆ ಎನ್ನುವುದನ್ನು ಈ ಭೇಟಿ ಎತ್ತಿಹಿಡಿಯುತ್ತದೆ. ಇಂದು ಪೂರ್ತಿ ದಿನ ಯಾವುದೇ ಅಧಿಕೃತ ಕಾರ್ಯಕ್ರಮ ಇಲ್ಲದೆ ನಾಯಕರ ಭೇಟಿಗೆ ಸಮಯವನ್ನು ಮೀಸಲಿಟ್ಟಿದ್ದಾರೆ.



ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅವರೇ ಸಿಎಂ ಆಗಿ ಇರುತ್ತಾರೆ. 5 ವರ್ಷ ಇರುತ್ತಾರೋ, 3 ವರ್ಷವೋ ಇರುತ್ತಾರೋ ಅದು ನನಗೆ ಗೊತ್ತಿಲ್ಲ. ನೀವು ಅದನ್ನ ಹೈ ಕಮಾಂಡ್‌ಗೆ ಕೇಳಬೇಕು. ಆದರೆ ಸಿದ್ದರಾಮಯ್ಯ ಅವರೇ ನಮ್ಮ ಮುಖ್ಯಮಂತ್ರಿಗಳು. ಇದರಲ್ಲಿ ಬೇರೆ ಯಾವುದೇ ಪ್ರಶ್ನೆ ಇಲ್ಲ. ನಾನು ಅವರ ಜೊತೆಯಲ್ಲಿ ಸಚಿವನಾಗಿ ಕೆಲಸ ಮಾಡುತ್ತೇನೆ. ಸಿಎಂ ಬದಲಾವಣೆ ಪ್ರಶ್ನೆಯೇ ಉದ್ಭವಿಸಿಲ್ಲ. ಆ ರೀತಿಯ ಯಾವುದೇ ಚರ್ಚೆಗಳೂ ನಡೆದಿಲ್ಲ. ವಿಪಕ್ಷಗಳು, ಮಾಧ್ಯಮಗಳು, ಚರ್ಚೆ ಮಾಡುತ್ತಿವೆ. ವಿಪಕ್ಷ ನಾಯಕರು ಪ್ರೀತಿಯಿಂದ ನಮ್ಮ ಹೆಸರು ಹೇಳುತ್ತಿದ್ದಾರೆ ಅಷ್ಟೇ. ಆದರೆ ನಮ್ಮ ಪಕ್ಷದಲ್ಲಿ ಯಾವುದೇ ರೀತಿಯ ಚರ್ಚೆ ನಡೆದಿಲ್ಲ. ನಾನು ಈ ವಿಚಾರವನ್ನು ಹಲವು ಬಾರಿ ಸ್ಪಷ್ಟ ಪಡಿಸಿದ್ದೇನೆ. ಅವರ ಬೆಂಬಲಿಗರು ಅವರ ನಾಯಕರಿಗೆ ಮುಂದಿನ ಸಿಎಂ ಎಂದು ಜೈಕಾರ ಹಾಕುವುದು ಸರ್ವೇ ಸಾಮಾನ್ಯ. ಅದನ್ನು ಇಟ್ಟುಕೊಂಡು ಏನೋ ಬದಲಾವಣೆ ಆಗುತ್ತದೆ ಎನ್ನುವುದು ಸರಿಯಲ್ಲ ಎಂದು ಹೇಳಿದರು.

ಡಿಕೆಶಿ ವಿಚಾರ, ಮತ್ತೊಬ್ಬರ ವಿಚಾರ ನನಗೆ ಹೇಳಲು ಆಗುವುದಿಲ್ಲ. ರಾಜಕಾರಣಿಗಳು ಸೇರಿದಾಗ ರಾಜಕಾರಣದ ಬಗ್ಗೆ ಚರ್ಚೆ ಮಾಡುತ್ತೇವೆ. ಅದರಲ್ಲಿ ವಿಶೇಷವೇನೂ ಇಲ್ಲ. ಇವತ್ತಿನ ಮೈಸೂರು ಭೇಟಿಯಲ್ಲಿ ಮಹತ್ತರ ವಿಚಾರವಿಲ್ಲ. ಇಡೀ ದಿನ ಮೈಸೂರಲ್ಲಿ ಓಡಾಡಿಕೊಂಡು ದಸರಾ ನೋಡುತ್ತೇನೆ ಅಷ್ಟೇ ಎಂದು ತಿಳಿಸಿದರು.

**ವಿಜಯೇಂದ್ರ, ಹಾಗೂ ಸತೀಶ್ ಜಾರಕಿಹೊಳಿ ಭೇಟಿ:** ಸೋಮವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಅವರ ಸರ್ಕಾರಿ ನಿವಾಸಕ್ಕೆ ತೆರಳಿ ಮಾತುಕತೆ ನಡೆಸಿದ್ದರು. ಈ ಸಂದರ್ಭದಲ್ಲಿ ಶಿಕಾರಿಪುರದಲ್ಲಿ ಹೊಸದಾಗಿ ನಿರ್ಮಾಣವಾಗಲಿರುವ ಕುಟ್ರಳ್ಳಿ ಟೋಲ್‌ನಿಂದ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಯ ಬಗ್ಗೆ ಚರ್ಚೆ ನಡೆಸಿದರು. ಭೇಟಿ ಬಳಿಕ ಮಾತನಾಡಿದ ವಿಜಯೇಂದ್ರ, ನಮ್ಮ ಕ್ಷೇತ್ರದ ಮುಖಂಡರೊಂದಿಗೆ ಸಚಿವರನ್ನು ಭೇಟಿ ಮಾಡಿದ್ದೇವೆ. ನಮ್ಮ ಜಿಲ್ಲೆಯಲ್ಲಿ ಎರಡು ಹೈವೇ ಟೋಲ್‌ಗಳು ಬಂದಿವೆ. ಇದರಿಂದ ಮೂರು ಜಿಲ್ಲೆಗಳ ಜನರಿಗೆ ಸಮಸ್ಯೆ, ಬಡವರಿಗೆ ತೊಂದರೆ ಆಗುತ್ತಿದೆ. ಟೋಲ್ ಸ್ಥಳಾಂತರ ಮಾಡುವಂತೆ ಒತ್ತಾಯಿಸಿದ್ದೇವೆ. ಸಚಿವರು ಅಧಿಕಾರಿಗಳ ಸಭೆ ಕರೆದು ಚರ್ಚಿಸುತ್ತೇನೆ ಎಂದಿದ್ದಾರೆ ಎಂದು ತಿಳಿಸಿದ್ದರು.

ಸದ್ಯ ಇಂದು ಸತೀಶ್ ಜಾರಕಿಹೊಳಿ ಅವರು ಸಿಎಂ ಆಪ್ತ ಸಚಿವ ಡಾ.ಎಚ್.ಸಿ ಮಹದೇವಪ್ಪ ಅವರನ್ನು ದಿಢೀರ್ ಭೇಟಿ ನೀಡುತ್ತಿರುವುದು ಕುತೂಹಲವನ್ನುಂಟುಮಾಡಿದೆ.

# ಪಕ್ಷದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆಯೇ ನಡೆದಿಲ್ಲ

**ಬೆಳಗಾವಿ:** ಮುಖ್ಯಮಂತ್ರಿ ಸ್ಥಾನಕ್ಕಾಗಿ ಯಾರ್ಯಾರು ಪ್ರಯತ್ನಿಸುತ್ತಿದ್ದಾರೋ ಅದು ಅವರ ವೈಯಕ್ತಿಕ ವಿಚಾರ ಬಿಟ್ಟರೆ. ಪಕ್ಷದ ಹಂತದಲ್ಲಿ ಯಾವುದೇ ರೀತಿ ಮುಖ್ಯಮಂತ್ರಿ ಬದಲಾವಣೆ ಇಲ್ಲವೇ ಇಲ್ಲ. ಹೈಕಮಾಂಡ್‌ನಿಂದ ಹಿಡಿದು ಎಲ್ಲರೂ ಸಿದ್ದರಾಮಯ್ಯ ಅವರ ಬೆನ್ನಿಗೆ ನಿಂತಿದ್ದೇವೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಅಭಿಪ್ರಾಯ ಪಟ್ಟರು.



ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕೈ ನಾಯಕರು ಭೇಟಿ ಆಗುತ್ತಿರುವ ವಿಚಾರಕ್ಕೆ ಕಿತ್ತೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ಅವರವರ ಪ್ರಯತ್ನ, ಆಸೆ. ಅದು ಅವರಿಗೆ ಬಿಟ್ಟಿದ್ದು. ಅದು ತಪ್ಪು ಏನೂ ಅಲ್ಲ. ಆದರೆ, ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ ಅವರು ಪಕ್ಷದ ಉನ್ನತ ಮಟ್ಟದಲ್ಲಿದ್ದಾರೆ. ಇವರೆಲ್ಲಾ ನಾವು ಸಿಎಂ ಬೆನ್ನಿಗೆ ನಿಂತಿದ್ದೇವೆ ಎಂದು ನಮಗೆ ಸ್ಪಷ್ಟವಾಗಿ ಹೇಳಿದ್ದಾರೆ. ಹಾಗಾಗಿ, ಸಿಎಂ ಬದಲಾವಣೆ ಎನ್ನುವುದು ಕೇವಲ ಊಹೆ ಮತ್ತು ಕಲ್ಪನೆ. ಕಾಂಗ್ರೆಸ್ ಹೈಕಮಾಂಡ್ ಸಿಎಂ ಜೊತೆಗಿದೆ. ಇದರಲ್ಲಿ ವ್ಯಯಕ್ತಿಕವಾಗಿ ನನಗೆ ನೂರಕ್ಕೆ ನೂರು ಭರವಸೆ ಇದೆ ಎಂದರು.

ಒಳ್ಳೆಯ ಕೆಲಸಗಾರ ಎಂದು ಗುರುತಿಸಿಕೊಂಡಿರುವ ತಮ್ಮ ಹೆಸರು ಸಿಎಂ ರೇಸ್‌ನಲ್ಲಿ ಬರಬಹುದಾ ಎಂಬ ಪ್ರಶ್ನೆಗೆ ಜನ ನನ್ನ ಆರು ಬಾರಿ ಶಾಸಕರನ್ನಾಗಿ ಆಯ್ಕೆ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷ ಮೂರು ಬಾರಿ ಮಂತ್ರಿ ಮಾಡಿದೆ. ನನ್ನ ತಂದೆ ತಾಯಿ ಪುಣ್ಯ ನನಗೆ ಸಿಕ್ಕಿದೆ. ಇದಕ್ಕಿಂತ ಇನ್ನೇನು ನನಗೆ ಬೇಕು. ಐದು ವರ್ಷ ಕೃಷಿ ಮಂತ್ರಿಯಾಗಿದ್ದೆ. ಪಂಚಾಯತರಾಜ್ ಇಲಾಖೆ ನಿರ್ವಹಿಸಿದ್ದೇನೆ. ಈಗ ಕಂದಾಯ ಸಚಿವನಾಗಿದ್ದೇನೆ. ಕೈ ತುಂಬಾ ಕೆಲಸ ಇದೆ. ದಿನದ 24 ಗಂಟೆ ಅಲ್ಲ, 48 ಗಂಟೆ ಇದ್ದರೂ ಸಾಕಾಗುವುದಿಲ್ಲ. ಇರುವುದರಲ್ಲಿ ಜನರಿಗೆ ಒಳ್ಳೆಯ ಕೆಲಸ ಮಾಡಿದರೆ ಅದೇ ನನಗೆ ಸೌಭಾಗ್ಯ. ಎಐಸಿಸಿ ಅಧ್ಯಕ್ಷರು, ಸಿಎಂ ಸೇರಿ ಎಲ್ಲರಿಂದ ಒಳ್ಳೆಯ ಗೌರವ ಸಿಕ್ಕಿದೆ. ಏನೆಲ್ಲಾ ಸಿಗಬೇಕೋ ಅದೆಲ್ಲವೂ ಸಿಕ್ಕಿದೆ. ಹಾಗಾಗಿ, ಏನೋ ಗೊಂದಲ ಎನ್ನುತ್ತಿದ್ದಿರಿ. ಆದರೆ, ನಾನು ಎಲ್ಲಾ ಕಡೆ ಓಡಾಡಿ ಕೆಲಸ ಮಾಡುತ್ತಿದ್ದೇನೆ ಎಂದು ಸಮರ್ಥಿಸಿಕೊಂಡರು.

ಹರಿಯಾಣ ಮತ್ತು ಜಮ್ಮುವಿನಲ್ಲಿ ಕಾಂಗ್ರೆಸ್ ನೇತೃತ್ವದ ಘಟಬಂಧನ್‌ಗೆ ಬಹುಮತ ಸಿಕ್ಕಿರೋದು ಸಂತೋಷದ ವಿಷಯ. ರಾಹುಲ್ ಗಾಂಧಿ ಹಾಗೂ ಖರ್ಗೆಯವರಿಗೆ ಅಭಿನಂದನೆಗಳು. ಅವರ ನೇತೃತ್ವದಲ್ಲಿ ಹೋರಾಟ ನಡೆದು ಬಂದಿದೆ. ದೇಶದಲ್ಲಿ ಕೆಲವೇ ಕೆಲವು ಶ್ರೀಮಂತರಿಗೆ ಅನುಕೂಲ ಆದರೆ ಸಾಲದು. ಜನಸಾಮಾನ್ಯರಿಗೆ ಅನುಕೂಲ ಆಗಬೇಕು. ದೇಶದಲ್ಲಿ ಉದ್ಯೋಗ ಪರಿಸ್ಥಿತಿ ಬಿಗಡಾಯಿಸುತ್ತಿದೆ. ಬಡವರು ಬಡವರಾಗಿಯೇ ಉಳಿದಿದ್ದಾರೆ. ನಿರುದ್ಯೋಗ ಸಮಸ್ಯೆ ಹೆಚ್ಚಾಗುತ್ತಿದೆ ಇದರ ವಿರುದ್ಧ ರಾಹುಲ್ ಗಾಂಧಿ ಹೋರಾಟ ನಡೆಸಿದ್ದರು. ಕಳೆದ ಲೋಕಸಭೆ ಚುನಾವಣೆಯಲ್ಲೂ ಸಹ ಕಾಂಗ್ರೆಸ್ ಮಿತ್ರ ಪಕ್ಷಗಳಿಗೆ ನೀಡಿವೆ. ಅದಕ್ಕಿಂತಲೂ ಹೆಚ್ಚಿನ ಬೆಂಬಲ ಈ ಚುನಾಚಣೆಯಲ್ಲಿ ದೊರೆತಿದೆ. ದೇಶದಲ್ಲಿ ಬದಲಾವಣೆ ಗಾಳಿ ಬೀಸ್ತಿರೋದು ಬಲ ಆಗ್ತಿರೋದಕ್ಕೆ ಇದು ಸಾಕ್ಷಿ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com